ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೫೪

**ಪಟ್ಟಿ – ೦೧**

# ಕರ್ನಾಟಕ ವಿಧಾನಸಭೆ

ಹದಿನೈದನೇ ವಿಧಾನಸಭೆ
ಎಂಟನೇ ಅಧಿವೇಶನ

ಸೋಮವಾರ, ದಿನಾಂಕ : ೦೭ನೇ ಡಿಸೆಂಬರ್, ೨೦೨೦

---

## ಸಮೂಹ – 'ಅ–A'

೧. ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು.

೨. ಮಾನ್ಯ ಕಂದಾಯ ಸಚಿವರು.

೩. ಮಾನ್ಯ ವಸತಿ ಸಚಿವರು.

೪. ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು.

೫. ಮಾನ್ಯ ಕೃಷಿ ಸಚಿವರು.

---

## ಮತದಾರರ ಗುರುತಿನ ಚೀಟಿಗಳು

**ಶ್ರೀ ಅಬ್ಬಯ್ಯ ಪ್ರಸಾದ್ (ಹುಬ್ಬಳ್ಳಿ-ಧಾರವಾಡ ಪೂರ್ವ) :-**

೧ (೨೪೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹೊಸದಾಗಿ ಮತದಾರರಿಗೆ ಗುರುತಿನ ಚೀಟಿ ವಿಸ್ತರಣೆ ಮಾಡುವ ಸಮಸ್ಯೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಕೈಗೊಂಡ ಕ್ರಮವೇನು ? (ವಿವರ ನೀಡುವುದು)

## ಮನೆಗಳ ಮಂಜೂರಾತಿ

**ಶ್ರೀ ಅಬ್ಬಯ್ಯ ಪ್ರಸಾದ್ (ಹುಬ್ಬಳ್ಳಿ-ಧಾರವಾಡ ಪೂರ್ವ) :-**

೨ (೨೪೯) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಮೂರು ವರ್ಷಗಳಲ್ಲಿ ಹುಬ್ಬಳ್ಳಿ-ಧಾರವಾಡ ವಾಜಪೇಯಿ ವಸತಿ ಯೋಜನೆಯಲ್ಲಿ ಮಂಜೂರಾದ ಮನೆಗಳನ್ನು ನಿರ್ಮಾಣ ಮಾಡಲು ಇಲ್ಲಿಯವರೆಗೆ ಅನುದಾನ ಬಿಡುಗಡೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕೈಗೊಂಡ ಕ್ರಮವೇನು ; (ಫಲಾನುಭವಿವಾರು ವಿವರ ನೀಡುವುದು)

(ಆ) ೨೦೨೦-೨೧ನೇ ಸಾಲಿನಲ್ಲಿ ಹುಬ್ಬಳ್ಳಿ-ಧಾರವಾಡ ಪೂರ್ವ ವಿಧಾನಸಭಾ ಮತಕ್ಷೇತ್ರದಲ್ಲಿ ವಸತಿ ಇಲಾಖೆಯಿಂದ ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಯೋಜನೆಯಲ್ಲಿ ಕೈಗೊಂಡ ಕಾಮಗಾರಿಗಳು ಯಾವುವು ;

(ಇ) ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆ ಪ್ರಧಾನ ಮಂತ್ರಿ ಆವಾಸ್ ಯೋಜನೆ (ನಗರ)ಯಲ್ಲಿ ಎಷ್ಟು ಫಲಾನುಭವಿಗಳಿಗೆ ಅನುದಾನ ಮಂಜೂರು ಮಾಡಲಾಗಿದೆ ;

(ಈ) ಹಾಗಿದ್ದಲ್ಲಿ, ಎಷ್ಟು ಫಲಾನುಭವಿಗಳಿಗೆ ಅನುದಾನ ಮಂಜೂರು ಮಾಡಲಾಗಿದೆ ? (ಫಲಾನುಭವಿಗಳವಾರು ವಿವರ ನೀಡುವುದು)

## ತಂತ್ರಾಂಶದಲ್ಲಿ ಅಳವಡಿಸುವ ಸೌಲಭ್ಯಗಳು

**ಶ್ರೀ ಅಭಯ್ ಪಾಟೀಲ್ (ಬೆಳಗಾವಿ ದಕ್ಷಿಣ) :–**

೩ (೨೨) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅತಿವೃಷ್ಟಿಯಿಂದ ಹಾನಿಗೊಳಗಾದ ಮನೆಯ ಮಾಲೀಕರು ನಿಗಮದ ಸೌಲಭ್ಯವನ್ನು ಪಡೆದು, ಮನೆಯನ್ನು ನಿರ್ಮಿಸುವ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ/ನಗರಪಾಲಿಕೆ/ಪುರಸಭೆಯಿಂದ ಪರವಾನಿಗೆಯನ್ನು ಪಡೆಯುವ ಅವಶ್ಯಕತೆ ಇದೆಯೇ ; ಇದ್ದಲ್ಲಿ, ಸಂಬಂಧಪಟ್ಟ ಪ್ರಾಧಿಕಾರಕ್ಕೆ ಅಭಿವೃದ್ಧಿ ಶುಲ್ಕವನ್ನು ಭರಿಸಬೇಕೆ ; ಇಲ್ಲವಾದಲ್ಲಿ, ಕೆಲವು ಪ್ರಾಧಿಕಾರಗಳು ಶುಲ್ಕವನ್ನು ಭರಿಸಿಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅವು ಯಾವುವು ; ಅದರ ತಡೆಗೆ ನಿಗಮವು ಕೈಗೊಳ್ಳುವ ಕ್ರಮಗಳೇನು ; (ವಿವರ ನೀಡುವುದು)

(ಆ) ರಾಜೀವಗಾಂಧಿ ವಸತಿ ನಿಗಮದಲ್ಲಿ ವಿವಿಧ ಯೋಜನೆಗಳು ಹಾಗೂ ಅರ್ಹತೆ/ಮಾನದಂಡಗಳೇನು ; (ವಿವರ ನೀಡುವುದು)

(ಇ) ಬೆಳಗಾವಿ ಜಿಲ್ಲೆಯಲ್ಲಿ ೦೧-೦೧-೨೦೧೮ ರಿಂದ ૩૦-೧೧-೨೦೨೦ರ ವರೆಗಿನ ಅವಧಿಯಲ್ಲಿ ರಾಜೀವಗಾಂಧಿ ವಸತಿ ನಿಗಮದ ವತಿಯಿಂದ ವಿವಿಧ ಯೋಜನೆಗಳಲ್ಲಿ ಸೌಲಭ್ಯಗಳನ್ನು ಪಡೆದ ಫಲಾನುಭವಿಗಳೆಷ್ಟು ; (ಮತಕ್ಷೇತ್ರವಾರು, ವರ್ಷವಾರು, ಯೋಜನಾವಾರು, ಹೆಸರು, ವಿಳಾಸ ಮತ್ತು ದೂರವಾಣಿ ಸಂಖ್ಯೆಗಳ ವಿವರ ನೀಡುವುದು)

(ಈ) ೨೦೧೯-೨೦ ಹಾಗೂ ೨೦೨೦-೨೧ನೇ ಸಾಲಿನಲ್ಲಿ ಅತಿವೃಷ್ಟಿಯಿಂದ ಹಾನಿಗೊಳಗಾದ ಫಲಾನುಭವಿಗಳಿಗೆ ಒದಗಿಸುವ ಅನುದಾನವೆಷ್ಟು ಹಾಗೂ ಸೌಲಭ್ಯಗಳಾವುವು ; (ಮತಕ್ಷೇತ್ರವಾರು, ಎ.ಬಿ.ಸಿ. ವರ್ಗವಾರು ವರ್ಷವಾರು ವಿವರ ನೀಡುವುದು)

(ಉ) ಹಾನಿಗೊಳಗಾಗಿರುವ ಮನೆಗಳನ್ನು ತಂತ್ರಾಂಶದಲ್ಲಿ ಅಳವಡಿಸುವ ಅವಕಾಶವನ್ನು ತಡೆಹಿಡಿದಿರುವುದರಿಂದ ಬಹಳಷ್ಟು ಅರ್ಹ ಫಲಾನುಭವಿಗಳು ಸೌಲಭ್ಯದಿಂದ ವಂಚಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಬೆಳಗಾವಿ ದಕ್ಷಿಣ ಮತಕ್ಷೇತ್ರದಲ್ಲಿ ತಂತ್ರಾಂಶದಲ್ಲಿ ಅಳವಡಿಸದೇ ಇರುವ ಪ್ರಕರಣಗಳನ್ನು ತಂತ್ರಾಂಶದಲ್ಲಿ ಅಳವಡಿಸಲು ನಿಗಮವು ಅವಕಾಶ ನೀಡುವುದು ? (ವಿವರ ನೀಡುವುದು)

## ಪಿಂಚಣಿ ಸೌಲಭ್ಯ

**ಶ್ರೀ ಅಭಯ್ ಪಾಟೀಲ್ (ಬೆಳಗಾವಿ ದಕ್ಷಿಣ) :-**

೪ (೨೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಳಗಾವಿ ತಾಲ್ಲೂಕಿನಲ್ಲಿ ದಿನಾಂಕ : ೦೧-೦೪-೨೦೧೮ ರಿಂದ ದಿನಾಂಕ : ೩೦-೧೧-೨೦೨೦ರ ವರೆಗಿನ ಅವಧಿಯಲ್ಲಿ ಸಾಮಾಜಿಕ ಪಿಂಚಣಿ ಯೋಜನೆಯ ಸೌಲಭ್ಯಕ್ಕಾಗಿ ಸಲ್ಲಿಸಿರುವ ಮನವಿಗಳೆಷ್ಟು ; ಅವುಗಳಲ್ಲಿ ಮಂಜೂರಾಗಿರುವ ಮತ್ತು ತಿರಸ್ಕೃತಗೊಂಡಿರುವ ಫಲಾನುಭವಿಗಳೆಷ್ಟು ; (ಫಲಾನುಭವಿಗಳ ಹೆಸರು. ಮನೆ ನಂ. ವಿಳಾಸಗಳ ಮತಕ್ಷೇತ್ರವಾರು, ಯೋಜನಾವಾರು. ತಿಂಗಳವಾರು ವಿವರ ನೀಡುವುದು)

(ಆ) ಈ ತಾಲ್ಲೂಕಿನಲ್ಲಿ ದಿನಾಂಕ :೦೧-೦೧-೨೦೨೦ ರಿಂದ ವಿವಿಧ ಯೋಜನೆಗಳಲ್ಲಿ ಪಿಂಚಣಿಯನ್ನು ಪಡೆಯುತ್ತಿರುವ ಅರ್ಹ ಫಲಾನುಭವಿಗಳಿಗೆ ಪಿಂಚಣಿಯು ದೊರೆಯದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು ; (ವಿವರ ನೀಡುವುದು)

(ಇ) ಆ ಪೈಕಿ ಯಾವ ಫಲಾನುಭವಿಗಳು ಆಧಾರ್‌ಕಾರ್ಡ್/ಬ್ಯಾಂಕ್ ಪಾಸ್‌ಬುಕ್/ಭಾವಚಿತ್ರಗಳನ್ನು ಅಳವಡಿಸಬೇಕಾಗಿದೆ ಹಾಗೂ ದಾಖಲೆಗಳನ್ನು ತಹಶೀಲ್ದಾರರ ಕಛೇರಿಯಿಂದ ತಂತ್ರಾಂಶದಲ್ಲಿ ಅಳವಡಿಸಿದಾಗ್ಯೂ ಕೂಡಾ ಈವರೆಗೆ ಪಿಂಚಣಿ ಪಾವತಿಯಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವಾಗ ಹಣ ಪಾವತಿಯಾಗಲಿದೆ ; (ಫಲಾನುಭವಿಗಳ ವಿವರ ನೀಡುವುದು)

(ಈ) ವಿವಿಧ ತಾಂತ್ರಿಕ ಅಡೆತಡೆಗಳನ್ನು ಸರಿಪಡಿಸುವ ಕುರಿತು ಪಿಂಚಣಿ ಮುಖ್ಯ ಕಛೇರಿಯಲ್ಲಿ ಬೆಳಗಾವಿ ತಾಲ್ಲೂಕಿನಲ್ಲಿ ಬಾಕಿ ಇರುವ ಅರ್ಜಿಗಳೆಷ್ಟು ? (ಫಲಾನುಭವಿಗಳ ಹೆಸರು, ವಿಳಾಸ, ಪಿಂಚಣಿಯ ಮತಕ್ಷೇತ್ರವಾರು ವಿವರ ನೀಡುವುದು)

# ಫೋಡಿ ಮುಕ್ತ ಗ್ರಾಮದ ಯೋಜನೆ

**ಶ್ರೀ ಅಭಯ್ ಪಾಟೀಲ್ (ಬೆಳಗಾವಿ ದಕ್ಷಿಣ) :-**

೫ (೨೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) "ಫೋಡಿ ಮುಕ್ತ ಗ್ರಾಮ" ಮಾಡುವ ಯೋಜನೆಯು ಜಾರಿಯಲ್ಲಿದೆಯೇ ; ಇದ್ದಲ್ಲಿ, ೨೦೧೮-೧೯ ರಿಂದ ೨೦೨೦-೨೧ನೇ ಸಾಲಿನ ಅವಧಿಯಲ್ಲಿ ಬೆಳಗಾವಿ ತಾಲ್ಲೂಕಿನ ಯಾವ ಯಾವ ಗ್ರಾಮಗಳಲ್ಲಿ ಈ ಯೋಜನೆಯನ್ನು ಜಾರಿಗೊಳಿಸಲಾಗಿದೆ ;

(ಆ) ಈ ತಾಲ್ಲೂಕಿನ ವ್ಯಾಪ್ತಿಯಲ್ಲಿ ದಿನಾಂಕ : ೦೧-೦೧-೨೦೧೮ ರಿಂದ ೩೦-೧೧-೨೦೨೦ರ ವರೆಗೆ ಮೋಜಣಿಯ ಸಲುವಾಗಿ ಬಂದಿರುವ ಅರ್ಜಿಗಳು ಎಷ್ಟು ; (ಸರ್ವೆ ನಂ., ಹೆಸರು, ವಿಸ್ತೀರ್ಣಗಳ ಸಂಪೂರ್ಣವಾದ ಮತಕ್ಷೇತ್ರವಾರು, ವರ್ಷವಾರು ವಿವರಗಳನ್ನು ನೀಡುವುದು)

(ಇ) ಈ ತಾಲ್ಲೂಕಿನ ವ್ಯಾಪ್ತಿಯಲ್ಲಿ ಕೆಜೆಪಿ, ೧೧ಇ ಹಾಗೂ ಫೋಡಿ ಮಾಡುವ ಸಲುವಾಗಿ ಮೇಲಿನ ಅವಧಿಯಲ್ಲಿ ಸಲ್ಲಿಸಿದ ಅರ್ಜಿಗಳ ಸಂಖ್ಯೆ ಎಷ್ಟು : ಅವುಗಳ ವಿಲೇವಾರಿಯಲ್ಲಿ ಆಗುತ್ತಿರುವ ವಿಳಂಬದಿಂದ ಸಾರ್ವಜನಿಕರು ತೊಂದರೆಯನ್ನು ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸುಧಾರಣೆಗೆ ಕೈಗೊಳ್ಳುವ ಕ್ರಮಗಳೇನು ; (ಅರ್ಜಿ ದಿನಾಂಕ, ಸರ್ವೆ ನಂಬರ್, ಹೆಸರು, ವಿಸ್ತೀರ್ಣ, ಕ್ರಮಕೈಗೊಂಡ ದಿನಾಂಕ, ಸಂಪೂರ್ಣವಾದ ವಿವರಗಳನ್ನು ಮತಕ್ಷೇತ್ರವಾರು, ವರ್ಷವಾರು ನೀಡುವುದು)

(ಈ) ಮೋಜಣಿಗಾಗಿ, ಕೆಜೆಪಿ ೧೧ ಇ ಹಾಗೂ ಪೋಡಿಗಾಗಿ ಬಾಕಿ ಇರುವ ಪ್ರಕರಣಗಳು ಎಷ್ಟು ; ಎಷ್ಟು ದಿನಗಳಿಂದ ಬಾಕಿ ಇರುತ್ತವೆ ; ವಿಳಂಬಕ್ಕೆ ಕಾರಣಗಳೇನು ; (ಅರ್ಜಿ ದಿನಾಂಕ, ಸರ್ವೆ ನಂಬರ್, ಹೆಸರು, ವಿಸ್ತೀರ್ಣ, ಕ್ರಮಕೈಗೊಂಡ ದಿನಾಂಕ, ಸಂಪೂರ್ಣವಾದ ವಿವರಗಳನ್ನು ಮತಕ್ಷೇತ್ರವಾರು, ವರ್ಷವಾರು ನೀಡುವುದು)

(ಉ) ಅವುಗಳನ್ನು ಇತ್ಯರ್ಥಗೊಳಿಸುವ ಉದ್ದೇಶವು ಸರ್ಕಾರಕ್ಕೆ ಇದೆಯೇ ; ಇದ್ದಲ್ಲಿ, ಯಾವಾಗ ಇತ್ಯರ್ಥಗೊಳಿಸಲಾಗುವುದು;

(ಊ) ಸಾರ್ವಜನಿಕ ಹಾಗೂ ರೈತ ಬಾಂಧವರುಗಳ ಹಿತದೃಷ್ಟಿಯಿಂದ ಸರ್ಕಾರವು ಹೊಸ ಯೋಜನೆಗಳನ್ನೇನಾದರೂ ಆರಂಭಿಸಿದೆಯೇ ; ಹಾಗಿದ್ದಲ್ಲಿ, ಅವು ಯಾವುವು ; ಅವುಗಳ ಮಾನದಂಡಗಳೇನು ? (ವಿವರ ನೀಡುವುದು)

## ಪರಿಹಾರ ನೀಡುವುದು

**ಶ್ರೀ ಅಭಯ್ ಪಾಟೀಲ್ (ಬೆಳಗಾವಿ ದಕ್ಷಿಣ) :-**

೬ (೨೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೧೯-೨೦ ಹಾಗೂ ೨೦೨೦-೨೧ನೇ ಸಾಲಿನ ಅತಿವೃಷ್ಟಿಯಲ್ಲಿ ಬೆಳಗಾವಿ ಜಿಲ್ಲೆಯಲ್ಲಿ ಆಗಿರುವ ವಿವಿಧ ಬಗೆಯ ಹಾನಿಗಳಾವುವು ; (ಮನೆಗಳಿಗೆ ನೀರು ಹೋಗಿರುವುದು ಹಾಗೂ ಎ, ಬಿ, ಸಿ ವರ್ಗವಾರು ಆಸ್ತಿಗಳು ಹಾನಿಗೊಳಗಾಗಿರುವ ವಿವರಗಳನ್ನು ಮತಕ್ಷೇತ್ರವಾರು, ವರ್ಷವಾರು ಫಲಾನುಭವಿಗಳ ಹೆಸರು, ವಿಳಾಸ ವಿವರಗಳನ್ನು ನೀಡುವುದು)

(ಆ) ಬೆಳಗಾವಿ ದಕ್ಷಿಣ ಮತಕ್ಷೇತ್ರದಲ್ಲಿ ವಿವಿಧ ಬಗೆಯ ಹಾನಿಯನ್ನು ಅನುಭವಿಸಿದ ಫಲಾನುಭವಿಗಳು ಸಲ್ಲಿಸಿರುವ ಮನವಿಗಳೆಷ್ಟು ; ಅವುಗಳಲ್ಲಿ ಮನೆಗಳಿಗೆ ನೀರು ಹೋಗಿರುವುದು ಹಾಗೂ ಎ,ಬಿ, ಸಿ ವರ್ಗವಾರು ವಿಂಗಡಣೆಯಾಗಿರುವುದೆಷ್ಟು ; (ವಾರ್ಡ್‌ವಾರು, ಗ್ರಾಮಗಳವಾರು ಹೆಸರು, ಮನೆ ನಂಬರ್, ಪೂರ್ಣ ವಿಳಾಸ, ದೂರವಾಣಿ ಸಂಖ್ಯೆಗಳ ಮಾಹಿತಿಯನ್ನು ನೀಡುವುದು)

(ಇ) ಕ್ಷೇತ್ರದಲ್ಲಿ ವಿವಿಧ ಬಗೆಯ ಹಾನಿ ಅನುಭವಿಸಿದ ಫಲಾನುಭವಿಗಳಿಗೆ ಈವರೆಗೆ ಸರ್ಕಾರದಿಂದ ಮಂಜೂರಾದ/ಬಿಡುಗಡೆ ಮಾಡಲಾಗಿರುವ ಅನುದಾನ ಎಷ್ಟು ; ಪಾವತಿಸಬೇಕಾಗಿರುವ ಅನುದಾನವೆಷ್ಟು : (ಫಲಾನುಭವಿಗಳ ಹೆಸರು, ಮನೆ ನಂಬರ್ ಪೂರ್ಣ ವಿಳಾಸಗಳ ಮಾಹಿತಿ ನೀಡುವುದು)

(ಈ) ಈ ತಾಲ್ಲೂಕಿನಲ್ಲಿ ಹಾನಿಯುನ್ನು ಅನುಭವಿಸಿದ ಬಹಳಷ್ಟು ಫಲಾನುಭವಿಗಳ ಮನವಿಗಳನ್ನು ತಂತ್ರಾಂಶದಲ್ಲಿ ಅಳವಡಿಸಲು ವಿಳಂಬವಾಗಿರುವುದರಿಂದ ಪರಿಹಾರ ದೊರೆಯದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಪರಿಹಾರ ಪಾವತಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ; (ಫಲಾನುಭವಿಗಳ ಹೆಸರು ಪೂರ್ಣ ವಿಳಾಸಗಳನ್ನು ನೀಡುವುದು)

(ಉ) ಫಲಾನುಭವಿಗಳ ಹೆಸರು ಮತ್ತು ಹಾನಿಯು ವಿವರಗಳನ್ನು ತಂತ್ರಾಂಶದಲ್ಲಿ ಅಳವಡಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ ; ಇದ್ದಲ್ಲಿ, ಯಾವ ಕಾಲಮಿತಿಯುಲ್ಲಿ ಪರಿಹಾರ ಮೊತ್ತ ಪಾವತಿಸಲಾಗುವುದು ?

## ಗೌರವಧನ ಹಾಗೂ ಪಿಂಚಣಿ ಯೋಜನೆ

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಯಲಬುರ್ಗ) :-**

೭ (೧೮೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ ಮೂರು ವರ್ಷಗಳಲ್ಲಿ ಸ್ವಾತಂತ್ರ್ಯ ಹೋರಾಟಗಾರರ ಗೌರವಧನ ಹಾಗೂ ಅವರ ಕುಟುಂಬಕ್ಕೆ ನೀಡಲಾಗುವ ಪಿಂಚಣಿ ಯೋಜನೆಯಡಿ ಮಂಜೂರಾತಿ ಕೋರಿ ಸ್ವೀಕೃತವಾದ ಅರ್ಜಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಸದರಿ ಅರ್ಜಿಗಳಲ್ಲಿ ಇತ್ಯರ್ಥವಾದ ಹಾಗೂ ಬಾಕಿ ಉಳಿದಿರುವ ಪ್ರಕರಣಗಳ ಸಂಖ್ಯೆ ಎಷ್ಟು ;

(ಇ) ಸದರಿ ಬಾಕಿ ಇರುವ ಅರ್ಜಿಗಳ ಇತ್ಯರ್ಥಕ್ಕೆ ಅಡೆತಡೆಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಮೀನುಗಾರಿಕೆ

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಯಲಬುರ್ಗ) :-**

೮ (೧೮೨) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೊಪ್ಪಳ ಜಿಲ್ಲೆಯಲ್ಲಿ ಮೀನುಗಾರಿಕೆ ಕೃಷಿಯನ್ನು ಪ್ರೋತ್ಸಾಹಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ; (ಕಾರ್ಯಕ್ರಮಗಳವಾರು ವಿವರ ನೀಡುವುದು)

(ಆ) ಮತ್ಸ್ಯಾಶ್ರಯ ಯೋಜನೆಯಡಿ ಫಲಾನುಭವಿಗಳಿಗಾಗಿ ನಿಗದಿಪಡಿಸಿರುವ ಗುರಿ ಎಷ್ಟು ;

(ಇ) ೨೦೧೮-೧೯ನೇ ಸಾಲಿನಿಂದ ಪ್ರಸಕ್ತ ಸಾಲಿನವರೆಗೂ ಸದರಿ ಯೋಜನೆಯಡಿ ಸ್ವೀಕೃತವಾದ ಅರ್ಜಿಗಳ ಸಂಖ್ಯೆ ಎಷ್ಟು ; ಸ್ವೀಕೃತವಾದ ಅರ್ಜಿಗಳಲ್ಲಿ ಮಂಜೂರಾತಿ ನೀಡಲಾದ ಫಲಾನುಭವಿಗಳ ಸಂಖ್ಯೆ ಎಷ್ಟು ? (ತಾಲ್ಲೂಕುವಾರು ವಿವರ ನೀಡುವುದು)

## ವಸತಿ ಯೋಜನೆ

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಯಲಬುರ್ಗ) :-**

೯ (೧೮೪) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೊಪ್ಪಳ ಜಿಲ್ಲೆಯ ಯಲಬುರ್ಗಾ ವಿಧಾನಸಭಾ ಕ್ಷೇತ್ರದಲ್ಲಿ ವಿವಿಧ ವಸತಿ ಯೋಜನೆಗಳಡಿಯಲ್ಲಿ ಆಯ್ಕೆ ಮಾಡಲಾದ ಫಲಾನುಭವಿಗಳ ಸಂಖ್ಯೆ ಎಷ್ಟು ; (ಯೋಜನೆಗಳವಾರು, ಕಳೆದ ಮೂರು ವರ್ಷಗಳ ಮಾಹಿತಿಯನ್ನು ನೀಡುವುದು)

(ಆ) ಸದರಿ ಫಲಾನುಭವಿಗಳಿಗೆ ವಸತಿ ಯೋಜನೆಯನುಸಾರ ಕಟ್ಟಡಗಳ ಪೆಂಡಿಂಗ್ ಬಿಲ್ಲುಗಳ ಮೊತ್ತವನ್ನು ಪಾವತಿಸಲಾಗಿದೆಯೇ ;

(ಇ) ಹಾಗಿಲ್ಲದಿದ್ದಲ್ಲಿ, ಪಾವತಿಗಾಗಿ ಬಾಕಿ ಇರುವ ಪ್ರಕರಣಗಳ ಸಂಖ್ಯೆ ಎಷ್ಟು ; (ಯೋಜನೆಗಳವಾರು ವಿವರ ನೀಡುವುದು)

(ಈ) ಸದರಿ ಪೆಂಡಿಂಗ್ ಬಿಲ್ಲುಗಳನ್ನು ಪೂರ್ಣ ಪ್ರಮಾಣದಲ್ಲಿ ಫಲಾನುಭವಿಗಳಿಗೆ ಪಾವತಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

# ಸರ್ಕಾರಿ ನೌಕರರಿಗೆ ಪದೋನ್ನತಿ

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಯಲಬುರ್ಗ) :-**

೧೦ (೧೮೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲ್ಯಾಣ ಕರ್ನಾಟಕ ಭಾಗದ ವಿಭಾಗ ಮಟ್ಟದಲ್ಲಿ ಸರ್ಕಾರಿ ನೌಕರರ ಶೇ. ೮೦ ಪದೋನ್ನತಿಯಿಂದ ಮುಂಬಡ್ತಿಯಲ್ಲಿ ಅನ್ಯಾಯವಾಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯದಲ್ಲಿ ಸರ್ಕಾರಿ ನೌಕರರಿಗೆ ಜಿಲ್ಲಾ ಮಟ್ಟದಲ್ಲಿ ಹಾಗೂ ಪ್ರಾದೇಶಿಕ ಮಟ್ಟದಲ್ಲಿ ಪದೋನ್ನತಿಯಲ್ಲಿ ಕಲ್ಯಾಣ ಕರ್ನಾಟಕ ಭಾಗದವರನ್ನು ಹೊರತುಪಡಿಸಿ ಇತರೆ ವಿಭಾಗಗಳಲ್ಲಿ ನೀಡುತ್ತಿರುವ ಮೀಸಲಾತಿ ಪ್ರಮಾಣ ಎಷ್ಟು ; (ವಿವರ ನೀಡುವುದು)

(ಇ) ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಸರ್ಕಾರಿ ನೌಕರರ ಪದೋನ್ನತಿಯಲ್ಲಿ ಇತರೆ ವೃಂದದಲ್ಲಿ ಈಗಾಗಲೇ ಪದೋನ್ನತಿಯನ್ನು ಪಡೆದ ನೌಕರರ ಸಂಖ್ಯೆ ಎಷ್ಟು ; ಜ್ಯೇಷ್ಠತಾ ಪಟ್ಟಿಯಾನುಸಾರ ಇವರಿಗಿಂತಲೂ ಮೇಲಿರುವ ಹಾಗೂ ಪದೋನ್ನತಿಯಿಂದ ವಂಚಿತರಾಗಿರುವ ಹಿರಿಯ ನೌಕರರ ಸಂಖ್ಯೆ ಎಷ್ಟು ;

(ಈ) ಇದರಿಂದಾಗಿ ಸರ್ಕಾರ ನೌಕರರು ತಮಗಿಂತ ಕಿರಿಯ ಸ್ಥಳೀಯೇತರ (ಕಲ್ಯಾಣ ಕರ್ನಾಟಕ ಭಾಗದವರನ್ನು ಹೊರತುಪಡಿಸಿ) ನೌಕರರ ಅಧೀನದಲ್ಲಿ ಕರ್ತವ್ಯ ನಿರ್ವಹಿಸುವ ಅನಿವಾರ್ಯತೆ ಸೃಷ್ಟಿಯಾಗಿದ್ದು, ಜ್ಯೇಷ್ಠತೆಯಲ್ಲಿ ತಮಗಿಂತ ಕಿರಿಯ ನೌಕರರ ಅಧೀನದಲ್ಲಿ ಕಾರ್ಯನಿರ್ವಹಣೆ ಮಾಡುವುದು ಅವರ ಕಾರ್ಯಕ್ಷಮತೆ ಮೇಲೆ ಪರಿಣಾಮ ಬೀರುತ್ತಿದ್ದು, ಈ ಅಸಮತೋಲನವನ್ನು ಸರಿದೂಗಿಸಲು ಸರ್ಕಾರ ರೂಪಿಸಿರುವ ಯೋಜನೆಗಳಾವುವು ?

# ಪ್ರವಾಹ ಪೀಡಿತ ಪ್ರದೇಶಗಳ ಘೋಷಣೆ

**ಶ್ರೀ ಐಹೊಳೆ ಡಿ. ಮಹಾಲಿಂಗಪ್ಪ (ರಾಯಭಾಗ) :–**

೧೧ (೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ೨೦೧೯–೨೦ನೇ ಸಾಲಿನ ಆಗಸ್ಟ್ ಮತ್ತು ಸೆಪ್ಟೆಂಬರ್ ಮಾಹೆಯಲ್ಲಿ ಉಂಟಾದ ಅತೀವೃಷ್ಟಿಯಿಂದಾಗಿ ಪ್ರವಾಹಕ್ಕೆ ತುತ್ತಾದ ಜಿಲ್ಲಾ ಮತ್ತು ತಾಲ್ಲೂಕುಗಳ ವಿವರಗಳೇನು ; (ಸಂಪೂರ್ಣ ವಿವರ ನೀಡುವುದು)

(ಆ) ಈ ಪೈಕಿ ಎಷ್ಟು ತಾಲ್ಲೂಕುಗಳನ್ನು ಪ್ರವಾಹ ಪೀಡಿತ ತಾಲ್ಲೂಕುಗಳೆಂದು ಸರ್ಕಾರ ಘೋಷಣೆ ಮಾಡಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಇ) ಈ ಪೈಕಿ ಬೆಳಗಾವಿ ಜಿಲ್ಲೆ ರಾಯಭಾಗ ಮತಕ್ಷೇತ್ರದ ವ್ಯಾಪ್ತಿಯ ರಾಯಭಾಗ ತಾಲ್ಲೂಕು ಹಾಗೂ ಚಿಕ್ಕೋಡಿ ತಾಲ್ಲೂಕನ್ನು ಪ್ರವಾಹ ಪೀಡಿತ ತಾಲ್ಲೂಕುಗಳೆಂದು ಘೋಷಣೆ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಹಾಗಿದ್ದಲ್ಲಿ, ಯಾವ ಕಾಲಮಿತಿಯಲ್ಲಿ ಪ್ರವಾಹ ಪೀಡಿತ ತಾಲ್ಲೂಕುಗಳೆಂದು ಘೋಷಣೆ ಮಾಡಿ ಪರಿಹಾರ ವಿತರಿಸಲಾಗುವುದು ; ಇಲ್ಲವಾದಲ್ಲಿ, ಕಾರಣಗಳೇನು ;

(ಈ) ಈ ಪ್ರವಾಹ ಪೀಡಿತ ತಾಲ್ಲೂಕುಗಳ ಅಭಿವೃದ್ಧಿಗೆ ಮತ್ತು ಆಸ್ತಿ–ಪಾಸ್ತಿ ಕಳೆದುಕೊಂಡ ಸಾರ್ವಜನಿಕರಿಗೆ ಪರಿಹಾರವಾಗಿ ಸರ್ಕಾರ ನಿಗದಿಪಡಿಸಿರುವ ಅನುದಾನ ಹಾಗೂ ಈ ಪೈಕಿ ಬಿಡುಗಡೆ ಮಾಡಲಾಗುವ ಅನುದಾನವೆಷ್ಟು ;

(ಉ) ಈ ಅತಿವೃಷ್ಟಿಯಲ್ಲಿ ಮನೆ ಮತ್ತು ಜಾನುವಾರು ಹಾಗೂ ಆಸ್ತಿ–ಪಾಸ್ತಿಗಳನ್ನು ಕಳೆದುಕೊಂಡ ಸಾರ್ವಜನಿಕರಿಗೆ ಈವರೆವಿಗೂ ಬಿಡುಗಡೆ ಮಾಡಿ ವಿತರಿಸಿರುವ ಪರಿಹಾರ ಧನವೆಷ್ಟು ? (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

## ನೂತನ ತಾಲ್ಲೂಕು ರಚನೆ

**ಶ್ರೀ ಆನಂದ್ ಸಿದ್ದು ನ್ಯಾಮಗೌಡ (ಜಮಖಂಡಿ) :–**

೧೨ (೨೧೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜಮಖಂಡಿ ತಾಲ್ಲೂಕಿನ ಸಾವಳಗಿ ಹೋಬಳಿಯನ್ನು ನೂತನ ತಾಲ್ಲೂಕು ಎಂದು ಘೋಷಿಸಲು ಉದ್ದೇಶಿಸಿದೆಯೇ ;

(ಆ) ಹಾಗಿದ್ದಲ್ಲಿ, ಸದರಿ ಪ್ರಸ್ತಾವನೆಯು ಸರ್ಕಾರದ ಯಾವ ಹಂತದಲ್ಲಿದೆ?

## ಗ್ರಾಮ ಸೇರ್ಪಡೆ

**ಶ್ರೀ ಆನಂದ್ ಸಿದ್ದು ನ್ಯಾಮಗೌಡ (ಜಮಖಂಡಿ) :–**

೧೩ (೨೧೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜಮಖಂಡಿ ತಾಲ್ಲೂಕಿನಲ್ಲಿ ಹಿಪ್ಪರಗಿ ಗ್ರಾಮವನ್ನು ಸೇರ್ಪಡೆ ಮಾಡಲು ಪ್ರಸ್ತಾವನೆ ಸಲ್ಲಿಸಲಾಗಿದ್ದು ಸೇರ್ಪಡೆ ವಿಳಂಬವಾಗಲು ಕಾರಣವೇನು ;

(ಆ) ಹಿಪ್ಪರಗಿ ಗ್ರಾಮ ಪಂಚಾಯತ್‌ನಿಂದ ಗ್ರಾಮ ಸಭೆಯಲ್ಲಿ ಮತ್ತು ಸಾಮಾನ್ಯ ಸಭೆಯಲ್ಲಿ ಠರಾವು ನೀಡಿದ್ದು ಪ್ರಥಮ ಅಧಿಸೂಚನೆ ಮಾಡಲು ವಿಳಂಬವಾಗಿರುವುದೇಕೆ ? (ವಿವರ ನೀಡುವುದು)

## ಮಿನಿ ವಿಧಾನಸೌಧ

**ಶ್ರೀ ಆನಂದ್ ಸಿದ್ದು ನ್ಯಾಮಗೌಡ (ಜಮಖಂಡಿ) :–**

೧೪ (೨೧೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜಮಖಂಡಿ ನಗರದಲ್ಲಿ ನಿರ್ಮಾಣವಾಗಿರುವ ಮಿನಿ ವಿಧಾನಸೌಧ ಕಟ್ಟಡದ ೨ನೇ ಹಂತದ ಕಾಮಗಾರಿಗೆ ಯಾವಾಗ ಮಂಜೂರಾತಿ ನೀಡಲಾಗುವುದು ;

(ಆ) ಜಮಖಂಡಿಯು ಬಾಗಲಕೋಟೆ ಜಿಲ್ಲೆಯ ಅತಿದೊಡ್ಡ "ಸಬ್ ಡಿವಿಜನ್" ಆಗಿರುವುದರಿಂದ ಮಿನಿ ವಿಧಾನಸೌಧ ೨ನೇ ಹಂತದ ಕಾಮಗಾರಿಗೆ ಮಂಜೂರಾತಿ ನೀಡುವ ಅವಶ್ಯಕತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ :

(ಇ) ಹಾಗಿದ್ದಲ್ಲಿ. ಯಾವಾಗ ಮಂಜೂರಾತಿ ನೀಡಲಾಗುವುದು ?

## ಹೊಲಗಳಲ್ಲಿ ಸಂಭವಿಸುವ ವಿಕೋಪ

**ಶ್ರೀ ಅನಿಲ್ ಚಿಕ್ಕಮಾದು (ಹೆಚ್.ಡಿ. ಕೋಟೆ) :–**

೧೫ (೭) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ರಾಜ್ಯದಲ್ಲಿ ರೈತರುಗಳು ತಮ್ಮ ಹೊಲಗಳಲ್ಲಿ ಕಾರ್ಯನಿರ್ವಹಿಸುವ ಸಂದರ್ಭಗಳಲ್ಲಿ ಅಪಘಾತಗಳಿಗೊಳಗಾದ ಅಥವಾ ನೈಸರ್ಗಿಕ ವಿಕೋಪಗಳಿಂದ ಆಗಿರುವ ಅನಾಹುತಗಳೆಷ್ಟು; ಈ ಪೈಕಿ ಮರಣಹೊಂದಿದ ಪ್ರಕರಣಗಳೆಷ್ಟು ; (ಕಳೆದ ಮೂರು ವರ್ಷಗಳ ವಿವರ ನೀಡುವುದು)

(ಆ) ಇಲಾಖೆಯಲ್ಲಿ ಬೆಳೆ ನಷ್ಟ ಉಂಟಾದಲ್ಲಿ ಬೆಳೆ ಪರಿಹಾರಕ್ಕೆ ವಿಮೆ ಯೋಜನೆಯಿದ್ದು ಇದೇ ರೀತಿ ಕೃಷಿ ಕಾರ್ಮಿಕರು ಹೊಲಗಳಲ್ಲಿ ಅಪಘಾತಕ್ಕೀಡಾದಾಗ ಅಥವಾ ಮರಣ ಹೊಂದಿದ್ದಲ್ಲಿ ಈ ಬಗ್ಗೆ ಯಾವುದಾದರೂ ಯೋಜನೆ ರೂಪಿಸಲಾಗಿದೆಯೇ ; ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಳ್ಳುವ ಕ್ರಮಗಳೇನು :

(ಇ) ಹಾಗಿದ್ದಲ್ಲಿ, ಈವರೆಗೆ ಯಾವ ಯಾವ ಯೋಜನೆಯಡಿ ಎಷ್ಟೆಷ್ಟು ಪ್ರಮಾಣದ ಪರಿಹಾರ ನೀಡಲಾಗಿದೆ ? (ಜಿಲ್ಲಾವಾರು, ತಾಲ್ಲೂಕುವಾರು ಕಳೆದ ಮೂರು ವರ್ಷಗಳ ಮಾಹಿತಿ ನೀಡುವುದು)

## ಮಿನಿ ವಿಧಾನಸೌಧ

**ಶ್ರೀ ಅನಿಲ್ ಚಿಕ್ಕಮಾದು (ಹೆಚ್.ಡಿ. ಕೋಟೆ) :-**

೧೬ (೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹೆಚ್.ಡಿ. ಕೋಟೆ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ಸರಗೂರು ಹೊಸ ತಾಲ್ಲೂಕು ಕೇಂದ್ರವಾಗಿದ್ದು, ಈ ಕೇಂದ್ರದಲ್ಲಿ ತಾಲ್ಲೂಕು ಮಟ್ಟದ ಕಛೇರಿಗಳ ಸಂಕೀರ್ಣಕ್ಕಾಗಿ ಮಿನಿ ವಿಧಾನಸೌಧ ನಿರ್ಮಾಣ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಹಾಗಿದ್ದಲ್ಲಿ, ಮಿನಿ ವಿಧಾನಸೌಧ ನಿರ್ಮಾಣಕ್ಕಾಗಿ ಸ್ಥಳ ಗುರುತಿಸಲಾಗಿರುವುದೇ ಮತ್ತು ಕಟ್ಟಡ ನಿರ್ಮಾಣಕ್ಕಾಗಿ ನಿಗಧಿಪಡಿಸಿರುವ ಅನುದಾನವೆಷ್ಟು ; ಪ್ರಸ್ತುತ ಪ್ರಸ್ತಾವನೆ ಯಾವ ಹಂತದಲ್ಲಿದೆ ? (ವಿವರ ನೀಡುವುದು)

## ಪ್ರವಾಹದಿಂದ ಹಾನಿಗೊಳಗಾದ ಮನೆಗಳು

**ಶ್ರೀ ಅನಿಲ್ ಚಿಕ್ಕಮಾದು (ಹೆಚ್.ಡಿ. ಕೋಟೆ) :-**

೧೭ (೯) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮೈಸೂರು ಜಿಲ್ಲೆ, ಹೆಗ್ಗಡದೇವನಕೋಟೆ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ೨೦೧೯ರ ಆಗಸ್ಟ್ ಮಾಹೆಯಲ್ಲಿ ಬಿದ್ದ ಭಾರಿ ಮಳೆ ಹಾಗೂ ಪ್ರವಾಹದಿಂದ ಹಾನಿಗೊಳಗಾದ ಮನೆಗಳ ಸಂಖ್ಯೆ ಎಷ್ಟು ; (ಶೇಕಡವಾರು ಮಾಪನದಂತೆ ವಿವರಗಳನ್ನು ನೀಡುವುದು)

(ಆ) ಹಾನಿಗೊಳಗಾದ ಎಲ್ಲಾ ಮನೆಗಳಿಗೂ ಪರಿಹಾರ ಪಾವತಿಸಲಾಗಿರುವುದೇ ; (ಪ್ರಕರಣಾವಾರು ಫಲಾನುಭವಿಯ ವಿವರ, ಪಾವತಿಸಿದ ಮೊತ್ತ ಹಾಗೂ ಸಂಪೂರ್ಣ ವಿವರಗಳನ್ನು ನೀಡುವುದು)

(ಇ) ಪರಿಹಾರ ದೊರಕದೇ ಇರುವ ಪ್ರಕರಣಗಳ ಸಂಖ್ಯೆ ಎಷ್ಟು ; ಅದಕ್ಕೆ ಕಾರಣವೇನು ; ಅಂತಹ ಪ್ರಕರಣಗಳಿಗೆ ಪರಿಹಾರ ಒದಗಿಸಲು ಸರ್ಕಾರದ ವತಿಯಿಂದ ತೆಗೆದುಕೊಂಡ ಕ್ರಮಗಳೇನು?

## ಒಳನಾಡು ಜಲಮಾರ್ಗ

**ಶ್ರೀ ಅನಿಲ್ ಚಿಕ್ಕಮಾದು (ಹೆಚ್.ಡಿ. ಕೋಟೆ) :-**

೧೮ (೧೦) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಕಾರ್ಯಾಚರಣೆಯಲ್ಲಿರುವ ಅಥವಾ ಅನುಮತಿ ನೀಡಲಾಗಿರುವ ಒಳನಾಡು ಜಲಮಾರ್ಗಗಳು ಯಾವುವು ;

(ಆ) ಆಂತರಿಕ ಜಲಮಾರ್ಗಗಳನ್ನು ಪ್ರಾರಂಭಿಸಲು ಇರುವ ನಿಯಮಗಳೇನು ಹಾಗೂ ಇದರ ಆಡಳಿತ ಹಾಗೂ ನಿರ್ವಹಣೆಗಳಾವುವು ; (ವಿವರ ನೀಡುವುದು)

(ಇ) ಮೈಸೂರು ಜಿಲ್ಲೆ, ಹೆಗ್ಗಡದೇವನಕೋಟೆ ತಾಲ್ಲೂಕಿನ ಕಬಿನಿ ಜಲಾಶಯದ ಹಿನ್ನೀರಿನಲ್ಲಿರುವ ಗ್ರಾಮಗಳಿಗೆ ಸಂಪರ್ಕ ಕಲ್ಪಿಸಲು ಆಂತರಿಕ ಜಲಸಾರಿಗೆ ಸೇವೆಯನ್ನು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಈ) ಜಲಾಶಯದ ನಿರ್ಮಾಣದಿಂದ ಮುಳುಗಡೆಗೊಂಡು ವಡದಲ್ಲಿ ಪುನರ್ ವಸತಿಗೊಂಡ ಗ್ರಾಮಗಳು ಸೇರಿದಂತೆ ೩೫ ಗ್ರಾಮಗಳ ಸಾರ್ವಜನಿಕರಿಗೆ ತಮ್ಮ ದೈನಂದಿನ ಚಟುವಟಿಕೆಗಳಿಗೆ ಕೇಂದ್ರ ಸ್ಥಾನಕ್ಕೆ ಆಗಮಿಸಲು ಸುಮಾರು ೩೨ ಕಿ.ಮೀ. ನಿಂದ ೪೦ ಕಿ.ಮೀ. ಬಳಸಿ ಕ್ರಮಿಸಬೇಕಾದ ಅನಿವಾರ್ಯತೆ ಇದ್ದು ; ಹಾಗಿದ್ದಲ್ಲಿ, ಆಂತರಿಕ ಜಲಸಾರಿಗೆ ಸಂಪರ್ಕದಿಂದ ೮ ರಿಂದ ೧೨ ಕಿ.ಮೀ. ಇಳಿಯುವುದರಿಂದ ಸುರಕ್ಷಿತ ಜಲಮಾರ್ಗವನ್ನು ಪ್ರಾರಂಭಿಸುವ ಬಗ್ಗೆ ಸರ್ಕಾರದ ನಿಲುವೇನು ?

## ನಿರಾಶ್ರಿತಗೊಂಡ ಕುಟುಂಬಗಳು

**ಶ್ರೀ ಅನಿಲ್ ಚಿಕ್ಕಮಾದು (ಹೆಚ್.ಡಿ. ಕೋಟೆ) :–**

೧೯ (೧೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು ಜಿಲ್ಲೆ, ಹೆಗ್ಗಡದೇವನಕೋಟೆ ವಿಧಾನಸಭಾ ಕ್ಷೇತ್ರದಲ್ಲಿ ೨೦೧೯ರ ಆಗಸ್ಟ್ ಮಾಹೆಯಲ್ಲಿ ಬಿದ್ದ ಭಾರಿ ಮಳೆ ಹಾಗೂ ಜಲಾಶಯದ ಪ್ರವಾಹದ ನೀರಿನಿಂದ ಮುಳುಗಡೆಗೊಂಡು ಹಾನಿಗೊಂಡ ಹಾಗೂ ನಿರಾಶ್ರಿತಗೊಂಡ ಕುಟುಂಬಗಳೆಷ್ಟು ; (ವಿವರಗಳನ್ನು ನೀಡುವುದು)

(ಆ) ಸದರಿ ಕುಟುಂಬಗಳಿಗೆ ಬದಲಿ ಆಶ್ರಯ ಕಲ್ಪಿಸಲು ಮತ್ತು ಸ್ಥಳಾಂತರಗೊಳಿಸಲು ಕೈಗೊಂಡಿರುವ ಕ್ರಮಗಳೇನು ; (ಸಂಪೂರ್ಣ ವಿವರ ನೀಡುವುದು)

(ಇ) ಬದಲಿ ಆಶ್ರಯ/ವಸತಿ ಕಲ್ಪಿಸುವ ಯೋಜನೆ ಹಾಗೂ ಪ್ರಕ್ರಿಯೆ ಯಾವ ಹಂತದಲ್ಲಿದೆ ? (ಸಂಪೂರ್ಣ ವಿವರ ನೀಡುವುದು)

## ಮೀನುಗಾರಿಕೆ

ಶ್ರೀ ಅಪ್ಪಚ್ಚು (ರಂಜನ್) ಎಂ.ಪಿ. (ಮಡಿಕೇರಿ) :-

೨೦ (೫) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ ಮೂರು ವರ್ಷಗಳಿಂದ ಕೊಡಗು ಜಿಲ್ಲೆಯ ಮೀನುಗಾರಿಕೆ ಇಲಾಖೆಗೆ ಬಿಡುಗಡೆ ಮಾಡಲಾಗಿರುವ ಅನುದಾನವೆಷ್ಟು ;

(ಆ) ಯಾವ ಯಾವ ಉದ್ದೇಶಗಳಿಗೆ ಬಿಡುಗಡೆಗೊಳಿಸಲಾಗಿದೆ ? (ತಾಲ್ಲೂಕುವಾರು ವಿವರ ನೀಡುವುದು)

## ವಿವಿಧ ವಸತಿ ನಿವೇಶನಗಳು

ಶ್ರೀ ಅಪ್ಪಚ್ಚು (ರಂಜನ್) ಎಂ.ಪಿ. (ಮಡಿಕೇರಿ) :-

೨೧ (೬) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ ಮೂರು ವರ್ಷಗಳಿಂದ ಕೊಡಗು ಜಿಲ್ಲೆಗೆ ಯಾವ ಯಾವ ಯೋಜನೆಗಳಡಿ ಎಷ್ಟೆಷ್ಟು ಮನೆಗಳನ್ನು ಮಂಜೂರು ಮಾಡಲಾಗಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ಜಿಲ್ಲೆಯಲ್ಲಿ ಮನೆಗಳು ಬ್ಲಾಕ್ ಆಗಿದ್ದು, ಇದರಿಂದ ಫಲಾನುಭವಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇಲ್ಲಿಯವರೆಗೆ ಎಷ್ಟು ಮನೆಗಳನ್ನು ಬ್ಲಾಕ್ ಮಾಡಲಾಗಿರುತ್ತದೆ ; ಯಾವ ಯಾವ ಉದ್ದೇಶಗಳಿಗೆ ಬ್ಲಾಕ್ ಮಾಡಲಾಗಿದೆ ;

(ಇ) ಈ ಮನೆಗಳನ್ನು ಬ್ಲಾಕ್‌ನಿಂದ ತೆಗೆಯಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ; (ಪೂರ್ಣ ವಿವರ ನೀಡುವುದು)

(ಈ) ಈ ಜಿಲ್ಲೆಯಲ್ಲಿ ನಿವೇಶನ ಹೊಂದಿಲ್ಲದಿರುವವರ ಸಂಖ್ಯೆ ಎಷ್ಟು; ನಿವೇಶನ ನೀಡಲು ಯಾವ ಯಾವ ಗ್ರಾಮದಲ್ಲಿ ಎಷ್ಟೆಷ್ಟು ಜಾಗ ಮೀಸಲಿಡಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಉ) ಪ್ರಕೃತಿ ವಿಕೋಪ ಕಾರಣದಿಂದ ಎಷ್ಟು ಜನರು ಮನೆಗಳನ್ನು ಕಳೆದುಕೊಂಡಿರುತ್ತಾರೆ ; ಈ ಪೈಕಿ ಎಷ್ಟು ಜನರಿಗೆ ಮನೆ ಮಂಜೂರು ಮಾಡಲಾಗಿದೆ ;

(ಊ) ಮನೆ ಕಳೆದುಕೊಳ್ಳದಿರುವವರು ಸಹ ಮನೆ ಪಡೆಯುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಋ) ಈಗಾಗಲೇ ಮನೆ ಪಡೆದಿರುವವರ ಮರು ಪರಿಶೀಲನೆಗೆ ಸರ್ಕಾರ ತೆಗೆದುಕೊಂಡ ಕ್ರಮವೇನು ? (ಪೂರ್ಣ ವಿವರ ನೀಡುವುದು)

## ಗೋಮಾಳ ಜಮೀನುಗಳು

**ಶ್ರೀ ಅಶೋಕ್ ನಾಯಕ್ ಕೆ.ಬಿ. (ಶಿವಮೊಗ್ಗ ಗ್ರಾಮಾಂತರ) :-**

೨೨ (೨೫೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಶಿವಮೊಗ್ಗ ಹಾಗೂ ಭದ್ರಾವತಿ ತಾಲ್ಲೂಕಿನ ಕಂದಾಯ ಇಲಾಖೆ ವ್ಯಾಪ್ತಿಯಲ್ಲಿ ಬರುವ ಒಟ್ಟು ಗ್ರಾಮಠಾಣಾ ದನಗಳಿಗೆ ಮುಫತ್ತು, ಗೋಮಾಳ, ಹುಲ್ಲುಬನಿ, ಗುಂಡುತೋಪು, ಖರಾಬು ಗುಡ್ಡ, ಎ-ಖರಾಬು ಮತ್ತು ಬಿ-ಖರಾಬು ಜಾಗಗಳೆಷ್ಟು ; (ಗ್ರಾಮವಾರು, ವಿಭಾಗವಾರು ವಿವರ ನೀಡುವುದು)

(ಆ) ಶಿವಮೊಗ್ಗ ಗ್ರಾಮಾಂತರ ಕ್ಷೇತ್ರ ವ್ಯಾಪ್ತಿಯ ಕಂದಾಯ ಇಲಾಖೆಗೆ ಒಳಪಡುವ ಜಮೀನನ್ನು ಖಾಸಗಿಯವರು ಒತ್ತುವರಿ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಸದರಿ ಕ್ಷೇತ್ರ ವ್ಯಾಪ್ತಿಯಲ್ಲಿ ಎಷ್ಟು ಗ್ರಾಮಗಳಲ್ಲಿ ಸ್ಮಶಾನ ಭೂಮಿ ಮಂಜೂರಾಗಿದೆ ; ಹಾಗೂ ಸ್ಮಶಾನ ಭೂಮಿ ಇಲ್ಲದ ಗ್ರಾಮಗಳಿಗೆ ಸ್ಮಶಾನ ಭೂಮಿ ಮಂಜೂರು ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಸಬ್ಸಿಡಿ ಮೊತ್ತ ಹೆಚ್ಚಿಸುವುದು

**ಶ್ರೀ ಬಾಲಕೃಷ್ಣ ಸಿ.ಎನ್. (ಶ್ರವಣಬೆಳಗೊಳ) :–**

೨೩. (೩೪) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೃಷಿ ಇಲಾಖೆಯಿಂದ ರೈತರಿಗೆ ೨೪ ಮತ್ತು ೨೫ ಹೆಚ್.ಪಿ. ಟ್ರಾಕ್ಟರ್‌ಗಳಿಗೆ ಸಬ್ಸಿಡಿ ನೀಡಿದಂತೆ ೨೫ಕ್ಕಿಂತ ಹೆಚ್ಚು ಹೆಚ್.ಪಿ. ಟ್ರಾಕ್ಟರ್‌ಗಳಿಗೆ ಸಬ್ಸಿಡಿ ನೀಡದಿರಲು ಕಾರಣಗಳೇನು ;

(ಆ) ಕೃಷಿ ಭಾಗ್ಯ ಯೋಜನೆಯನ್ನು ಮುಂದುವರೆಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಹಾಗಿದ್ದಲ್ಲಿ, ಎಂದಿನಿಂದ ಮುಂದುವರೆಸಲಾಗುವುದು ;

(ಇ) ಸ್ಪ್ರಿಂಕ್ಲರ್ ಸೆಟ್‌ಗಳಿಗೆ ಹೆಚ್ಚುವರಿ ಅನುದಾನ ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಹಾಗಿದ್ದಲ್ಲಿ, ಎಂದಿನಿಂದ ಎಷ್ಟು ಮೊತ್ತದ ಅನುದಾನವನ್ನು ಹೆಚ್ಚಿಸಲಾಗುವುದು ;

(ಈ) ಗೋವು ಕಟ್ಟೆ, ಕೃಷಿ ಹೊಂಡ, ಕಟ್ಟೆ ದುರಸ್ಥಿಗಳಿಂದ ಅಂತರ್ಜಲ ಹೆಚ್ಚಾಗಿರುವುದರಿಂದ ಜಲಾನಯನ ಕಾಮಗಾರಿಗಳಿಗೆ ಹೆಚ್ಚು ಅನುದಾನ ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಉ) ಹಾಗಿದ್ದಲ್ಲಿ, ಕಾಮಗಾರಿಗಳಿಗೆ ಎಂದಿನಿಂದ ಎಷ್ಟು ಮೊತ್ತದ ಅನುದಾನವನ್ನು ಹೆಚ್ಚಿಸಲಾಗುವುದು ?

## ಸರ್ಕಾರಿ ಜಮೀನುಗಳ ದುರಸ್ಥಿ

**ಶ್ರೀ ಬಾಲಕೃಷ್ಣ ಸಿ.ಎನ್. (ಶ್ರವಣಬೆಳಗೊಳ) :–**

೨೪ (೩೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರಿ ಜಮೀನುಗಳ ದುರಸ್ಥಿ ವಿಚಾರಕ್ಕೆ ಸಂಬಂಧಪಟ್ಟಂತೆ ಏಕ ವ್ಯಕ್ತಿ ಕೋರಿಕೆಗೆ ಆದೇಶ ನೀಡುವ ಅಧಿಕಾರವನ್ನು ಸಂಬಂಧಪಟ್ಟ ತಹಶೀಲ್ದಾರ್‌ಗಳಿಗೆ ನೀಡಲಾಗಿದೆಯೇ ;

(ಆ) ಹಾಗಿದ್ದಲ್ಲಿ, ಸಮೂನೆ–೧ ಮತ್ತು ೫ರ ಅನುಮೋದನೆಗಾಗಿ ಎ.ಸಿ. ಮತ್ತು ಡಿ.ಡಿ.ಎಲ್.ಆರ್. ರವರ ಅನುಮೋದನೆಗೆ ಕಳುಹಿಸುವ ಅವಶ್ಯಕತೆಯಿದೆಯೇ ? (ಆದೇಶದ ಪ್ರತಿ ನೀಡುವುದು)

## ಜಮೀನು ಮಂಜೂರು ಮಾಡುವುದು

**ಶ್ರೀ ಬಾಲಕೃಷ್ಣ ಸಿ.ಎನ್. (ಶ್ರವಣಬೆಳಗೊಳ) :–**

೨೫ (೩೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪುರಸಭೆ ವ್ಯಾಪ್ತಿಯಿಂದ ೫ ಕಿ.ಮೀ. ಒಳಗೆ ಜಮೀನುಗಳನ್ನು ನಮೂನೆ ೫೦–೫೩ರಲ್ಲಿ ಮಂಜೂರು ಮಾಡಲು ಅವಕಾಶವಿದೆಯೇ ;

(ಆ) ಹಾಗಿಲ್ಲದಿದ್ದಲ್ಲಿ, ಮಂಜೂರು ಮಾಡಲು ಸರ್ಕಾರಕ್ಕಿರುವ ತೊಂದರೆಗಳೇನು ;

(ಇ) ಈಗಾಗಲೇ ಮಂಜೂರಾಗಿ ಸಾಗುವಳಿ ಪತ್ರ ನೀಡಿದ್ದರೂ ಸಹ ಖಾತೆ ಮಾಡಲು ನಿರ್ಬಂಧ ವಿಧಿಸಲಾಗಿದೆಯೇ ? (ಆದೇಶದ ಪ್ರತಿ ನೀಡುವುದು)

## ಮೀನುಗಳ ಸಾಕಾಣಿಕೆ

**ಶ್ರೀ ಬಾಲಕೃಷ್ಣ ಸಿ.ಎಸ್. (ಶ್ರವಣಬೆಳಗೊಳ) :–**

೨೬ (೨೩೩) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ೨೦೧೯–೨೦ನೇ ಸಾಲಿನಲ್ಲಿ ಮೀನುಗಾರಿಕೆ ಇಲಾಖೆ ವತಿಯಿಂದ ಮೀನು ಮರಿಗಳನ್ನು ಕೆರೆಗಳಲ್ಲಿ ಸಾಕಣೆ ಮಾಡಲು ಅನುಸರಿಸಲಾಗಿರುವ ಕ್ರಮಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಕಳೆದ ಮೂರು ವರ್ಷಗಳಿಂದ ರಾಜ್ಯದಲ್ಲಿ ಕೆರೆಗಳಲ್ಲಿ/ಡ್ಯಾಂ/ ಕಟ್ಟೆಗಳಲ್ಲಿ ಮೀನು ಸಾಕಾಣಿಕೆಗಾಗಿ ನೀಡಿರುವ ಅನುದಾನವೆಷ್ಟು; (ವರ್ಷವಾರು ಹಾಗೂ ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು)

(ಇ) ಕಳೆದ ಮೂರು ವರ್ಷಗಳಿಂದ ಎಷ್ಟು ಕೆರೆಗಳಲ್ಲಿ/ಡ್ಯಾಂ/ಕಟ್ಟೆಗಳಲ್ಲಿ ಮೀನು ಸಾಕಾಣಿಕೆಗಾಗಿ ಟೆಂಡರ್ ಕರೆಯಲಾಗಿದೆ ; (ವರ್ಷವಾರು ಹಾಗೂ ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು)

(ಈ) ಈ ಅವಧಿಗಳಲ್ಲಿ ಮೀನು ಸಾಕಾಣಿಕೆಗಾಗಿ ಸರ್ಕಾರದಿಂದ ಯಾವ ಯಾವ ಯೋಜನೆಗಳಲ್ಲಿ ಎಷ್ಟೆಷ್ಟು ಅನುದಾನವನ್ನು ನೀಡಲಾಗಿದೆ; (ವರ್ಷವಾರು ಹಾಗೂ ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಉ) ರಾಜ್ಯದಲ್ಲಿ ೨೦೧೯-೨೦ನೇ ಸಾಲಿನಲ್ಲಿ ಮೀನುಗಾರಿಕೆ ಇಲಾಖೆ ವತಿಯಿಂದ ಮತ್ಸ್ಯಾಶ್ರಯ ಯೋಜನೆಯಡಿಯಲ್ಲಿ ಮಂಜೂರು ಮಾಡಲಾಗಿರುವ ಮನೆಗಳೆಷ್ಟು ; ಫಲಾನುಭವಿಗಳನ್ನು ಆಯ್ಕೆ ಮಾಡಲು ಅನುಸರಿಸಲಾಗಿರುವ ಮಾನದಂಡಗಳೇನು ? (ವಿಧಾನಸಭಾ ಕ್ಷೇತ್ರವಾರು ಸಂಪೂರ್ಣ ಮಾಹಿತಿ ನೀಡುವುದು)

## ಹಣ ಸಂದಾಯ

**ಶ್ರೀ ಬಾಲಕೃಷ್ಣ ಸಿ.ಎನ್. (ಶ್ರವಣಬೆಳಗೊಳ) :-**

೨೭ (೨೩೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ವಿಧವಾ ವೇತನ, ಸಂಧ್ಯಾ ಸುರಕ್ಷಾ ಯೋಜನೆ, ಇಂದಿರಾಗಾಂಧಿ ರಾಷ್ಟ್ರೀಯ ವೃದ್ಧಾಪ್ಯ ಯೋಜನೆ, ಅಂಗವಿಕಲ ಯೋಜನೆ, ಮೈತ್ರಿ ಯೋಜನೆ, ಮನಸ್ವಿನಿ ಯೋಜನೆಗಳ ಫಲಾನುಭವಿಗಳಿಗೆ ಜುಲೈ ೨೦೧೯ ರಿಂದ ದಿನಾಂಕ: ೨೭.೧೧.೨೦೨೦ ರವರೆಗೆ ಹಣ ಸಂದಾಯವಾಗದೆ ಇರುವ ಫಲಾನುಭವಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ಫಲಾನುಭವಿಗಳಿಗೆ ಯಾವ ಕಾಲಮಿತಿಯಲ್ಲಿ ಹಣ ಸಂದಾಯ ಮಾಡಲಾಗುವುದು ;

(ಇ) ರಾಜ್ಯದಲ್ಲಿ ಕಂದಾಯ ಇಲಾಖೆಯಲ್ಲಿ ವಿಧವಾ ವೇತನ, ಸಂಧ್ಯಾ ಸುರಕ್ಷಾ ಯೋಜನೆ, ಇಂದಿರಾಗಾಂಧಿ ರಾಷ್ಟ್ರೀಯ ವೃದ್ಧಾಪ್ಯ ಯೋಜನೆ, ಅಂಗವಿಕಲ ಯೋಜನೆ, ಮೈತ್ರಿ ಯೋಜನೆ, ಮನಸ್ವಿನಿ ಯೋಜನೆಗಳ ಫಲಾನುಭವಿಗಳಿಗೆ ಜುಲೈ ೨೦೧೯ ರಿಂದ ದಿನಾಂಕ ೨೭.೧೧.೨೦೨೦ ರವರೆಗೆ ಹಣ ಸಂದಾಯವಾಗದೆ ಇರಲು ಕಾರಣಗಳೇನು ; ಹಾಗೂ ಸದರಿ ಬಾಬ್ತು ಯಾವ ಅಧಿಕಾರಿಗಳ ಬಳಿ ಬಾಕಿ ಇರುತ್ತದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಸದರಿ ಫಲಾನುಭವಿಗಳಿಗೆ ಪಾವತಿಸಲು ಬಾಕಿ ಇರುವ ಮೊತ್ತವೆಷ್ಟು ? (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

## ಪ್ರವಾಹ ಹಾನಿ

**ಶ್ರೀ ಬಸವನಗೌಡ ದದ್ದಲ (ರಾಯಚೂರು ಗ್ರಾಮಾಂತರ) :-**

೨೮ (೩೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಯಚೂರು ವಿಧಾನಸಭಾ ಕ್ಷೇತ್ರದಲ್ಲಿ ೨೦೨೦-೨೧ನೇ ಸಾಲಿನ ಆಗಸ್ಟ್ ಮತ್ತು ಸೆಪ್ಟೆಂಬರ್ ತಿಂಗಳಲ್ಲಿ ಆದ ಅತಿಯಾದ ಮಳೆಯಿಂದ ಹಾನಿಯಾಗಿರುವ ಮನೆಗಳೆಷ್ಟು ; (ಭಾಗಶಃ ಹಾಗೂ ಸಂಪೂರ್ಣ ಹಾನಿಯಾದ ಮನೆಗಳ ವಿವರ ನೀಡುವುದು)

(ಆ) ಇಲ್ಲಿಯವರೆಗೂ ಎಷ್ಟು ಮನೆಗಳಿಗೆ ಪರಿಹಾರದ ಹಣವನ್ನು ವಿತರಿಸಲಾಗಿದೆ ? (ಸಂಪೂರ್ಣ ವಿವರ ನೀಡುವುದು)

## ರಸ್ತೆಗಳ ದುರಸ್ಥಿ

**ಶ್ರೀ ಬಸವನಗೌಡ ದದ್ದಲ (ರಾಯಚೂರು ಗ್ರಾಮಾಂತರ) :-**

೨೯ (೩೩) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಯಚೂರು ವಿಧಾನಸಭಾ ಕ್ಷೇತ್ರದಲ್ಲಿ ೨೦೨೦-೨೧ನೇ ಸಾಲಿನ ಆಗಸ್ಟ್ ಮತ್ತು ಸೆಪ್ಟೆಂಬರ್ ತಿಂಗಳಲ್ಲಿ ಆದ ಅತಿಯಾದ ಮಳೆಯಿಂದ ಹಾನಿಗೊಳಗಾಗಿರುವ ರಸ್ತೆ ಮತ್ತು ಸೇತುವೆಗಳೆಷ್ಟು ; (ಹಾನಿಗೊಳಗಾಗಿರುವ ಕಿ.ಮೀ. ರಸ್ತೆ ಹಾಗೂ ಸೇತುವೆಗಳ ಸಂಪೂರ್ಣ ವಿವರವನ್ನು ನೀಡುವುದು)

(ಆ) ಹಾನಿಯಾದ ರಸ್ತೆಗಳ ದುರಸ್ಥಿ ಕಾಮಗಾರಿಗೆ ಅಗತ್ಯವಿರುವ ಅನುದಾನ ನೀಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಹಾಗಿದ್ದಲ್ಲಿ, ಸದರಿ ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು ?

## ರಸ್ತೆ ಮತ್ತು ಸೇತುವೆಗಳ ನಿರ್ಮಾಣ/ದುರಸ್ಥಿ ಕಾಮಗಾರಿಗಳು

**ಶ್ರೀ ಬೆಳ್ಳಿಪ್ರಕಾಶ್ (ಕಡೂರು) :–**

೩೦ (೧೫೯) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೯–೨೦ ಹಾಗೂ ೨೦೨೦–೨೧ನೇ ಸಾಲಿನಲ್ಲಿ ಚಿಕ್ಕಮಗಳೂರು ಜಿಲ್ಲೆಯಲ್ಲಿ ಲೋಕೋಪಯೋಗಿ ಇಲಾಖೆಯಿಂದ ಜಿಲ್ಲಾ ಮುಖ್ಯ ರಸ್ತೆ, ಸೇತುವೆಗಳು, ರಾಜ್ಯ ಹೆದ್ದಾರಿ ಸುಧಾರಣೆ, ಜಿಲ್ಲಾ ರಸ್ತೆ ಸುಧಾರಣೆ, ನಬಾರ್ಡ್ ರಸ್ತೆ ಸುಧಾರಣೆಗಳು ಹಾಗೂ ಕೇಂದ್ರ ರಸ್ತೆ ನಿಧಿಯಿಂದ ನಿರ್ಮಾಣ ಹಾಗೂ ದುರಸ್ಥಿ ಕಾಮಗಾರಿಗಳಿಗೆ ಬಿಡುಗಡೆಯಾಗಿರುವ ಅನುದಾನವೆಷ್ಟು ; (ವಿಧಾನಸಭಾ ಕ್ಷೇತ್ರವಾರು ವಿವರ ನೀಡುವುದು)

(ಆ) ಸದರಿ ಅವಧಿಯಲ್ಲಿ ಸರ್ಕಾರಿ ನಿವಾಸಿ ಗೃಹಗಳ ನಿರ್ಮಾಣ, ಇಲಾಖೆ ಕಟ್ಟಡಗಳ ನಿರ್ವಹಣೆ ಮತ್ತು ದುರಸ್ಥಿಗೆ ಬಿಡುಗಡೆಯಾಗಿರುವ ಅನುದಾನವೆಷ್ಟು ? (ವಿಧಾನಸಭಾ ಕ್ಷೇತ್ರವಾರು ವಿವರ ನೀಡುವುದು)

## ಮನೆಗಳ ನಿರ್ಮಾಣ

**ಶ್ರೀ ಬೆಳ್ಳಿಪ್ರಕಾಶ್ (ಕಡೂರು) :–**

೩೧ (೧೬೦) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿ ವಸತಿ ಉದ್ದೇಶಕ್ಕಾಗಿ ಎಷ್ಟು ನಿವೇಶನಗಳನ್ನು ಮೀಸಲಿಡಲಾಗಿದೆ ; (ಕ್ಷೇತ್ರವಾರು ವಿವರ ನೀಡುವುದು)

(ಆ) ೨೦೧೯–೨೦ನೇ ಸಾಲಿನಲ್ಲಿ ಕಡೂರು ತಾಲ್ಲೂಕಿಗೆ ಬಿಡುಗಡೆಯಾದ ಅನುದಾನವೆಷ್ಟು ; ಆ ಪೈಕಿ ಬಿಡುಗಡೆಯಾಗಬೇಕಾಗಿರುವ ಬಾಕಿ ಮೊತ್ತವೆಷ್ಟು ; (ಮಾಹಿತಿ ನೀಡುವುದು)

(ಇ) ಕಳೆದ ೨ ವರ್ಷಗಳಿಂದ ಕಡೂರು ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬಸವ ವಸತಿ ಯೋಜನೆಯಡಿಯಲ್ಲಿ ಎಷ್ಟು ಮನೆಗಳನ್ನು ಮಂಜೂರು ಮಾಡಲಾಗಿದೆ ;

(ಈ) ಸದರಿ ಯೋಜನೆಯಡಿ ಮನೆಗಳ ನಿರ್ಮಾಣಕ್ಕೆ ಮಂಜೂರಾದ ಅನುದಾನವೆಷ್ಟು ; ಇದುವರೆವಿಗೂ ಬಿಡುಗಡೆಯಾದ ಹಣವೆಷ್ಟು ? (ವಿವರ ನೀಡುವುದು)

## ಮಾಸಿಕ ಪಿಂಚಣಿಗಳು

**ಶ್ರೀ ಬೆಳ್ಳಿಪ್ರಕಾಶ್ (ಕಡೂರು) :–**

೩೨ (೧೬೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರದಿಂದ ನೀಡಲಾಗುತ್ತಿರುವ ವೃದ್ಧಾಪ್ಯ ವೇತನ, ವಿಧವಾ ವೇತನ ಹಾಗೂ ಅಂಗವಿಕಲರ ವೇತನದಂತಹ ಮಾಸಿಕ ಪಿಂಚಣಿಗಳು ನಿಗದಿತ ಅವಧಿಯೊಳಗೆ ಬಿಡುಗಡೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಆ) ಕಡೂರು ತಾಲ್ಲೂಕಿನಲ್ಲಿರುವ ವೃದ್ಧಾಪ್ಯ ವೇತನ, ವಿಧವಾ ವೇತನ ಪಡೆಯುತ್ತಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ; ಸ್ವೀಕೃತವಾಗಿರುವ ಹಾಗೂ ಬಾಕಿ ಇರುವ ಅರ್ಜಿಗಳು ಎಷ್ಟು ; (ವಿವರ ನೀಡುವುದು)

(ಇ) ಈ ತಾಲ್ಲೂಕಿನಲ್ಲಿ ಪೋಡಿಗಾಗಿ ಸಲ್ಲಿಕೆಯಾದ ಅರ್ಜಿಗಳು ಎಷ್ಟು ; ಇತ್ಯರ್ಥಪಡಿಸಲಾದ ಹಾಗೂ ಬಾಕಿ ಇರುವ ಅರ್ಜಿಗಳೆಷ್ಟು ; (ಹೋಬಳಿವಾರು ವಿವರ ನೀಡುವುದು)

(ಈ) ಕಡೂರು ಕ್ಷೇತ್ರದಲ್ಲಿ ಘೋಷಿಸಲಾಗಿರುವ ಪೋಡಿಮುಕ್ತ ಗ್ರಾಮಗಳೆಷ್ಟು ; ಪೋಡಿಮುಕ್ತ ಆರ್‌ಟಿಸಿಗಳನ್ನು ವಿತರಿಸಲಾದ ಭೂ ಮಾಲೀಕರುಗಳೆಷ್ಟು ?

## ದೇವಸ್ಥಾನಗಳ ಜೀರ್ಣೋದ್ಧಾರ

**ಶ್ರೀ ಭೀಮಾ ನಾಯ್ಕ ಎಸ್. (ಹಗರಿಬೊಮ್ಮನಹಳ್ಳಿ) :–**

೩೩ (೨೫೪) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಾಸಕರ ಪ್ರದೇಶಾಭಿವೃದ್ಧಿ ಯೋಜನೆಯಡಿ ದೇವಸ್ಥಾನಗಳ ಜೀರ್ಣೋದ್ಧಾರಕ್ಕೆ ಅನುದಾನ ಒದಗಿಸಲಾಗಿದ್ದರೂ, ದೇವಸ್ಥಾನಗಳನ್ನು ಮುಜರಾಯಿ ಇಲಾಖೆಯಲ್ಲಿ ನೋಂದಣಿ ಮಾಡಿಸಿ, ಮೂರು ವರ್ಷಗಳ ಲೆಕ್ಕ ಪರಿಶೋಧನಾ ವರದಿಯನ್ನು ನೀಡಬೇಕೆಂಬ ನಿಯಮದಿಂದ ಅನುದಾನ ಒದಗಿಸಲು ತೊಂದರೆ ಉಂಟಾಗಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಹಗರಿಬೊಮ್ಮನಹಳ್ಳಿ ವಿಧಾನಸಭಾ ಕ್ಷೇತ್ರದ ದೇವಸ್ಥಾನಗಳ ಜೀರ್ಣೋದ್ಧಾರಕ್ಕೆ ರೂ. ~~೫೦.೦೦~~ ಲಕ್ಷಗಳ ಅನುದಾನ ಮಂಜೂರಾಗಿದ್ದರೂ ಬಿಡುಗಡೆಗೊಳಿಸದಿರಲು ಕಾರಣವೇನು ?

## ಕಾಮಗಾರಿಗಳು

**ಶ್ರೀ ಭೀಮಾ ನಾಯ್ಕ ಎಸ್. (ಹಗರಿಬೊಮ್ಮನಹಳ್ಳಿ) :–**

೩೪ (೨೫೫೫) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಗರಿಬೊಮ್ಮನಹಳ್ಳಿ ವಿಧಾನಸಭಾ ಕ್ಷೇತ್ರದ ಹಂಪಿ–ಕಮಲಾಪುರ ರಾಜ್ಯ ಹೆದ್ದಾರಿ ೧೩೧ ರ ಕಿ.ಮೀ ೧೫೮.೦೦ ರಿಂದ ೧೮೦.೭೫ ರವರೆಗೆ ರಸ್ತೆ ತೀರಾ ಹದಗೆಟ್ಟು ಸಾರ್ವಜನಿಕರಿಗೆ ತೊಂದರೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ದುರಸ್ಥಿಗಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಅನುದಾನದ ವಿವರ ನೀಡುವುದು)

(ಇ) ಸದರಿ ರಸ್ತೆ ದುರಸ್ಥಿ ಕುರಿತಂತೆ ರೂ. ೧೬೫೦.೦೦ ಲಕ್ಷಗಳ ಮೊತ್ತಕ್ಕೆ ಅಂದಾಜು ಪಟ್ಟಿಯನ್ನು ಸಿದ್ಧಪಡಿಸಿ ಪ್ರಸ್ತಾವನೆ ಸರ್ಕಾರಕ್ಕೆ ಸಲ್ಲಿಸಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸದರಿ ಪ್ರಸ್ತಾವನೆ ಯಾವ ಹಂತದಲ್ಲಿದೆ ;

(ಈ) ಹಗರಿಬೊಮ್ಮನಹಳ್ಳಿ ವಿಧಾನಸಭಾ ಕ್ಷೇತ್ರದ ಕೊಟ್ಟೂರು ತಾಲ್ಲೂಕಿನಲ್ಲಿ ಸರ್ಕ್ಯೂಟ್ ಹೌಸ್‌ನ್ನು ಯಾವ ಕಾಲಮಿತಿಯೊಳಗೆ ಎಲ್ಲಿ ನಿರ್ಮಾಣ ಮಾಡಲಾಗುವುದು ಹಾಗೂ ಒದಗಿಸಲಾಗಿರುವ ಅನುದಾನವೆಷ್ಟು ?

# ಅರಭಾವಿ–ಚಳ್ಳಕೆರೆ ರಾಜ್ಯ ಹೆದ್ದಾರಿ ದುರಸ್ಥಿ

**ಶ್ರೀ ಭೀಮಾ ನಾಯ್ಕ ಎಸ್. (ಹಗರಿಬೊಮ್ಮನಹಳ್ಳಿ) :–**

೩೫ (೨೫೬) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಗರಿಬೊಮ್ಮನಹಳ್ಳಿ ವಿಧಾನಸಭಾ ಕ್ಷೇತ್ರದ ಅರಭಾವಿ–ಚಳ್ಳಕೆರೆ ರಾಜ್ಯ ಹೆದ್ದಾರಿ ೪೫ರ ಕಿ.ಮೀ. ೨೩೧.೦ ರಿಂದ ೨೩೭.೨ ರವರೆಗೆ ರಸ್ತೆ ಹದಗೆಟ್ಟು ಸಾರ್ವಜನಿಕರಿಗೆ ತೊಂದರೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸದರಿ ರಸ್ತೆ ದುರಸ್ಥಿಗೆ ಸರ್ಕಾರ ಕೈಗೊಂಡ ಕ್ರಮಗಳೇನು ; ಹಾಗೂ ಕಾಮಗಾರಿಗೆ ಅನುದಾನವನ್ನು ಯಾವಾಗ ಬಿಡುಗಡೆ ಮಾಡಲಾಗುವುದು ;

(ಇ) ಸದರಿ ರಸ್ತೆ ದುರಸ್ಥಿ ಕುರಿತಂತೆ ರೂ. ೫೦೦.೦೦ ಲಕ್ಷ ಮೊತ್ತಕ್ಕೆ ಅಂದಾಜು ಪಟ್ಟಿಯನ್ನು ಸಿದ್ಧಪಡಿಸಿ ಪ್ರಸ್ತಾವನೆ ಸರ್ಕಾರಕ್ಕೆ ಸಲ್ಲಿಸಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸದರಿ ಪ್ರಸ್ತಾವನೆ ಯಾವ ಹಂತದಲ್ಲಿದೆ ;

(ಈ) ಈ ವಿಧಾನಸಭಾ ಕ್ಷೇತ್ರದ ಅರಭಾವಿ–ಚಳ್ಳಕೆರೆ ರಾಜ್ಯ ಹೆದ್ದಾರಿ ೪೫ರ ಕಿ.ಮೀ. ೨೩೧.೨ರ ಹತ್ತಿರ ಮಳೆಗಾಲದಲ್ಲಿ ಹಳ್ಳಬಂದು ಸಾರ್ವಜನಿಕರಿಗೆ ತೀವ್ರ ತೊಂದರೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದಲ್ಲಿ, ಸೇತುವೆ ನಿರ್ಮಾಣ ಕುರಿತಂತೆ ರೂ. ೧೦೦೦.೦೦ ಲಕ್ಷ ಮೊತ್ತದ ಪ್ರಸ್ತಾವನೆ ಸರ್ಕಾರಕ್ಕೆ ಸಲ್ಲಿಸಿದ್ದು, ಪ್ರಸ್ತಾವನೆ ಯಾವ ಹಂತದಲ್ಲಿದೆ ಮತ್ತು ಸೇತುವೆ ನಿರ್ಮಾಣವನ್ನು ಯಾವ ಕಾಲಮಿತಿಯೊಳಗೆ ಮಾಡಲಾಗುವುದು ?

## ಮಿನಿ ವಿಧಾನಸಭಾ ನಿರ್ಮಾಣ

**ಶ್ರೀ ಭೀಮಾ ನಾಯ್ಕ ಎಸ್. (ಹಗರಿಬೊಮ್ಮನಹಳ್ಳಿ) :–**

೩೬ (೨೫೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಗರಿಬೊಮ್ಮನಹಳ್ಳಿ ವಿಧಾನಸಭಾ ಕ್ಷೇತ್ರದಲ್ಲಿ ಕೊಟ್ಟೂರು ಪಟ್ಟಣವು ನೂತನ ತಾಲ್ಲೂಕು ಕೇಂದ್ರವಾಗಿದ್ದು, ಮಿನಿ ವಿಧಾನಸೌಧ ನಿರ್ಮಾಣ ಯಾವಾಗ ಪ್ರಾರಂಭಿಸಲಾಗುವುದು ;

(ಆ) ಸದರಿ ಮಿನಿ ವಿಧಾನಸೌಧ ನಿರ್ಮಾಣಕ್ಕೆ ನಿವೇಶನವನ್ನು ಗುರುತಿಸಲಾಗಿದೆಯೇ ; ಹಾಗಿದ್ದಲ್ಲಿ, ನಿವೇಶನ ಹಸ್ತಾಂತರ ಪ್ರಕ್ರಿಯೆ ಯಾವ ಹಂತದಲ್ಲಿದೆ ; (ವಿವರ ನೀಡುವುದು)

(ಇ) ಕೊಟ್ಟೂರು ಮಿನಿ ವಿಧಾನಸೌಧ ನಿರ್ಮಾಣಕ್ಕೆ ಮಂಜೂರು ಮಾಡಲಾದ ಅನುದಾನವೆಷ್ಟು ?

## ವಿವಿಧ ಯೋಜನೆಗಳು

**ಶ್ರೀ ಭೀಮಾ ನಾಯ್ಕ ಎಸ್. (ಹಗರಿಬೊಮ್ಮನಹಳ್ಳಿ) :–**

೩೭ (೨೫೮) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಗರಿಬೊಮ್ಮನಹಳ್ಳಿ ವಿಧಾನಸಭಾ ಕ್ಷೇತ್ರದ ಹಗರಿಬೊಮ್ಮನಹಳ್ಳಿ, ಮರಿಯಮ್ಮನಹಳ್ಳಿ ಮತ್ತು ಕೊಟ್ಟೂರು ಪಟ್ಟಣಗಳಿಗೆ ವಿವಿಧ ಯೋಜನೆಗಳಡಿ ಮಂಜೂರಾಗಿರುವ ಮನೆಗಳನ್ನು ಸರ್ಕಾರದ ಮಟ್ಟದಲ್ಲಿ ತಡೆಹಿಡಿದಿರುವ ಕಾರಣ ವಸತಿ ರಹಿತ ಫಲಾನುಭವಿಗಳಿಗೆ ತೊಂದರೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಒಟ್ಟು ಎಷ್ಟು ಫಲಾನುಭವಿಗಳಿಗೆ ಮನೆಗಳನ್ನು ಮಂಜೂರು ಮಾಡಲಾಗಿದೆ ಹಾಗೂ ಮನೆಗಳ ಮಂಜೂರಾತಿಯನ್ನು ತಡೆಹಿಡಿಯಲು ಕಾರಣವೇನು ;

(ಇ) ಸದರಿ ಮನೆಗಳ ನಿರ್ಮಾಣ ಪ್ರಕ್ರಿಯೆ ಯಾವಾಗ ಪ್ರಾರಂಭಿಸಲಾಗುವುದು ?

## ರಾಜೀವ್‌ಗಾಂಧಿ ವಸತಿ ನಿಗಮ

**ಶ್ರೀ ದೇವಾನಂದ್ ಪುಲಸಿಂಗ್ ಚವಾಣ್ (ನಾಗಠಾಣ) :–**

೩೮ (೧೬೬) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ನಾಗಾಠಾಣ ವಿಧಾನಸಭಾ ಕ್ಷೇತ್ರಕ್ಕೆ ಪ್ರಸ್ತುತ ಯಾವ ಯಾವ ಯೋಜನೆಯಡಿ ಎಷ್ಟು ಮನೆಗಳನ್ನು ಮಂಜೂರು ಮಾಡಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಆ) ರಾಜೀವ್‌ಗಾಂಧಿ ವಸತಿ ನಿಗಮದಿಂದ ಮನೆಗಳನ್ನು ಬ್ಲಾಕ್ ಮಾಡಲು ಕಾರಣವೇನು ; ಬ್ಲಾಕ್ ಮಾಡಿರುವ ಮನೆಗಳನ್ನು ಯಾವಾಗ ಅನ್‌ಬ್ಲಾಕ್ ಮಾಡಲಾಗುವುದು ?

## ಕೃಷಿ ಯೋಜನೆಗಳು

**ಶ್ರೀ ದೇವಾನಂದ್ ಪುಲಸಿಂಗ್ ಚವಾಣ್ (ನಾಗಠಾಣ) :–**

೩೯ (೧೬೭) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಧಾನಮಂತ್ರಿ ಕೃಷಿ ಸಮ್ಮಾನ್ ನಿಧಿ ಬಳಕೆಗೆ ಸರ್ಕಾರ ಅನುಸರಿಸಿರುವ ಮಾರ್ಗಸೂಚಿಗಳೇನು ; (ಮಾರ್ಗಸೂಚಿಗಳ ಆದೇಶದ ಪ್ರತಿ ನೀಡುವುದು)

(ಆ) ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯಡಿಯಲ್ಲಿ ಆಯ್ಕೆಯಾದ ವಿಜಯಪುರ ಹಾಗೂ ಚಡಚಣ ತಾಲ್ಲೂಕುಗಳ ಫಲಾನುಭವಿಗಳು ಎಷ್ಟು ; (ಕಳೆದ ಮೂರು ವರ್ಷಗಳ ಗ್ರಾಮವಾರು ಮಾಹಿತಿ ನೀಡುವುದು)

(ಇ) ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯ ಪೂರ್ಣ ಪ್ರಯೋಜನ ರೈತರಿಗೆ ದೊರಕಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಪ್ರಸಕ್ತ ಮುಂಗಾರಿನಲ್ಲಿ ವಿಜಯಪುರ ಜಿಲ್ಲೆಯಲ್ಲಿ ರಸಗೊಬ್ಬರಗಳ ಕೊರತೆಯುಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಸಮಸ್ಯೆ ಹಿಂಗಾರಿನ ಸಮಯದಲ್ಲಿ ಉಂಟಾಗದಂತೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಉ) ಪ್ರಸಕ್ತ ವರ್ಷದ ಮುಂಗಾರು ಹಾಗೂ ಹಿಂಗಾರಿನ ಬಿತ್ತನೆಗಾಗಿ ರೈತರಿಗೆ ಪೂರೈಸಲು ವಿಜಯಪುರ ಹಾಗೂ ಚಡಚಣ ತಾಲ್ಲೂಕುಗಳಿಗೆ ಸರ್ಕಾರದಿಂದ ಪೂರೈಕೆ ಮಾಡಲಾದ ಬೀಜ ಹಾಗೂ ರಸಗೊಬ್ಬರಗಳ ಪ್ರಮಾಣವೆಷ್ಟು ? (ಸಂಪೂರ್ಣ ವಿವರ ನೀಡುವುದು)

## ಬರ ಪರಿಹಾರ ಕಾರ್ಯಕ್ರಮ

**ಶ್ರೀ ದೇವಾನಂದ್ ಫುಲಸಿಂಗ್ ಚವಾಣ್ (ನಾಗಠಾಣ) :–**

೪೦ (೧೬೭೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ೩ ವರ್ಷಗಳಲ್ಲಿ ಬರಗಾಲ ಪೀಡಿತ ಜಿಲ್ಲೆಗಳೆಂದು ಯಾವ ಯಾವ ಜಿಲ್ಲೆಗಳನ್ನು ಘೋಷಿಸಲಾಗಿದೆ ;

(ಆ) ಈ ಜಿಲ್ಲೆಗಳಿಗೆ ಬರಗಾಲ ನಿರ್ವಹಣೆಗೆ ಸರ್ಕಾರ ಈವರೆಗೂ ನಿಗದಿಪಡಿಸಿ ಬಿಡುಗಡೆ ಮಾಡಿರುವ ಅನುದಾನವೆಷ್ಟು ; (ವಿಧಾನಸಭಾ ಕ್ಷೇತ್ರವಾರು ವಿವರ ನೀಡುವುದು)

(ಇ) ಬಿಡುಗಡೆಯಾದ ಅನುದಾನದಲ್ಲಿ ನಿರ್ವಹಿಸಿರುವ ಕಾಮಗಾರಿಗಳಾವುವು ; (ಜಿಲ್ಲಾವಾರು, ತಾಲ್ಲೂಕುವಾರು ಮತಕ್ಷೇತ್ರವಾರು ವಿವರ ನೀಡುವುದು)

(ಈ) ಈ ಪೈಕಿ ಪೂರ್ಣಗೊಂಡ ಹಾಗೂ ಅಪೂರ್ಣಗೊಂಡ ಕಾಮಗಾರಿಗಳು ಯಾವುವು ? (ವಿವರ ನೀಡುವುದು)

## ದೇವಸ್ಥಾನಗಳಿಗೆ ಅನುದಾನ

**ಶ್ರೀ ದೇವಾನಂದ್ ಫುಲಸಿಂಗ್ ಚವಾಣ್ (ನಾಗಠಾಣ) :–**

೪೧ (೧೬೯) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಮುಜರಾಯಿ ಮತ್ತು ಆರಾಧನಾ ದೇವಸ್ಥಾನಗಳ ಅಭಿವೃದ್ಧಿಗೆ ಬಿಡುಗಡೆ ಮಾಡಿರುವ ಅನುದಾನ ಎಷ್ಟು ; ( ಕ್ಷೇತ್ರವಾರು ವಿವರ ನೀಡುವುದು)

(ಆ) ನಾಗಠಾಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಎಷ್ಟು ಮುಜರಾಯಿ ದೇವಸ್ಥಾನಗಳಿವೆ ಅವುಗಳನ್ನು ಅಭಿವೃದ್ಧಿಪಡಿಸಲು ಎಷ್ಟು ಅನುದಾನ ನೀಡಲಾಗಿದೆ ;

(ಇ) ದೇವಸ್ಥಾನವನ್ನು ಮುಜರಾಯಿ ಇಲಾಖೆಯ ವ್ಯಾಪ್ತಿಗೊಳಪಡಿಸಲು ಇರುವ ಮಾನದಂಡಗಳೇನು ;

(ಈ) ರಾಜ್ಯದಲ್ಲಿರುವ ದೇವಸ್ಥಾನಗಳಿಂದ ವರ್ಷವಾರು ಉತ್ಪತ್ತಿಯಾಗುವ ಆದಾಯವನ್ನು ಯಾವ ಯಾವ ಕಾರ್ಯಗಳಿಗೆ ವಿನಿಯೋಗಿಸಲಾಗುತ್ತಿದೆ ? (ವಿವರ ನೀಡುವುದು)

## ಬೆಳೆ ವಿಮೆ ಯೋಜನೆ

**ಶ್ರೀ ದೊಡ್ಡಗೌಡರ ಮಹಾಂತೇಶ ಬಸವಂತರಾಯ (ಕಿತ್ತೂರು) :-**

೪೨ (೧೭೦) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರೈತರು ಬೆಳೆ ವಿಮೆ ಯೋಜನೆಯಡಿ ನೊಂದಾಯಿಸಿಕೊಂಡು ಬೆಳೆ ವಿಮೆ ನೊಂದಣಿ ಸಂದರ್ಭದಲ್ಲಿ ತಪ್ಪಾಗಿ ನೊಂದಣಿ ಮಾಡಿರುವುದರಿಂದ ಸರ್ಕಾರದಿಂದ ಬೆಳೆ ವಿಮೆ ಬಿಡುಗಡೆಯಾದರೂ ರೈತರ ಖಾತೆಗಳಿಗೆ ಜಮಾ ಆಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ಕಿತ್ತೂರು ವಿಧಾನಸಭಾ ಕ್ಷೇತ್ರದ ಬೆಳೆ ವಿಮೆ ಮಂಜೂರು ಮತ್ತು ರೈತರ ಖಾತೆಗಳಿಗೆ ಜಮಾ ಆಗಿರುವ ಪಟ್ಟಿ ನೀಡುವುದು)

(ಆ) ಹಾಗಿದ್ದಲ್ಲಿ, ರೈತರಿಗಾಗಿರುವ ಅನ್ಯಾಯ ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಯಾವ ಕಾಲಮಿತಿಯಲ್ಲಿ ಅನ್ಯಾಯ ಸರಿಪಡಿಸಿ ಬೆಳೆ ವಿಮೆಯನ್ನು ರೈತರ ಖಾತೆಗಳಿಗೆ ಜಮಾ ಮಾಡಲಾಗುವುದು ?

## ಬೆಳೆ ಪರಿಹಾರ

**ಶ್ರೀ ದೊಡ್ಡಗೌಡರ ಮಹಾಂತೇಶ ಬಸವಂತರಾಯ (ಕಿತ್ತೂರು) :-**

೪೩ (೧೭೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೯-೨೦ನೇ ಹಾಗೂ ೨೦೨೦-೨೧ನೇ ಸಾಲಿನಲ್ಲಿ ಭೀಕರ ಮಳೆ ಮತ್ತು ಪ್ರವಾಹದಿಂದ ಹಾನಿಗೊಳಗಾದ ಬೆಳೆ ನಷ್ಟಕ್ಕೆ ಪರಿಹಾರ ವಿತರಿಸಲಾಗಿದೆಯೇ ; (ಕಿತ್ತೂರು ವಿಧಾನಸಭಾ ಕ್ಷೇತ್ರದ ರೈತರ ಪಟ್ಟಿ ನೀಡುವುದು)

(ಆ) ೨೦೧೯–೨೦ನೇ ಸಾಲಿನ ಬೆಳೆ ಪರಿಹಾರ ಕಿತ್ತೂರು ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ಬೈಲಹೊಂಗಲ ಮತ್ತು ಕಿತ್ತೂರು ತಾಲ್ಲೂಕಿನ ಕೆಲ ರೈತರ ಬ್ಯಾಂಕ್ ಖಾತೆಗಳಿಗೆ ಜಮಾ ಆಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ಬೆಳೆ ಪರಿಹಾರ ಜಮಾ ಆಗದಿರುವ ರೈತರ ಪಟ್ಟಿ ನೀಡುವುದು)

(ಇ) ಬಂದಿದ್ದಲ್ಲಿ, ಈ ಬೆಳೆ ಪರಿಹಾರ ಜಮಾ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಮನೆಗಳ ನಿರ್ಮಾಣ

**ಶ್ರೀ ದೊಡ್ಡಗೌಡರ ಮಹಾಂತೇಶ ಬಸವಂತರಾಯ (ಕಿತ್ತೂರು) :–**

೪೪ (೧೭೨) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೯–೨೦ನೇ ಹಾಗೂ ೨೦೨೦–೨೧ನೇ ಸಾಲಿನಲ್ಲಿ ಭೀಕರ ಮಳೆ ಮತ್ತು ಪ್ರವಾಹದಿಂದ ಕಿತ್ತೂರು ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ಬೈಲಹೊಂಗಲ ಮತ್ತು ಕಿತ್ತೂರು ತಾಲ್ಲೂಕಿನಲ್ಲಿ ಬಿದ್ದ ಮನೆಗಳೆಷ್ಟು ; ( A.B.C ವರ್ಗವಾರು ಫಲಾನುಭವಿಗಳ ಪಟ್ಟಿ ನೀಡುವುದು)

(ಆ) ೨೦೧೯–೨೦ನೇ ಸಾಲಿನಲ್ಲಿ ಬಿದ್ದ ಮನೆಗಳಿಗೆ ಸಂಪೂರ್ಣವಾಗಿ ಅನುದಾನ ವಿತರಿಸಲಾಗಿದೆಯೇ ;

(ಇ) ಕೆಲವೊಂದು ಫಲಾನುಭವಿಗಳಿಗೆ ಅನುದಾನ ಬರದೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ( A.B.C ವರ್ಗವಾರು ಅನುದಾನ ಜಮಾ ಆಗದಿರುವ ಪಟ್ಟಿ ನೀಡುವುದು)

(ಈ) ೨೦೧೯-೨೦ನೇ ಸಾಲಿನಲ್ಲಿ ಅನುದಾನ ಜಮಾ ಆಗದೆ ಜಿ.ಪಿ.ಎಸ್. ಆಗಿರುವ ಫಲಾನುಭವಿಗಳನ್ನು ೨೦೨೦-೨೧ನೇ ಸಾಲಿನಲ್ಲಿ ಪರಿಗಣಿಸಲು ಸರ್ಕಾರಕ್ಕಿರುವ ತೊಂದರೆಗಳೇನು ;

(ಉ) ೨೦೨೦-೨೧ನೇ ಸಾಲಿನಲ್ಲಿ ಈ ಫಲಾನುಭವಿಗಳನ್ನು ಪರಿಗಣಿಸಲು ಸರ್ಕಾರ ತೀರ್ಮಾನಿಸಿದೆಯೇ ?

## ರಸ್ತೆಗಳ ಅಭಿವೃದ್ಧಿ

**ಶ್ರೀ ದೊಡ್ಡಗೌಡರ ಮಹಾಂತೇಶ ಬಸವಂತರಾಯ (ಕಿತ್ತೂರು) :-**

೪೫ (೧೭೩) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೯-೨೦ನೇ ಹಾಗೂ ೨೦೨೦-೨೧ನೇ ಸಾಲಿನಲ್ಲಿ ಭೀಕರ ಮಳೆ ಮತ್ತು ಪ್ರವಾಹದಿಂದ ಬೆಳಗಾವಿ ಜಿಲ್ಲೆ ಕಿತ್ತೂರು ಮತಕ್ಷೇತ್ರದ ರಸ್ತೆಗಳು ತುಂಬಾ ಹಾನಿಗೊಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸದರಿ ಹಾನಿಗೊಳಗಾದ ಪಟ್ಟಿಯಲ್ಲಿ ಎಂ.ಕೆ.ಹುಬ್ಬಳ್ಳಿ, ಬೈಲವಾಡ, ಸಂಪಗಾಂವ-ಕರಡಿಗುದ್ದಿ ಮತ್ತು ಚಿಕ್ಕಬಾಗೇವಾಡಿ, ಎಂ.ಕೆ.ಹುಬ್ಬಳ್ಳಿ ರಸ್ತೆಗಳು ಸೇರಿರುವುದೇ ;

(ಇ) ಹಾಗಿದ್ದಲ್ಲಿ, ಈ ರಸ್ತೆಗಳ ಅಭಿವೃದ್ಧಿಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಯಾವ ಕಾಲಮಿತಿಯಲ್ಲಿ ಸದರಿ ರಸ್ತೆಗಳನ್ನು ಅಭಿವೃದ್ಧಿ ಪಡಿಸಲಾಗುವುದು ?

# ವಸತಿ ಯೋಜನೆ

**ಶ್ರೀ ಈಶ್ವರ್ ಖಂಡ್ರೆ (ಭಾಲ್ಕಿ) :-**

೪೬ (೧೯೯) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಒಂದು ಲಕ್ಷ ಬಹುಮಹಡಿ ಬೆಂಗಳೂರು ವಸತಿ ಯೋಜನೆಯು ಯಾವ ಹಂತದಲ್ಲಿದೆ ; (ಸಂಪೂರ್ಣ ವಿವರ ನೀಡುವುದು)

(ಆ) ಒಂದನೇ ಮತ್ತು ಎರಡನೇ ಹಂತದಲ್ಲಿ ಪ್ಯಾಕೇಜ್ ಕಾಮಗಾರಿಗಳಿಗೆ ಟೆಂಡರ್ ಕರೆದು ಗುತ್ತಿಗೆ ಒದಗಿಸಲಾಗಿದೆಯೇ ; (ವಿವರ ನೀಡುವುದು)

(ಇ) ಈ ಟೆಂಡರ್‌ನಲ್ಲಿ ಯಾವ ಯಾವ ಕಂಪನಿಗಳಿಗೆ ಎಷ್ಟೆಷ್ಟು ಮನೆಗಳ ಗುತ್ತಿಗೆಯನ್ನು ವಹಿಸಲಾಗಿದೆ ಮತ್ತು ಇಲ್ಲಿಯವರೆಗೆ ಗುತ್ತಿಗೆದಾರರಿಗೆ ಎಷ್ಟು ಹಣವನ್ನು ಮುಂಗಡವಾಗಿ ಸಂದಾಯ ಮಾಡಲಾಗಿದೆ ; (ಸಂಪೂರ್ಣ ಪ್ಯಾಕೇಜ್ವಾರು ವಿವರ ನೀಡುವುದು)

(ಈ) ಈ ಯೋಜನೆಯಡಿ ನೂರಾರು ಕೋಟಿ ಹಣವನ್ನು ಗುತ್ತಿಗೆದಾರರಿಗೆ ಮುಂಗಡವಾಗಿ ಕೊಟ್ಟರೂ ಸಹಿತ ಇಲ್ಲಿಯವರೆಗೆ ಒಂದೇ ಒಂದು ಮನೆ ಪ್ರಾರಂಭವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ವಿಳಂಬಕ್ಕೆ ಕಾರಣವೇನು ; ಹಾಗಾದಲ್ಲಿ ಯಾವ ಕಾಲಮಿತಿಯೊಳಗೆ ಈ ಕಾಮಗಾರಿಯನ್ನು ಪೂರ್ಣಗೊಳಿಸಿ ವಸತಿರಹಿತ ಫಲಾನುಭವಿಗಳಿಗೆ ಮನೆಗಳನ್ನು ವಿತರಿಸಲಾಗುವುದು ? (ವಿವರ ನೀಡುವುದು)

## ಬಂಗ್ಲೋ ನಿರ್ಮಾಣ

ಶ್ರೀ ಈಶ್ವರ್ ಖಂಡ್ರೆ (ಭಾಲ್ಕಿ) :-

೪೭ (೨೦೦) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲಾಧಿಕಾರಿಗಳ (ದುರ್ಗ ದರ್ಶಿನಿ) ಬಂಗ್ಲೋ ಏರಿಯಾ ಪುರಾತತ್ವ ಇಲಾಖೆಯ ವ್ಯಾಪ್ತಿಗೆ ಬರುವುದರಿಂದ ಆ ಇಲಾಖೆಯ ಪರವಾನಿಗಿ ಇಲ್ಲದೆ ಹಾಗೂ ಸರ್ಕಾರದ ಪರವಾನಿಗಿ ಇಲ್ಲದೆ ಕಟ್ಟಡ ಸುಸ್ಥಿತಿಯಲ್ಲಿದ್ದರೂ ಬಂಗ್ಲೋವನ್ನು ಅಕ್ರಮವಾಗಿ ನೆಲಸಮ ಮಾಡಲಾಗಿದೆಯೇ ;

(ಆ) ಬೀದರ್ ಜಿಲ್ಲಾಧಿಕಾರಿಯವರ ಹೊಸ ಬಂಗ್ಲೋ ನಿರ್ಮಾಣಕ್ಕೆ ಯಾವುದೇ ಪರವಾನಿಗಿ ಇಲ್ಲದೆ ಟೆಂಡರ್ ಕರೆಯದೆ ಕೋಟ್ಯಾಂತರ ರೂಪಾಯಿ ಖರ್ಚು ಮಾಡಿ ನಿರ್ಮಾಣ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಇ) ಹಾಗಿದ್ದಲ್ಲಿ, ಈ ಬಗ್ಗೆ ತನಿಖೆಗೆ ಆದೇಶಿಸಿ, ಅಕ್ರಮದಲ್ಲಿ ಭಾಗಿಯಾದವರ ವಿರುದ್ಧ ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು ?

## ರಾಜ್ಯ ಹೆದ್ದಾರಿ ಅಭಿವೃದ್ಧಿ ಕಾಮಗಾರಿಗಳು

ಶ್ರೀ ಈಶ್ವರ್ ಖಂಡ್ರೆ (ಭಾಲ್ಕಿ) :-

೪೮ (೨೦೧) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೩ ವರ್ಷಗಳ ಅವಧಿಯಲ್ಲಿ ರಾಜ್ಯ ಹೆದ್ದಾರಿ ಅಭಿವೃದ್ಧಿ ಕಾಮಗಾರಿಗಳ ಅನುಷ್ಠಾನಕ್ಕಾಗಿ ಆಹ್ವಾನಿಸಿದ ಟೆಂಡರ್ ಪ್ರಕಟಣೆಗಳು ಎಷ್ಟು ; (ಜಿಲ್ಲಾವಾರು ಇಂಡೆಂಟ್ ಸಹಿತ ವಿವರ ನೀಡುವುದು)

(ಆ) ಈ ಅವಧಿಯಲ್ಲಿ ರಾಜ್ಯ ಹೆದ್ದಾರಿ ಅಭಿವೃದ್ಧಿ ಕಾಮಗಾರಿಯ ಟೆಂಡರ್ ಪ್ರಕ್ರಿಯೆಯಲ್ಲಿ ಸುಳ್ಳು ದಾಖಲೆ ಸೃಷ್ಟಿಸಿ, ಟೆಂಡರ್ ಪ್ರಕ್ರಿಯೆಯಲ್ಲಿ ಭಾಗಿಯಾದಂತಹ ಎಷ್ಟು ಪ್ರಕರಣಗಳನ್ನು ಗುರುತಿಸಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ರಸ್ತೆಯ ಸಂಪರ್ಕ ಜಾಲ

**ಶ್ರೀ ಈಶ್ವರ್ ಖಂಡ್ರೆ (ಭಾಲ್ಕಿ) :-**

೪೯ (೨೦೨) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ರಾಜ್ಯದ ಒಟ್ಟು ಭೌಗೋಳಿಕ ಕ್ಷೇತ್ರದ ಪ್ರತಿ ೧೦೦ ಚದರ ಕಿ.ಮೀ.ಗೆ ಸರಾಸರಿ ರಸ್ತೆ ಉದ್ದ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಕಲ್ಯಾಣ ಕರ್ನಾಟಕ ಭಾಗದ ಒಟ್ಟು ಭೌಗೋಳಿಕ ಕ್ಷೇತ್ರದ ಪ್ರತಿ ೧೦೦ ಚದರ ಕಿ.ಮೀ.ಗೆ ಸರಾಸರಿ ರಸ್ತೆ ಉದ್ದ ಕಡಿಮೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ರಸ್ತೆಯ ಸಂಪರ್ಕ ಜಾಲ ಕಡಿಮೆ ಇರುವುದರಿಂದ ಆರ್ಥಿಕ ಪ್ರಗತಿ ಕುಂಠಿತವಾಗಿರುವುದರಿಂದ ಸಮತೋಲನಾ ಸಾಧಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಸದರಿ ಸರಾಸರಿ ರಸ್ತೆ ಉದ್ದ ಹೆಚ್ಚಿಸಲು ಪ್ರಸಕ್ತ ವರ್ಷ ಸರ್ಕಾರ ಹೆಚ್ಚಿನ ಅನುದಾನ ಬಿಡುಗಡೆ ಮಾಡಲು ಕ್ರಮ ಕೈಗೊಳ್ಳುವುದೇ ?

## ಸರ್ಕಾರಿ ಜಮೀನು ಒತ್ತುವರಿ

**ಶ್ರೀ ಗೂಳಿಹಟ್ಟಿ ಡಿ. ಶೇಖರ್ (ಹೊಸದುರ್ಗ) :–**

೫೦ (೫೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ಜಿಲ್ಲೆ ಆನೇಕಲ್ ತಾಲ್ಲೂಕು ಜಿಗಣಿ ಹೋಬಳಿ ಸರ್ವೆ ನಂ.೩೫೪, ೩೫೫, ೩೫೬ ರಲ್ಲಿರುವ ಒಟ್ಟು ಸರ್ಕಾರಿ ಜಮೀನು ಎಷ್ಟು ; ಈ ಪೈಕಿ ಒತ್ತುವರಿಯಾಗಿರುವ ಜಮೀನೆಷ್ಟು ; (ವಿಸ್ತೀರ್ಣವಾರು ಒತ್ತುವರಿದಾರರ ವಿವರ ನೀಡುವುದು)

(ಆ) ಸದರಿ ಸರ್ವೆ ನಂ.೩೫೫ ರ ಬಹುಮಹಡಿ ಕಟ್ಟಡದಲ್ಲಿರುವ (GM ಇನ್‌ಫೇಸಿಟಿ) ಅಂತಸ್ತುಗಳೆಷ್ಟು : ಸದರಿ ಕಟ್ಟಡ ಕಟ್ಟಿರುವುದು ಅಧಿಕೃತವಾಗಿರುವುದೇ ?

## ಮನೆಗಳ ಮಂಜೂರು

**ಶ್ರೀ ಗೂಳಿಹಟ್ಟಿ ಡಿ. ಶೇಖರ್ (ಹೊಸದುರ್ಗ) :–**

೫೧ (೫೯) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ೨೦೧೮–೧೯ನೇ ಸಾಲಿನಿಂದ ಇಲ್ಲಿಯವರೆಗೆ ಗ್ರಾಮೀಣ ಪ್ರದೇಶದಲ್ಲಿ ಮಂಜೂರಾಗಿರುವ ಮನೆಗಳ ಸಂಖ್ಯೆಗಳೆಷ್ಟು ; (ವಿವರ ನೀಡುವುದು)

(ಆ) ಈ ಪೈಕಿ ಹೊಸದುರ್ಗ ತಾಲ್ಲೂಕಿಗೆ ಮಂಜೂರಾಗಿರುವ ಮನೆಗಳೆಷ್ಟು ? (ವಿವರ ನೀಡುವುದು)

## ಮೊಬೈಲ್ ದೂರವಾಣಿ ಒದಗಿಸುವುದು

**ಶ್ರೀ ಹೆಚ್. ಹಾಲಪ್ಪ ಹರತಾಳ್ (ಸಾಗರ) :-**

೫೨ (೧೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕಂದಾಯ ಇಲಾಖೆಯ ಶಿರಸ್ತೆದಾರರುಗಳಿಗೆ ಹಾಗೂ ಗ್ರಾಮ ಲೆಕ್ಕಾಧಿಕಾರಿಗಳಿಗೆ ದೈನಂದಿನ ಕಛೇರಿ ಕಾರ್ಯಗಳಿಗೆ ಅನುಕೂಲವಾಗುವಂತೆ ಇಲಾಖೆವತಿಯಿಂದ ಮೊಬೈಲ್ ಫೋನ್‌ಗಳನ್ನು ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಹಾಗಿದ್ದಲ್ಲಿ, ಮೊಬೈಲ್ ಫೋನ್‌ಗಳನ್ನು ನೀಡಲು ಇರುವ ತೊಂದರೆಗಳೇನು ; ಹಾಗೂ ಈ ಬಗ್ಗೆ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಪರಿಹಾರ ನೀಡುವುದು

**ಶ್ರೀ ಹೆಚ್. ಹಾಲಪ್ಪ ಹರತಾಳ್ (ಸಾಗರ) :-**

೫೩ (೧೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಾಗರ ತಾಲ್ಲೂಕಿನ ಬಾರಂಗಿ ಹೋಬಳಿಯ ನಂದೋಡಿ ಗ್ರಾಮದಲ್ಲಿ ಇತ್ತೀಚೆಗೆ ಬಿದ್ದ ಭಾರೀ ಮಳೆಯಿಂದಾಗಿ ಗುಡ್ಡ ಕುಸಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಗ್ರಾಮದ ಸುಮಾರು ೧೬ ಮನೆಗಳಿಗೆ ಭಾರಿ ನಷ್ಟವಾಗಿದ್ದು ಸದರಿ ಮನೆಗಳಿಗೆ ಪರಿಹಾರ ನೀಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಪರಿಹಾರ ಮತ್ತು ಕೈಗೊಂಡ ಕ್ರಮದ ಪೂರ್ಣ ವಿವರ ನೀಡುವುದು)

(ಇ) ಸದರಿ ಗುಡ್ಡ ಕುಸಿತದ ಪ್ರದೇಶದಲ್ಲಿ ತಡೆಗೋಡೆ ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ? (ಪೂರ್ಣ ವಿವರ ನೀಡುವುದು)

## ವಸತಿ ಗೃಹ

**ಶ್ರೀ ಹೆಚ್. ಹಾಲಪ್ಪ ಹರತಾಳ್ (ಸಾಗರ) :-**

೫೪ (೧೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಗ್ರಾಮ ಲೆಕ್ಕಾಧಿಕಾರಿಗಳು ಮತ್ತು ಶಿರಸ್ತೆದಾರರಿಗೆ ಅವರುಗಳ ಕರ್ತವ್ಯ ನಿರ್ವಹಿಸುತ್ತಿರುವ ಸ್ಥಳಗಳಲ್ಲಿಯೇ ವಸತಿ ನಿಲಯಗಳನ್ನು ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಹಾಗಿದ್ದಲ್ಲಿ, ಸದರಿ ನೌಕರರು ಸಮಯಕ್ಕೆ ಸರಿಯಾಗಿ ಕಛೇರಿಯಲ್ಲಿ ಹಾಜರಾಗಿ ಸ್ಥಳೀಯ ಸಮಸ್ಯೆಗಳನ್ನು ಪರಿಹರಿಸಲು ಅನುಕೂಲವಾಗುವಂತೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಗ್ರಾಮೀಣ ಪ್ರದೇಶಗಳಲ್ಲಿ ಕಂದಾಯ ಇಲಾಖೆ ನೌಕರರಿಗೆ ವಸತಿ ನಿಲಯಗಳನ್ನು ನಿರ್ಮಿಸಲು ಇರುವ ತೊಂದರೆಗಳೇನು ; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಜಲಸಾರಿಗೆ ಯೋಜನೆ

**ಶ್ರೀ ಎನ್.ಎ. ಹ್ಯಾರಿಸ್ (ಶಾಂತಿನಗರ) :-**

೫೫ (೯೧) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ವಿಶಾಲ ವಿಸ್ತೀರ್ಣದ ಕರಾವಳಿ ಪ್ರದೇಶಗಳನ್ನು ಹೊಂದಿರುವ ಕಾರಣ ಒಳನಾಡು ಜಲಸಾರಿಗೆ ವಲಯವನ್ನು ಬಳಸಿಕೊಳ್ಳುವಲ್ಲಿ ಸರ್ಕಾರದ ಮುಂದಿರುವ ಪ್ರಸ್ತಾವನೆಗಳು ಯಾವುವು ;

(ಆ) ಸಾರ್ವಜನಿಕರಿಗೆ ಮತ್ತು ಸರಕು ಸಾಗಾಣಿಕೆಗೆ ಪೂರಕ ವ್ಯವಸ್ಥೆಯನ್ನು ಮಾಡುವ ನಿಟ್ಟಿನಲ್ಲಿ ಸರ್ಕಾರದ ಕ್ರಮಗಳೇನು ;

(ಇ) ಒಳನಾಡು ಜಲಸಾರಿಗೆ ವ್ಯವಸ್ಥೆಯನ್ನು ಬಳಸಿಕೊಂಡು ಪ್ರವಾಸೋದ್ಯಮ ಕ್ಷೇತ್ರಕ್ಕೂ ನೆರವಾಗುವ ಕ್ರಿಯಾ ಯೋಜನೆಗಳನ್ನು ಸರ್ಕಾರ ಸಿದ್ಧಪಡಿಸಿದೆಯೇ ; ಹಾಗಿದ್ದಲ್ಲಿ, ಆ ಕುರಿತಾದ ವಿವರಗಳೇನು;

(ಈ) ಇತರ ಕರಾವಳಿ ಮತ್ತು ಒಳನಾಡು ಜಲಸಾರಿಗೆ ವ್ಯವಸ್ಥೆಯನ್ನು ಹೊಂದಿರುವ ರಾಜ್ಯಗಳು ಮತ್ತು ವಿದೇಶಗಳಲ್ಲಿನ ಆಧುನೀಕರಣ ತಂತ್ರಜ್ಞಾನ ಬಳಕೆ ವ್ಯವಸ್ಥೆಗಳನ್ನು ಸಮೀಕ್ಷಿಸಿ, ರಾಜ್ಯದಲ್ಲೂ ಅಂತಹ ಬಹುಪಯೋಗಿ ವ್ಯವಸ್ಥೆಯನ್ನು ಒದಗಿಸಿಕೊಡುವಲ್ಲಿ ಸರ್ಕಾರದ ನಿಲುವೇನು ?

## ವಸತಿ ಯೋಜನೆಗಳ ಅನುಷ್ಠಾನ

**ಶ್ರೀ ಎನ್.ಎ. ಹ್ಯಾರಿಸ್ (ಶಾಂತಿನಗರ) :-**

೫೬ (೧೯೨) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೩ ವರ್ಷಗಳಲ್ಲಿ ಬೆಂಗಳೂರು ಮಹಾನಗರ ಪ್ರದೇಶ ವ್ಯಾಪ್ತಿಯಲ್ಲಿ ಬಡ ಮತ್ತು ಮಧ್ಯಮ ವರ್ಗದ ಜನರು ವಸತಿ ಸಮಸ್ಯೆಯನ್ನು ಎದುರಿಸುತ್ತಿರುವುದರಿಂದ ಅನುಷ್ಠಾನಗೊಳಿಸುತ್ತಿರುವ ವಸತಿ ಯೋಜನೆಗಳ ಗುರಿ ಮತ್ತು ಸಾಧನೆಗಳೆಷ್ಟು ;

(ಆ) ಕಳೆದ ೩ ವರ್ಷಗಳಲ್ಲಿ ವಸತಿ ಯೋಜನ ಸೌಲಭ್ಯಗಳನ್ನು ಒದಗಿಸಿಕೊಡುವಂತೆ ಮನವಿ ಮಾಡಿಕೊಂಡ ಫಲಾನುಭವಿಗಳ ಸಂಖ್ಯೆಗಳೆಷ್ಟು ಮತ್ತು ಅವುಗಳಲ್ಲಿ ಯೋಜನಾ ಸೌಲಭ್ಯಗಳನ್ನು ಒದಗಿಸಿಕೊಟ್ಟ ಮತ್ತು ಬಾಕಿ ಇರುವ ಮನವಿಗಳ ಸಂಖ್ಯೆ ಎಷ್ಟು;

(ಇ) ಸದರಿ ವರ್ಷಗಳಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಮಂಜೂರು ಮಾಡಿದ, ಖರ್ಚು ಮಾಡಿದ ಮತ್ತು ಉಳಿಕೆ ಅನುದಾನಗಳೆಷ್ಟು ; ಪರಿಪೂರ್ಣರೀತ್ಯಾ ವಸತಿ ಯೋಜನೆಗಳ ಅನುಷ್ಠಾನಕ್ಕಾಗಿ ಸರ್ಕಾರದ ಕ್ರಿಯಾ ಯೋಜನೆಗಳೇನು ? (ವಿವರ ನೀಡುವುದು)

## ರಸ್ತೆ ಕಾಮಗಾರಿ

**ಶ್ರೀ ಹ್ಯಾರಿಸ್ ಎನ್.ಎ. (ಶಾಂತಿನಗರ) :–**

೫೭ (೧೯೩) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಲ್ಲಿ ಲೋಕೋಪಯೋಗಿ ಇಲಾಖಾ ವ್ಯಾಪ್ತಿಯಲ್ಲಿ ಕೈಗೊಂಡ ರಾಜ್ಯ ರಸ್ತೆ ಕಾಮಗಾರಿಗಳಿಗೆ ನಿಗದಿಪಡಿಸಿರುವ ಅನುದಾನದ ಗುರಿ ಮತ್ತು ಸಾಧನೆಗಳೇನು ; (ವಿವರ ನೀಡುವುದು)

(ಆ) ರಾಜ್ಯ ರಸ್ತೆಗಳನ್ನು ಅಭಿವೃದ್ಧಿಪಡಿಸಲಾದ ರಾಜ್ಯ ರಸ್ತೆಗಳೆಷ್ಟು; ನೂತನ ರಾಜ್ಯ ರಸ್ತೆಗಳ ನಿರ್ಮಾಣದ ಪ್ರಮಾಣಗಳೆಷ್ಟು ; ಮುಂದಿನ ವರ್ಷಗಳಲ್ಲಿ ಕೈಗೊಳ್ಳಬಹುದಾದ ರಸ್ತೆಗಳ ವಿವರಗಳೇನು ;

(ಇ) ಸದರಿ ಅವಧಿಯಲ್ಲಿ ರಾಜ್ಯದಲ್ಲಿ ಕೇಂದ್ರ ಸರ್ಕಾರದವರು ಕೈಗೊಂಡ ರಾಷ್ಟ್ರೀಯ ಹೆದ್ದಾರಿ ಕಾಮಗಾರಿಗಳೆಷ್ಟು; ಪೂರ್ಣ ಹಾಗೂ ಅಪೂರ್ಣವಾಗಿರುವ ಕಾಮಗಾರಿಗಳೆಷ್ಟು; ಈ ಕುರಿತು ಕೇಂದ್ರದವರ ಅನುದಾನದ ಪ್ರಮಾಣ ಹಾಗೂ ರಾಷ್ಟ್ರೀಯ ಹೆದ್ದಾರಿ ಕಾಮಗಾರಿಗಳ ಯೋಜನೆಗಳೇನು ? (ವಿವರ ನೀಡುವುದು)

## ವಸತಿ ಸೌಲಭ್ಯಗಳು

**ಶ್ರೀ ಹ್ಯಾರಿಸ್ ಎನ್.ಎ. (ಶಾಂತಿನಗರ) :-**

೫೮ (೧೯೪) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗ್ರಾಮಾಂತರ ಪ್ರದೇಶಗಳಲ್ಲಿ ವಸತಿ ಹೀನರಿಗೆ ವಸತಿ ಸೌಲಭ್ಯಗಳನ್ನು ಒದಗಿಸಿಕೊಡುವ ನಿಟ್ಟಿನಲ್ಲಿ ವಸತಿ ಇಲಾಖೆಯವರ ಸಾಧನೆಗಳೇನು; (ವಿವರ ನೀಡುವುದು)

(ಆ) ಈ ಪ್ರದೇಶಗಳಲ್ಲಿ ವಸತಿ ಸೌಲಭ್ಯವನ್ನು ಒದಗಿಸಿಕೊಡುವಂತೆ ಕೋರಿಕೆ ಬಂದ ಅರ್ಜಿಗಳ ಸಂಖ್ಯೆ ಎಷ್ಟು ಮತ್ತು ಆ ಪೈಕಿ ನೀಡಲಾಗಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ; ಆ ಕುರಿತಾದ ಜಿಲ್ಲಾವಾರು ವಿವರಗಳು ಮತ್ತು ಅಂಕಿ-ಅಂಶಗಳೇನು;

(ಇ) ಕಳೆದ ೩ ವರ್ಷಗಳಲ್ಲಿ ಈ ಪ್ರದೇಶಗಳಿಗೆ ವಸತಿ ಸೌಲಭ್ಯಗಳನ್ನು ಒದಗಿಸಿಕೊಡುವ ಕುರಿತಾದ ಕೇಂದ್ರ ಸರ್ಕಾರದ ಯೋಜನೆಗಳನ್ವಯ ಸಂದಾಯವಾಗಿರುವ ಅನುದಾನದ ಮೊತ್ತ ಎಷ್ಟು ;

(ಈ) ವಸತಿ ಹೀನರೆಲ್ಲರಿಗೂ ವಸತಿ ಸೌಲಭ್ಯಗಳನ್ನು ಒದಗಿಸಿಕೊಡುವ ಮಹತ್ವಾಕಾಂಕ್ಷಿ ಯೋಜನೆಗಳು ಮತ್ತು ಕ್ರಿಯಾ ಯೋಜನೆಗಳು ಯಾವುವು ? (ವಿವರ ನೀಡುವುದು)

## ವಿವಿಧ ವಸತಿ ಯೋಜನೆಗಳು

**ಶ್ರೀ ಹೂಲಗೇರಿ ಡಿ.ಎಸ್. (ಲಿಂಗಸಗೂರು) :-**

೫೯ (೪೨) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಯಚೂರು ಜಿಲ್ಲೆಯ ಲಿಂಗಸುಗೂರು, ಮುದಗಲ್ಲ ಪಟ್ಟಣಗಳಲ್ಲಿ ಈಗಾಗಲೇ ಘೋಷಣೆಯಾಗಿರುವ ಕೊಳಚೆ ಪ್ರದೇಶಗಳಲ್ಲಿ ನಿವೇಶನ ರಹಿತ ಕುಟುಂಬಗಳಿಗೆ ವಸತಿ ನಿರ್ಮಾಣ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಕಳೆದ ಮೂರು ವರ್ಷಗಳಲ್ಲಿ ರಾಯಚೂರು ಜಿಲ್ಲೆಯ ಲಿಂಗಸುಗೂರು ವಿಧಾನಸಭಾ ಕ್ಷೇತ್ರಕ್ಕೆ ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ ವತಿಯಿಂದ ಮಂಜೂರಾಗಿರುವ ಮನೆಗಳು ಎಷ್ಟು ; (ವಿವರ ನೀಡುವುದು)

(ಇ) ಸದರಿ ಅವಧಿಯಲ್ಲಿ ಈ ಕ್ಷೇತ್ರಕ್ಕೆ ವಿವಿಧ ವಸತಿ ಯೋಜನೆಯಡಿಯಲ್ಲಿ ಮಂಜೂರಾಗಿರುವ ಮನೆಗಳು ಎಷ್ಟು ಹಾಗೂ ನಿರ್ಮಾಣವಾಗದೆ ಇರುವ ಮನೆಗಳ ಸಂಖ್ಯೆ ಎಷ್ಟು? (ಸಂಪೂರ್ಣ ವಿವರ ನೀಡುವುದು)

## ನೂತನ ಮಿನಿ ವಿಧಾನಸೌಧ ನಿರ್ಮಾಣ

**ಶ್ರೀ ಹೂಲಗೇರಿ ಡಿ.ಎಸ್. (ಲಿಂಗಸಗೂರು) :-**

೬೦ (೪೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಯಚೂರು ಜಿಲ್ಲೆಯ ಲಿಂಗಸುಗೂರು ಪಟ್ಟಣದಲ್ಲಿ ಪ್ರಸ್ತುತ ಇರುವ ಮಿನಿ ವಿಧಾನಸೌಧವನ್ನು ಇತರೆ ಇಲಾಖೆಗಳ ವಸತಿ ನಿಲಯಗಳ ಉಪಯೋಗಕ್ಕೆ ಹಸ್ತಾಂತರಿಸಿ ಸ.ನಂ. ೧೯೭/೦೩ ರಲ್ಲಿ ನೂತನ ಮಿನಿ ವಿಧಾನಸೌಧ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ಈ ಜಿಲ್ಲೆಯ ಲಿಂಗಸುಗೂರು ತಾಲ್ಲೂಕಿನ ಐತಿಹಾಸಿಕ ಮುದಗಲ್ಲ ಪಟ್ಟಣವನ್ನು ನೂತನ ತಾಲ್ಲೂಕು ಕೇಂದ್ರವಾಗಿ ಘೋಷಣೆ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಇ) ಇತ್ತೀಚೆಗೆ ದೇವದುರ್ಗ ತಾಲ್ಲೂಕಿನ ಅರಕೇರಾ ಗ್ರಾಮ ಪಂಚಾಯಿತಿಯನ್ನು ಯಾವ ಯಾವ ಮಾನದಂಡಗಳ ಹಾಗೂ ಭೌಗೋಳಿಕ ಲಕ್ಷಣಗಳ ಆಧಾರದ ಮೇಲೆ ನೂತನ ತಾಲ್ಲೂಕು ಕೇಂದ್ರವಾಗಿ ಘೋಷಣೆ ಮಾಡಲಾಗಿದೆ ?

## ರಾಜ್ಯ ಹೆದ್ದಾರಿಗಳು

**ಶ್ರೀ ಹೂಲಗೇರಿ ಡಿ.ಎಸ್. (ಲಿಂಗಸಗೂರು) :–**

೭೧ (೪೪) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆಯ ಲಿಂಗಸುಗೂರು ಪಟ್ಟಣದಲ್ಲಿ ನೂತನ ಪ್ರವಾಸಿ ಮಂದಿರ ನಿರ್ಮಾಣ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು;

(ಆ) ಈ ಜಿಲ್ಲೆಯ ಲಿಂಗಸುಗೂರು ತಾಲ್ಲೂಕಿನ ಅಮದಿಹಾಳ ಗ್ರಾಮದ ಹತ್ತಿರ ಲೋಕೋಪಯೋಗಿ ಇಲಾಖೆಯ ವತಿಯಿಂದ ಶ್ರೀಮತಿ ಇಂದಿರಾಗಾಂಧಿ ವಸತಿ ಶಾಲೆ ನಿರ್ಮಾಣ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು :

(ಇ) ಈ ತಾಲ್ಲೂಕಿನಲ್ಲಿ ಹಾದು ಹೋಗಿರುವ SH-41 ಲಿಂಗಸುಗೂರುದಿಂದ ಶಿರಡೋಣ ಹಾಗೂ SH-20 ರಾಯಚೂರುದಿಂದ ಬಾಚಿವರೆಗೆ ಎರಡು ರಾಜ್ಯ ಹೆದ್ದಾರಿಗಳು ಸಂಪೂರ್ಣವಾಗಿ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ :

(ಈ) ಹಾಗಿದ್ದಲ್ಲಿ, ರಾಜ್ಯ ಹೆದ್ದಾರಿಗಳನ್ನು ತ್ವರಿತವಾಗಿ ಅಭಿವೃದ್ಧಿ ಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ವಸತಿ ನಿರ್ಮಾಣ

**ಶ್ರೀ ಕೃಷ್ಣ ಬೈರೇಗೌಡ (ಬ್ಯಾಟರಾಯನಪುರ) :–**

೬೨ (೨೨೫) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರವಾಹ ಪೀಡಿತರ ವಸತಿ ನಿರ್ಮಾಣದ ಉದ್ದೇಶಕ್ಕೆ ಪ್ರತಿ ಮನೆಗೆ ಬಿಡುಗಡೆ ಮಾಡಲಾದ ಹಣದಲ್ಲಿ ಏಕರೂಪತೆ ಇದೆಯೇ;

(ಆ) ಹಾಗಿದ್ದಲ್ಲಿ, ಕೊಡಗಿನಲ್ಲಿ ಮನೆಗಳನ್ನು ನಿರ್ಮಿಸಲು ಪ್ರತಿ ಮನೆಗೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ;

(ಇ) ರಾಜ್ಯದ ಉಳಿದ ಜಿಲ್ಲೆಗಳ ಸಂತ್ರಸ್ಥರ ಮನೆಗಳ ನಿರ್ಮಾಣಕ್ಕಾಗಿ ಪ್ರತಿ ಮನೆಗೆ ಎಷ್ಟು ಹಣವನ್ನು ಬಿಡುಗಡೆ ಮಾಡಲಾಗಿದೆ ;

(ಈ) ತಾರತಮ್ಯಕ್ಕೆ ಕಾರಣಗಳೇನು ; ಯಾವ ಮಾನದಂಡಗಳ ಆಧಾರದ ಮೇಲೆ ತಾರತಮ್ಯ ಮಾಡಲಾಗಿದೆ ? (ವಿವರ ನೀಡುವುದು)

## ಸರ್ಕಾರಿ ಜಮೀನು

**ಶ್ರೀ ಕೃಷ್ಣ ಬೈರೇಗೌಡ (ಬ್ಯಾಟರಾಯನಪುರ) :–**

೬೩ (೨೨೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಯಲಹಂಕ ತಾಲ್ಲೂಕು, ಜಾಲ ಹೋಬಳಿ, ಹೊಸಹಳ್ಳಿ ಗ್ರಾಮದಲ್ಲಿ ಉಳಿದಿರುವ ಸರ್ಕಾರಿ ಜಮೀನು ವಿಸ್ತೀರ್ಣವೆಷ್ಟು ; ಇದರಲ್ಲಿ ಯಾವ ಸಂಘ ಸಂಸ್ಥೆಗಳಿಗೆ ಎಷ್ಟೆಷ್ಟು ಜಮೀನುಗಳನ್ನು ಮಂಜೂರು ಮಾಡಲಾಗಿದೆ ;

(ಆ) ಉಳಿದಿರುವ ಸರ್ಕಾರಿ ಜಮೀನನ್ನು ಇತರೆ ಸಂಘ ಸಂಸ್ಥೆಗಳಿಗೆ ಮಂಜೂರು ಮಾಡಲು ಸರ್ಕಾರ ಉದ್ದೇಶಿಸಿದೆಯೇ;

(ಇ) ಉಳಿದಿರುವ ಸರ್ಕಾರಿ ಭೂಮಿಯನ್ನು ಗ್ರಾಮದ ಸ್ಮಶಾನ, ಶಾಲೆ, ಮೈದಾನ, ವಸತಿ ಹಾಗೂ ಇತರೆ ಉಪಯೋಗಕ್ಕೆ ಬೇಕೆಂದು ಗ್ರಾಮಸ್ಥರು ಮನವಿ ಹಾಗೂ ಪ್ರತಿಭಟನೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಉಳಿದಿರುವ ಭೂಮಿಯು ಗ್ರಾಮದ ಉಪಯೋಗಕ್ಕೆ ಮೀಸಲಿಡಲು ಸರ್ಕಾರದ ನಿಲುವೇನು ? (ವಿವರ ನೀಡುವುದು)

## ಮನೆ ಮತ್ತು ಗ್ರಾಮಗಳ ಮುಳುಗಡೆ

**ಶ್ರೀ ಕೃಷ್ಣ ಭೈರೇಗೌಡ (ಬ್ಯಾಟರಾಯನಪುರ) :–**

೬೪ (೨೨೭) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪದೇ ಪದೇ ಪ್ರವಾಹದಿಂದ ಮುಳುಗಡೆಯಾಗುತ್ತಿರುವ ಗ್ರಾಮಗಳ ಸ್ಥಳಾಂತರ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು;

(ಆ) ಪ್ರತಿ ವರ್ಷವು ಮುಳುಗಡೆಯಾಗುತ್ತಿರುವ ಗ್ರಾಮಗಳೆಷ್ಟು ; (ಕ್ಷೇತ್ರವಾರು ಮಾಹಿತಿ ನೀಡುವುದು)

(ಇ) ಪ್ರವಾಹ ಪೀಡಿತರ ಪ್ರದೇಶಗಳ ವ್ಯಾಪ್ತಿಯಲ್ಲಿ ಸರ್ಕಾರ ಎಷ್ಟು ನಿವೇಶನಗಳನ್ನು ೨೦೧೮–೧೯, ೨೦೧೯–೨೦ ಮತ್ತು ೨೦೨೦–೨೧ರ ಅವಧಿಯಲ್ಲಿ ನಿರ್ಮಾಣ ಮಾಡಲಾಗಿದೆ ;

(ಈ) ಎಷ್ಟು ನಿವೇಶನಗಳನ್ನು ಪ್ರವಾಹ ಪೀಡಿತರುಗಳಿಗೆ ಹಂಚಿಕೆ ಮಾಡಲಾಗಿದೆ ; ಯಾವ ಯಾವ ವರ್ಗದವರಿಗೆ ಹಂಚಿಕೆ ಮಾಡಲಾಗಿದೆ ; (ಕ್ಷೇತ್ರವಾರು ಮಾಹಿತಿ ನೀಡುವುದು)

(ಉ) ಕಳೆದ ವರ್ಷದ ಪ್ರವಾಹದಿಂದ ಕೊಚ್ಚಿ ಹೋದ ಮನೆಗಳ ಜಾಗದಲ್ಲಿಯೇ ಪುನಃ ಮನೆಗಳನ್ನು ಕಟ್ಟುತ್ತಿರುವುದರಿಂದ ಈ ವರ್ಷವೂ ಮುಳುಗಿವೆ ಎಂಬ ಆರೋಪಗಳು ಎಲ್ಲೆಲ್ಲಿ ಬಂದಿರುತ್ತವೆ? (ವಿವರ ನೀಡುವುದು)

## ಇಲಾಖಾ ವಿಚಾರಣೆ

ಶ್ರೀ ಕೃಷ್ಣ ಭೈರೇಗೌಡ (ಬ್ಯಾಟರಾಯನಪುರ) :–

೬೫ (೨೨೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇತ್ತೀಚೆಗೆ ಬೆಂಗಳೂರು ಉತ್ತರ ಉಪ ವಿಭಾಗಾಧಿಕಾರಿ, ಕೋವಿಡ್ ಲಾಕ್‌ಡೌನ್ ಅವಧಿಯಲ್ಲಿ ಕಂದಾಯ ವ್ಯಾಜ್ಯ ಪ್ರಕರಣಗಳಲ್ಲಿ ನಿಯಮಗಳನ್ನು ಮೀರಿ ಹಾಗೂ ಅಸಾಧಾರಣ ಸಂಖ್ಯೆಯಲ್ಲಿ ವಿಲೇ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಈ ಬಗ್ಗೆ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಲಾಗಿದೆಯೇ;

(ಇ) ಸಲ್ಲಿಸಿದ್ದಲ್ಲಿ, ನಿಯಮಗಳನ್ನು ಉಲ್ಲಂಘನೆ ಮಾಡಲಾಗಿರುವ ಅಧಿಕಾರಿಯನ್ನು ಅಮಾನತ್ತುಗೊಳಿಸುವ ಅಥವಾ ಅವರ ವಿರುದ್ಧ ಶಿಸ್ತು ಕ್ರಮಕ್ಕೆ ಶಿಫಾರಸ್ಸು ಮಾಡಲಾಗಿದೆಯೇ ;

(ಈ) ಮಾಡಿದ್ದಲ್ಲಿ, ಈ ಬಗ್ಗೆ ಶಿಸ್ತು ಕ್ರಮ ಕೈಗೊಳ್ಳಲಾಗಿದೆಯೇ ?

## ಇಲಾಖಾ ವಿಚಾರಣೆ

ಶ್ರೀ ಕೃಷ್ಣ ಭೈರೇಗೌಡ (ಬ್ಯಾಟರಾಯನಪುರ) :–

೬೬ (೨೫೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಇ) ೨೦೧೯ ಮತ್ತು ೨೦೨೦ ನೇ ವರ್ಷದ ಅವಧಿಯಲ್ಲಿ ಯಲಹಂಕ ತಾಲ್ಲೂಕು ತಹಶೀಲ್ದಾರ್ ಆಗಿ ಕಾರ್ಯನಿರ್ವಹಿಸಿದ್ದವರ ಮೇಲೆ ಬೆಂಗಳೂರು ಜಿಲ್ಲಾಧಿಕಾರಿಗಳು ಮತ್ತು ಇಲಾಖಾ ಪ್ರಧಾನ ಕಾರ್ಯದರ್ಶಿಗಳು ನೀಡಿರುವ ವರದಿ ಏನು ; (ವರದಿಯ ನಕಲು ನೀಡುವುದು)

(ಈ) ವರದಿಯಲ್ಲಿ ಸದರಿ ಅಧಿಕಾರಿಯನ್ನು ಅಮಾನತ್ತುಗೊಳಿಸುವ ಅಥವಾ ಇತರೆ ಶಿಸ್ತು ಕ್ರಮವನ್ನು ತೆಗೆದುಕೊಳ್ಳಲು ವರದಿಯಲ್ಲಿ ಶಿಫಾರಸ್ಸು ಮಾಡಲಾಗಿದೆಯೇ; ಹಾಗಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು ;

(ಉ) ಸದರಿ ಅಧಿಕಾರಿಯನ್ನು ಅಮಾನತ್ತುಗೊಳಿಸಿ, ಶಿಸ್ತು ಕ್ರಮ ಕೈಗೊಳ್ಳದೆ ಇರಲು ಕಾರಣವೇನು ? (ವಿವರ ನೀಡುವುದು)

## ಸರ್ಕಾರಿ ನೌಕರರ ಮುಂಬಡ್ತಿ

**ಶ್ರೀ ಕೃಷ್ಣಾರೆಡ್ಡಿ ಎಂ. (ಚಿಂತಾಮಣಿ) :–**

೬೭ (೫೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯದಲ್ಲಿ ಕಂದಾಯ ಇಲಾಖೆಯಲ್ಲಿ ನಿಯಮ (೩೨)ರಡಿಯಲ್ಲಿ ಗ್ರಾಮಲೆಕ್ಕಾಧಿಕಾರಿಗಳಿಗೆ ಪ್ರಭಾರ ಮುಂಬಡ್ತಿಯನ್ನು ನೀಡಿ ನಿಯಮದಂತೆ ಪ್ರಭಾರ ಮುಂಬಡ್ತಿ ನೀಡಿದ ಒಂದು ವರ್ಷದಲ್ಲಿ ನಿಯಮ (೪೨ಬಿ) ರ ಅಡಿಯಲ್ಲಿ ಖಾಯಂಗೊಳಿಸಲು ನಿಯಮ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ :

(ಆ) ಬಂದಿದ್ದಲ್ಲಿ, ನಿಯಮ (೩೨) ರಡಿಯಲ್ಲಿ ಗ್ರಾಮಲೆಕ್ಕಾಧಿಕಾರಿಗಳು ಪ್ರಭಾರ ಮುಂಬಡ್ತಿಯನ್ನು ಪಡೆದ ಎಷ್ಟು ನೌಕರರಿಗೆ ನಿಯಮ (೪೨ಬಿ) ರ ಅಡಿಯಲ್ಲಿ ಇದುವರೆವಿಗೂ ಖಾಯಂಗೊಳಿಸಲಾಗಿದೆ; (ಕಳೆದ ಮೂರು ವರ್ಷಗಳ ವಿವರ ನೀಡುವುದು)

(ಇ) ಕಂದಾಯ ಇಲಾಖೆಯಿಂದ ಅನ್ಯ ಇಲಾಖೆಯಲ್ಲಿ ಖಾಲಿಯಿರುವ ಹುದ್ದೆಗಳಿಗೆ ಶೇಕಡವಾರು ಮುಂಬಡ್ತಿ ನೀಡುವ ಅವಕಾಶವು ನಿಯಮಗಳಲ್ಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದಲ್ಲಿ, ಎಷ್ಟು ಜನ ಕಂದಾಯ ಇಲಾಖೆ ನೌಕರರನ್ನು ಖಾಲಿಯಿರುವ ಅನ್ಯ ಇಲಾಖೆಗೆ ಮುಂಬಡ್ತಿ ನೀಡಿ ವರ್ಗಾವಣೆ ಮಾಡಲಾಗಿದೆ ? (ಸಂಖ್ಯಾವಾರು ವಿವರ ನೀಡುವುದು)

## ದರಖಾಸ್ತು ಮಂಜೂರು ಅರ್ಜಿಗಳು

ಶ್ರೀ ಕೃಷ್ಣಾರೆಡ್ಡಿ ಎಂ. (ಚಿಂತಾಮಣಿ) :-

೬೮ (೫೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ನಮೂನೆ-೫೭ರ ದರಖಾಸ್ತು ಮಂಜೂರು ಜಮೀನು ಅರ್ಜಿ ಸಲ್ಲಿಸಲು ಮಾಹಿತಿ ಕೊರತೆಯಿಂದ ಫಲಾನುಭವಿಗಳಿಗೆ ಸಾಧ್ಯವಾಗಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಅರ್ಜಿ ಸಲ್ಲಿಸಲು ಅವಧಿಯನ್ನು ವಿಸ್ತರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಯಾವ ಕಾಲಮಿತಿಯೊಳಗೆ ಮತ್ತೊಂದು ಅವಧಿಗೆ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗುವುದು ? (ವಿವರ ನೀಡುವುದು)

## ನಮೂನೆ ೯೪ಸಿ ಮತ್ತು ೯೪ ಸಿಸಿ ಅರ್ಜಿಗಳು

ಶ್ರೀ ಕೃಷ್ಣಾರೆಡ್ಡಿ ಎಂ. (ಚಿಂತಾಮಣಿ) :-

೬೯(೫೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ನಮೂನೆ-೯೪ಸಿ ಮತ್ತು ೯೪ಸಿಸಿ ಯ ಮಾಹಿತಿ ಕೊರತೆಯಿಂದ ಅರ್ಜಿ ಸಲ್ಲಿಸಲು ಫಲಾನುಭವಿಗಳಿಗೆ ಸಾಧ್ಯವಾಗಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಅರ್ಜಿ ಸಲ್ಲಿಸುವ ಅವಧಿಯನ್ನು ವಿಸ್ತರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;

(ಇ) ಯಾವ ಕಾಲಮಿತಿಯೊಳಗೆ ಮತ್ತೊಂದು ಅವಧಿಗೆ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗುವುದು ? (ವಿವರ ನೀಡುವುದು)

## ನಾಡ ಕಛೇರಿಗಳ ಕಾಮಗಾರಿಗಳು

**ಶ್ರೀ ಕೃಷ್ಣಾರೆಡ್ಡಿ ಎಂ. (ಚಿಂತಾಮಣಿ) :-**

೭೦(೫೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಚಿಂತಾಮಣಿ ತಾಲ್ಲೂಕಿನಲ್ಲಿ ಮಂಜೂರಾಗಿರುವ ನಾಡಕಛೇರಿಗಳ ಕಾಮಗಾರಿಯು ಸ್ಥಗಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ನಾಡ ಕಛೇರಿಗಳ ನಿರ್ಮಾಣಕ್ಕೆ ಇಲ್ಲಿಯವರೆಗೆ ಖರ್ಚು ಮಾಡಲಾಗಿರುವ ಮೊತ್ತ ಎಷ್ಟು ; (ಕಳೆದ ಮೂರು ವರ್ಷಗಳ ವಿವರ ನೀಡುವುದು)

(ಈ) ಯಾವ ಯಾವ ಗುತ್ತಿಗೆದಾರರಿಗೆ ಈ ತನಕ ಎಷ್ಟು ಮೊತ್ತ ನೀಡಲಾಗಿದೆ ; (ಕಳೆದ ಮೂರು ವರ್ಷಗಳ ವಿವರ ನೀಡುವುದು)

(ಉ) ಯಾವ ಕಾಲಮಿತಿಯೊಳಗೆ ಬಾಕಿ ಮೊತ್ತ ಬಿಡುಗಡೆ ಮಾಡಲಾಗುವುದು ?

## ಮಿನಿ ವಿಧಾನಸೌಧ

ಶ್ರೀ ಕುಮಾರ ಬಂಗಾರಪ್ಪ ಎಸ್. (ಸೊರಬ) :-

೭೧ (೪೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ನಂಜುಂಡಪ್ಪ ವರದಿಯ ಪ್ರಕಾರ ಹಿಂದುಳಿದ ತಾಲ್ಲೂಕಾಗಿರುವ ಸೊರಬ ತಾಲ್ಲೂಕಿಗೆ ಮಿನಿ ವಿಧಾನಸೌಧ ಮಂಜೂರಾತಿ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಹಾಗಿದ್ದಲ್ಲಿ, ಮಿನಿ ವಿಧಾನಸೌಧ ನಿರ್ಮಾಣ ಮಾಡಲು ಸ್ಥಳ ಗುರುತಿಸಿ ಜಮೀನು ಮಂಜೂರಾತಿ ಮಾಡಲಾಗಿದೆಯೇ ;

(ಆ) ಹಾಗಿದ್ದಲ್ಲಿ, ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು?

## ಸರ್ಕಾರಿ ಭೂಮಿ

ಶ್ರೀ ಕುಮಾರಸ್ವಾಮಿ ಎಂ.ಪಿ. (ಮೂಡಿಗೆರೆ) :-

೭೨ (೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರಿ ಭೂಮಿಯಲ್ಲಿ ವಾಸವಿದ್ದರೂ ಅರಣ್ಯ ಇಲಾಖೆಯವರು ೪/೧ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ೪/೧ ಆಗಿರುವ ಪ್ರದೇಶದಲ್ಲಿ ವಾಸವಿರುವವರಿಗೆ ಯಾವ ರೀತಿ ಅನುಕೂಲ ಮಾಡಲಾಗಿದೆ ;

(ಇ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಇದುವರೆಗೂ ತೆಗೆದುಕೊಂಡಿರುವ ಕ್ರಮಗಳೇನು ?

## ಫಾರಂ ೫೦, ೫೩ ೫೭ ಅರ್ಜಿಗಳು

**ಶ್ರೀ ಕುಮಾರಸ್ವಾಮಿ ಎಂ.ಪಿ. (ಮೂಡಿಗೆರೆ) :-**

೭೩ (೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ನಗರ ಹಾಗೂ ಪಟ್ಟಣ ಪಂಚಾಯತಿ ವ್ಯಾಪ್ತಿಯಲ್ಲಿ ಫಾರಂ ೫೦, ೫೩, ೫೭ ಅರ್ಜಿಗಳನ್ನು ಮಂಜೂರಾತಿ ಮಾಡಲಾಗುವುದೇ;

(ಆ) ಸದರಿ ಪಂಚಾಯತಿ ವ್ಯಾಪ್ತಿಯಲ್ಲಿ ತಲತಲಾಂತರದಿಂದ ಅನಧಿಕೃತವಾಗಿ ಸಣ್ಣ ಮಟ್ಟದ ರೈತರು ಉಳುಮೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ವ್ಯಾಪ್ತಿಯ ಅಜು ಬಾಜಿನಲ್ಲಿ ಅಥವಾ ಮಧ್ಯದಲ್ಲಿ ಜಮೀನು ಹೊಂದಿದ ರೈತರು ಫಾರಂ ೫೦, ೫೩, ೫೭ ಅರ್ಜಿಗಳು ಸಲ್ಲಿಸಿದಲ್ಲಿ ಅವರಿಗೆ ಯಾವ ರೀತಿ ನ್ಯಾಯ ಒದಗಿಸಲಾಗುವುದು? (ಸಂಪೂರ್ಣ ವಿವರ ನೀಡುವುದು)

## ಬಂಧಿಖಾನೆ ನಿರ್ಮಾಣ

**ಶ್ರೀ ಕುಮಾರಸ್ವಾಮಿ ಹೆಚ್.ಕೆ. (ಸಕಲೇಶಪುರ) :-**

೭೪ (೨೧೦೩) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಹಾಸನ ನಗರದಲ್ಲಿ ಸುಮಾರು ೧೦೦ ವರ್ಷಗಳಷ್ಟು ಹಳೆಯದಾದ ಬಂಧಿಖಾನೆ ಇದ್ದು, ಈ ಬಂಧಿಖಾನೆಯ ಬದಲಿಗೆ ಹಾಸನ ನಗರದ ಹೊರವಲಯದ ಗಾಡೇನಹಳ್ಳಿ ಗ್ರಾಮದ ಸರ್ವೆ ನಂಬರ್ ೪೮೮ ರಲ್ಲಿ ಹೊಸದಾಗಿ ಬಂಧಿಖಾನೆ ನಿರ್ಮಿಸಲು ೪೦ ಎಕರೆ ಜಮೀನನ್ನು ಮಂಜೂರು ಮಾಡಿರುವುದು ಹಾಗೂ ೪೦ ಎಕರೆ ಜಾಗವು ಬಂಧಿಖಾನೆಯ ಇಲಾಖೆ ವಶದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಹೊಸ ಬಂಧಿಖಾನೆ ನಿರ್ಮಿಸುವ ಜಾಗವನ್ನು ಬಂಧಿಖಾನೆಯ ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್‌ರವರು ಸ್ಥಳ ಪರಿಶೀಲನೆ ಮಾಡಿ ಬಂಧಿಖಾನೆ ನಿರ್ಮಿಸಲು ಸೂಕ್ತ ಸ್ಥಳವೆಂದು ವರದಿ ನೀಡಿರುವುದು ನಿಜವೇ ;

(ಇ) ಲೋಕೋಪಯೋಗಿ ಇಲಾಖೆಯಿಂದ ಹೊಸ ಬಂಧಿಖಾನೆಯನ್ನು ನಿರ್ಮಿಸಲು ೧೯೮.೦೦ ಕೋಟಿ ರೂ.ಗಳ ಅಂದಾಜನ್ನು ತಯಾರಿಸಿ ಸರ್ಕಾರಕ್ಕೆ ಸಲ್ಲಿಸಿರುವುದು ನಿಜವೇ ; ಹಾಗಿದ್ದಲ್ಲಿ, ಹೊಸ ಬಂಧಿಖಾನೆಯನ್ನು ನಿರ್ಮಿಸುವ ಕಾಮಗಾರಿಯನ್ನು ಯಾವ ಕಾಲಮಿತಿಯಲ್ಲಿ ಕೈಗೆತ್ತಿಕೊಳ್ಳಲಾಗುವುದು ; (ಸಂಪೂರ್ಣ ವಿವರ ನೀಡುವುದು)

(ಈ) ಸದರ ಅಂದಾಜಿಗೆ ಲೋಕೋಪಯೋಗಿ ಇಲಾಖೆಯ ತಾಂತ್ರಿಕ ಸಲಹಾ ಸಮಿತಿಯು ಅನುಮತಿ ನೀಡಿರುವುದು ನಿಜವೇ ; ಹಾಗಿದ್ದಲ್ಲಿ, ಸದರಿ ಪ್ರಸ್ತಾವನೆಯು ಪ್ರಸ್ತುತ ಯಾವ ಹಂತದಲ್ಲಿದೆ? (ಸಂಪೂರ್ಣ ಮಾಹಿತಿ ನೀಡುವುದು)

## ರಾಜ್ಯ ಹೆದ್ದಾರಿ ಯೋಜನೆ

**ಶ್ರೀ ಕುಮಾರಸ್ವಾಮಿ ಹೆಚ್.ಕೆ. (ಸಕಲೇಶಪುರ) :–**

೭೫ (೨೧೪) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶಿವಮೊಗ್ಗ ಜಿಲ್ಲೆಯ ಲೋಕೋಪಯೋಗಿ ಇಲಾಖೆಯ ರಾಜ್ಯ ಮತ್ತು ಜಿಲ್ಲಾ/ಇತರೆ ಮುಖ್ಯ ರಸ್ತೆಗಳ ವಿವಿಧ ಲೆಕ್ಕಶೀರ್ಷಿಕೆಗಳಡಿಯಲ್ಲಿ ೫೦೫೪ ರಸ್ತೆ ಮತ್ತು ಸೇತುವೆ ನಿರ್ಮಾಣ,

೩೦೫೪– ರಸ್ತೆ ಮತ್ತು ಸೇತುವೆ ನಿರ್ಮಾಣ, ಕರ್ನಾಟಕ ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆ, ಕರ್ನಾಟಕ ರಾಜ್ಯ ರಸ್ತೆ ಅಭಿವೃದ್ಧಿ ನಿಗಮ, ಕರ್ನಾಟಕ ರಾಜ್ಯ ಹೆದ್ದಾರಿ ಯೋಜನೆ, ಫಾರಂ–ಸಿ ಯೋಜನೆ ಮುಂತಾದ ಯೋಜನೆಗಳ ಅಡಿಯಲ್ಲಿ ೨೦೧೯–೨೦ ಮತ್ತು ೨೦೨೦–೨೧ನೇ ಸಾಲಿನ ಆರ್ಥಿಕ ವರ್ಷದಲ್ಲಿ, ಆರ್ಥಿಕ ಇಲಾಖೆಯ ಅನುಮೋದನೆ ನಿರೀಕ್ಷಣೆ ಮೇರೆಗೆ ಮತ್ತು ಅಪೆಂಡಿಕ್ಸ್–ಇ ಒಳಗೆ ಸೇರಿಸುವ ಷರತ್ತಿಗೆ ಒಳಪಟ್ಟು ಮಂಜೂರು ಮಾಡಿರುವ ಕಾಮಗಾರಿಗಳು ಎಷ್ಟು ; ಈ ಕಾಮಗಾರಿಗಳ ಅಂದಾಜು ಮೊತ್ತವೆಷ್ಟು ; (ಕಾಮಗಾರಿವಾರು, ಯೋಜನಾವಾರು ಹಾಗೂ ವಿಧಾನಸಭಾ ಕ್ಷೇತ್ರವಾರು ಸಂಪೂರ್ಣ ವಿವರ ನೀಡುವುದು)

(ಆ) ಹಾಗಿದ್ದಲ್ಲಿ, ಸದರಿ ಕಾಮಗಾರಿಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆಯೇ ಮತ್ತು ಈ ಕಾಮಗಾರಿಗಳ ಅನುಷ್ಠಾನ ಯಾವ ಹಂತದಲ್ಲಿದೆ ; (ವಿಧಾನಸಭಾ ಕ್ಷೇತ್ರವಾರು ಸಂಪೂರ್ಣ ವಿವರ ನೀಡುವುದು)

(ಇ) ಈ ಮೇಲ್ಕಂಡ ಕಾಮಗಾರಿಗಳಿಗೆ ಬಿಡುಗಡೆಯಾಗಿರುವ ಹಣ ಭರವಸೆ ಪತ್ರಗಳೆಷ್ಟು ಮತ್ತು ಇವುಗಳಲ್ಲಿ ಎಷ್ಟು ತೀರುವಳಿ ಮಾಡಲಾಗಿದೆ ; (ವಿಧಾನಸಭಾ ಕ್ಷೇತ್ರವಾರು ಸಂಪೂರ್ಣ ಮಾಹಿತಿ ನೀಡುವುದು)

(ಈ) ಹಣ ಭರವಸೆ ಪತ್ರವನ್ನು ಜೇಷ್ಠತೆ ಆಧಾರದ ಮೇಲೆ ನೀಡಲಾಗಿದೆಯೇ ; ಹಾಗಿದ್ದಲ್ಲಿ, ಜೇಷ್ಠತೆಯನ್ನು ಪಾಲಿಸದೆ ನೀಡಲಾದ ಹಣವೆಷ್ಟು ? (ಭರವಸೆ ಪತ್ರಗಳ ವಿಭಾಗವಾರು ಸಂಪೂರ್ಣ ವಿವರ ನೀಡುವುದು)

## ಖಾಲಿ ಹುದ್ದೆಗಳ ಭರ್ತಿ

**ಶ್ರೀ ಕುಮಾರಸ್ವಾಮಿ ಹೆಚ್.ಕೆ. (ಸಕಲೇಶಪುರ) :--**

೭೬ (೨೧೫೫) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :--

(ಅ) ರಾಜ್ಯದಲ್ಲಿ ಕೃಷಿ ಇಲಾಖೆಯಲ್ಲಿ ಸಹಾಯಕ ಕೃಷಿ ಅಧಿಕಾರಿಗಳ ಮತ್ತು ಕೃಷಿ ಅಧಿಕಾರಿಗಳ ಹಾಗೂ ಇತರೆ ಹುದ್ದೆಗಳು ಹಲವಾರು ವರ್ಷಗಳಿಂದ ಖಾಲಿ ಇರುವುದರಿಂದ ರೈತರ ಕೆಲಸ ಕಾರ್ಯಗಳಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಖಾಲಿ ಇರುವ ಹುದ್ದೆಗಳೆಷ್ಟು ; (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಹಾಗಿದ್ದಲ್ಲಿ, ರಾಜ್ಯದಲ್ಲಿ ಕೃಷಿ ಇಲಾಖೆಯಲ್ಲಿ ಸಹಾಯಕ ಕೃಷಿ ಅಧಿಕಾರಿಗಳು ಮತ್ತು ಕೃಷಿ ಅಧಿಕಾರಿಗಳು ಹಾಗೂ ಇತರೆ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರವು ಇದುವರೆಗೆ ಕೈಗೊಂಡಿರುವ ಕ್ರಮಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ರಾಜ್ಯ ಸರ್ಕಾರದಿಂದ ಮತ್ತು ಕೇಂದ್ರ ಸರ್ಕಾರದಿಂದ ಕೃಷಿ ಇಲಾಖೆಗೆ ಎಸ್.ಎಂ.ಎ.ಎಂ., ಕೃಷಿ ಯಾಂತ್ರೀಕರಣ, ಪಿ.ಎಂ.ಕೆ.ಎಸ್.ವೈ. ರಾಷ್ಟ್ರೀಯ ಆಹಾರ ಭದ್ರತಾ ಯೋಜನೆ ಅಡಿಯಲ್ಲಿ ಹಾಗೂ ವಿವಿಧ ಲೆಕ್ಕಶೀರ್ಷಿಕೆಯಡಿಯಲ್ಲಿ ಜುಲೈ ೨೦೧೯ ರಿಂದ ಇಲ್ಲಿಯವರೆಗೆ ನೀಡಿರುವ ಅನುದಾನವೆಷ್ಟು ಮತ್ತು ಖರ್ಚು ಮಾಡಿರುವ ಅನುದಾನವೆಷ್ಟು ; (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಈ) ಕೃಷಿ ಇಲಾಖೆಗೆ ರಾಜ್ಯ ಸರ್ಕಾರದಿಂದ ಹಾಗೂ ಕೇಂದ್ರ ಸರ್ಕಾರದಿಂದ ಜಲಾನಯನ ಯೋಜನೆಯಡಿಯಲ್ಲಿ ಹಾಗೂ ಪಿ.ಎಂ.ಕೆ.ಎಸ್.ವೈ. (ಡಬ್ಲ್ಯ್ಯ.ಡಿ.ಬಿ) ಪಿ.ಎಂ.ಕೆ.ಎಸ್.ವೈ–ಓ ವೈ, ಆರ್.ಕೆ.ವಿ.ವೈ. ನಲ್ಲಿ ಚೆಕ್–ಡ್ಯಾಂ. ಗೋಕಟ್ಟೆ, ಕೃಷಿ ಹೊಂಡ. ನಾಲೆ ಬಂಡು ಹಾಗೂ ಇತರೆ ಯೋಜನೆಯಡಿಯಲ್ಲಿ ಜುಲೈ ೨೦೧೯–೨೦ ರಿಂದ ದಿನಾಂಕ : ೨೭–೧೧–೨೦೨೦ರವರೆಗೆ ನೀಡಿರುವ ಅನುದಾನವೆಷ್ಟು ; ಮಾಡಲಾಗಿರುವ ಖರ್ಚುಗಳೆಷ್ಟು? (ಅನುದಾನಗಳವಾರು. ಜಿಲ್ಲಾವಾರು ಮತ್ತು ತಾಲ್ಲೂಕುವಾರು ವಿವರ ನೀಡುವುದು)

## ಬಡಾವಣೆ ನಿರ್ಮಾಣ

**ಶ್ರೀ ಕುಮಾರಸ್ವಾಮಿ ಹೆಚ್.ಕೆ. (ಸಕಲೇಶಪುರ) :–**

೭೭ (೨೧೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾಸನ ನಗರ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಬಡಾವಣೆಗಳನ್ನು ನಿರ್ಮಿಸಲು ಸರ್ಕಾರವು ವಿಧಿಸಿರುವ ಮಾನದಂಡಗಳೇನು ; ಸದರಿ ಮಾನದಂಡಗಳನ್ನು ಪಾಲಿಸಲಾಗುತ್ತಿದೆಯೇ ; ಪಾಲಿಸದಿದ್ದಲ್ಲಿ, ಅಂತಹ ಅಧಿಕಾರಿಗಳ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಹಾಸನ ನಗರ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಹೊಸ ಬಡಾವಣೆಗಳಲ್ಲಿ ಮೂಲಭೂತ ಸೌಕರ್ಯಗಳಾದ ರಸ್ತೆ, ಚರಂಡಿ, ಉದ್ಯಾನವನ ಹಾಗೂ ಇನ್ನಿತರೆ ಅವಶ್ಯಕ ಮೂಲಭೂತ ಸೌಕರ್ಯಗಳನ್ನು ಒದಗಿಸದೆ ಕಾನೂನು ಬಾಹಿರವಾಗಿ ನಿರ್ಮಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದನ್ನು ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಹಾಸನ ಜಿಲ್ಲೆಯ ನಗರಕ್ಕೆ ಹೊಂದಿಕೊಂಡಂತಿರುವ ಸತ್ಯಮಂಗಲ ಮತ್ತು ಬಿ.ಕಾಟೀಹಳ್ಳಿ ಗ್ರಾಮ ಪಂಚಾಯಿತಿಗಳ ಅಭಿವೃದ್ಧಿ ಅಧಿಕಾರಿಗಳು ಹಾಗೂ ಕಾರ್ಯದರ್ಶಿಗಳು ಕೆಲವು ಖಾಸಗಿ ಭೂ ಮಾಲೀಕರೊಂದಿಗೆ ಶಾಮೀಲಾಗಿ ರಿಂಗ್ ರಸ್ತೆಗಳಿಗೆ ಹೊಂದಿಕೊಂಡಂತಿರುವ ಜಮೀನುಗಳಲ್ಲಿ ಕಾನೂನು ಬಾಹಿರವಾಗಿ ಬಡಾವಣೆಗಳನ್ನು ನಿರ್ಮಿಸಲು ಹಾಗೂ ಖಾಸಗಿ ಕಟ್ಟಡಗಳನ್ನು ನಿರ್ಮಿಸಲು ಅನುಮತಿ ನೀಡುತ್ತಿರುವುದು ನಿಜವೇ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಸದರಿಯವರ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಸಂಪೂರ್ಣ ಮಾಹಿತಿ ನೀಡುವುದು)

## ರಾಷ್ಟ್ರೀಯ ಹೆದ್ದಾರಿ

**ಶ್ರೀ ಕುಮಾರಸ್ವಾಮಿ ಹೆಚ್.ಕೆ. (ಸಕಲೇಶಪುರ) :–**

೭೮ (೨೧೭೭) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಷ್ಟ್ರೀಯ ಹೆದ್ದಾರಿ ೩೭೩ರ ಬೇಲೂರು–ಬಿಳಿಕೆರೆ ರಸ್ತೆ ಸರಪಳಿ ೪೫೫.೮೪೫ ರಿಂದ ೪೮೯.೮೪೫ ಕಿ.ಮೀಟರ್‌ರವರೆಗೆ ಅಭಿವೃದ್ಧಿ ಕಾಮಗಾರಿ (ಪ್ಯಾಕೇಜ್ ೨ ಬೇಲೂರು–ಹಾಸನ ರಸ್ತೆ) ಕಾಮಗಾರಿಗೆ ಅಡಿಗಲ್ಲನ್ನು ಹಾಕಿದ್ದು, ಈ ಕಾಮಗಾರಿಗೆ ಸಂಬಂಧಪಟ್ಟಂತೆ ಎನ್.ಹೆಚ್.ಎ.ಐ.ಆರ್.ಒ.ರವರು ಡಿ.ಪಿ.ಆರ್ ಅನ್ನು ಸಲ್ಲಿಸಲಾಗಿದ್ದು, ಸದರಿ ಡಿ.ಪಿ.ಆರ್.ಗೆ ಅನುಮೋದನೆ ದೊರೆಯದೆ ಕಾಮಗಾರಿ ಕುಂಠಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಸದರಿ ಕಾಮಗಾರಿಗೆ ಅನುಮೋದನೆ ನೀಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

# ಎಂ.ಡಿ.ಆರ್ ರಸ್ತೆ

ಶ್ರೀ ಲಿಂಗೇಶ ಕೆ.ಎಸ್. (ಬೇಲೂರು) :–

೭೯ (೨೩೯) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೇಲೂರು ಕ್ಷೇತ್ರ ಪರಿಮಿತಿಯಲ್ಲಿ ಬರುವ ಎಂ.ಡಿ.ಆರ್ ಹಾಗೂ ಲೋಕೋಪಯೋಗಿ ಇಲಾಖೆಯ ರಸ್ತೆಗಳು ಎಷ್ಟು ; ಈ ಪೈಕಿ ಸಂಚಾರಕ್ಕೆ ಯೋಗ್ಯವಾದ ಹಾಗೂ ಯೋಗ್ಯವಲ್ಲದ ರಸ್ತೆಗಳು ಎಷ್ಟು ; (ಕಿಲೋಮೀಟರ್‌ವಾರು, ರಸ್ತೆಗಳವಾರು ವಿವರ ನೀಡುವುದು)

(ಆ) ಸಂಚಾರಕ್ಕೆ ಯೋಗ್ಯವಲ್ಲದ ಲೋಕೋಪಯೋಗಿ ಮತ್ತು ಎಂ.ಡಿ.ಆರ್ ರಸ್ತೆಗಳನ್ನು ಈ ವರ್ಷದಲ್ಲಿ ಅಭಿವೃದ್ಧಿಪಡಿಸಲಾಗುವುದೇ ; ಇಲ್ಲವಾದಲ್ಲಿ, ಯಾವ ಕಾಲಮಿತಿಯೊಳಗೆ ಅಭಿವೃದ್ಧಿ ಪಡಿಸಲಾಗುವುದು ; (ವಿವರ ನೀಡುವುದು)

(ಇ) ಬೇಲೂರು ಕ್ಷೇತ್ರ ಪರಿಮಿತಿಯಲ್ಲಿ ಬರುವ ಲೋಕೋಪಯೋಗಿ ಮತ್ತು ಎಂ.ಡಿ.ಆರ್ ರಸ್ತೆಗಳಲ್ಲಿ ನಿರ್ಮಿಸಲಾಗಿರುವ ಹಾಗೂ ನಿರ್ಮಿಸಬೇಕಾಗಿರುವ ಸೇತುವೆಗಳು ಎಷ್ಟು ಮತ್ತು ಯಾವುವು ;

(ಈ) ಮಳೆಯಿಂದ ಹಾನಿಗೀಡಾದ ಸೇತುವೆಗಳು ಎಷ್ಟು ಮತ್ತು ಯಾವುವು; ಅವುಗಳನ್ನು ಅಭಿವೃದ್ಧಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಸರ್ಕಾರಿ ಕಛೇರಿಗಳು

**ಶ್ರೀ ಲಿಂಗೇಶ ಕೆ.ಎಸ್. (ಬೇಲೂರು) :-**

೮೦ (೨೪೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೇಲೂರು ವಿಧಾನಸಭಾ ಕ್ಷೇತ್ರದ ಪರಿಮಿತಿಯಲ್ಲಿ ಬರುವ ಉಪ ತಹಶೀಲ್ದಾರರ ಕಛೇರಿಗಳೆಷ್ಟು ಹಾಗೂ ಯಾವುವು ;

(ಆ) ಸದರಿ ಕಛೇರಿಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆಯೇ ; ಇಲ್ಲದಿದ್ದಲ್ಲಿ, ಎಷ್ಟು ಕಛೇರಿಗಳ ಕಟ್ಟಡಗಳಲ್ಲಿ ಮೂಲಭೂತ ಸೌಕರ್ಯಗಳಿವೆ ;

(ಇ) ಉಳಿದ ಕಛೇರಿಗಳಿಗೆ ಯಾವ ಕಾಲಮಿತಿಯೊಳಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗುವುದು ? (ಸಂಪೂರ್ಣ ವಿವರ ನೀಡುವುದು)

## ಅನುದಾನ ಬಗ್ಗೆ

**ಶ್ರೀ ಮಹದೇವ ಕೆ. (ಪಿರಿಯಾಪಟ್ಟಣ) :-**

೮೧ (೧೨) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೦-೨೧ನೇ ಸಾಲಿನಲ್ಲಿ ಲೋಕೋಪಯೋಗಿ ಇಲಾಖೆಗಳ ಯಾವ ಯಾವ ಲೆಕ್ಕಶೀರ್ಷಿಕೆಯಲ್ಲಿ ಎಷ್ಟೆಷ್ಟು ಅನುದಾನ ಒದಗಿಸಲಾಗಿದೆ ; ಇದರಲ್ಲಿ ಅಭಿವೃದ್ಧಿಗಾಗಿ ಇರುವ ಮೊತ್ತ ಎಷ್ಟು ; (ವಿವರ ನೀಡುವುದು)

(ಆ) ರಾಜ್ಯದಲ್ಲಿ 2020–21ನೇ ಸಾಲಿನಲ್ಲಿ ಹೊಸದಾಗಿ ಮಂಜೂರು ಮಾಡಿರುವ ಕಾಮಗಾರಿಗಳು ಯಾವುವು ಹಾಗೂ ಯಾವ ಯಾವ ಲೆಕ್ಕಶೀರ್ಷಿಕೆಯಡಿ ಮಂಜೂರು ಮಾಡಲಾಗಿದೆ ; (ಮತಕ್ಷೇತ್ರವಾರು ವಿವರ ನೀಡುವುದು)

(ಇ) ಪಿರಿಯಾಪಟ್ಟಣ ಮತ ಕ್ಷೇತ್ರದಲ್ಲಿ ಅಭಿವೃದ್ಧಿ ಆಗದಿರುವ ರಸ್ತೆಗಳು, ಸೇತುವೆಗಳೆಷ್ಟು ; ಈ ರಸ್ತೆ, ಸೇತುವೆಗಳ ಅಭಿವೃದ್ಧಿಗೆ ಎಷ್ಟು ಮೊತ್ತದ ಅನುದಾನ ಬೇಕಾಗುವುದು ; (ವಿವರ ನೀಡುವುದು)

(ಈ) ಈ ಮತ ಕ್ಷೇತ್ರದ ರಸ್ತೆಗಳು ಸೇತುವೆಗಳ ಅಭಿವೃದ್ಧಿಗೆ ಅನುದಾನ ಒದಗಿಸದಿರಲು ಕಾರಣಗಳೇನು ; ಅನುದಾನ ನೀಡುವ ಬಗ್ಗೆ ಸರ್ಕಾರದ ಕ್ರಮವೇನು ?

## ಅನಧಿಕೃತ ಬಡಾವಣೆ ನಿರ್ಮಾಣ

**ಶ್ರೀ ಎ. ಮಂಜುನಾಥ್ (ಮಾಗಡಿ) :–**

82 (916) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಮನಗರ ತಾಲ್ಲೂಕು ಬಿಡದಿ ಹೋಬಳಿ ಬಾನಂದೂರು ಗ್ರಾಮದ ಸರ್ವೆ ನಂ.106, 109, 110, 111ರ ಸರ್ಕಾರಿ ಜಮೀನಿನಲ್ಲಿ ಅನಧಿಕೃತವಾಗಿ ಲ್ಯಾಂಡ್ ಡೆವಲಪರ್‌ಗಳು ಬಡಾವಣೆ ನಿರ್ಮಾಣ ಮಾಡಲು 60 ಅಡಿ ರಸ್ತೆ ನಿರ್ಮಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ರಸ್ತೆ ನಿರ್ಮಾಣಕ್ಕಾಗಿ ಸುಮಾರು 3–20 ಎಕರೆ/ ಗುಂಟೆ ಜಮೀನನ್ನು ಸರ್ಕಾರಿ ಗೋಮಾಳದಲ್ಲಿ ಕಾಯ್ದಿರಿಸಲಾಗಿದೆಯೇ ;

(ಇ) ಸರ್ವೆ ನಂ. ೧೦೭ರಲ್ಲಿ ಅನಧಿಕೃತವಾಗಿ ಸರ್ಕಾರಿ ಗೋಮಾಳ ಜಮೀನನ್ನು ಪೋಡಿ ದುರಸ್ತಿಮಾಡಿಸಿಕೊಂಡು. ಮಂಜೂರುದಾರರ ಅನುಭವಕ್ಕೂ ಪೋಡಿಯಾಗಿರುವ ಸ್ಥಳಕ್ಕೆ ವ್ಯತ್ಯಾಸ ಮಾಡಿ ಸರ್ಕಾರಿ ಜಮೀನನ್ನು ಕಬಳಿಸಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಅನಧಿಕೃತವಾಗಿ ಬಡಾವಣೆ ನಿರ್ಮಾಣಕ್ಕೆ ಸಂಪರ್ಕ ಕಲ್ಪಿಸುವ ರಸ್ತೆಯಿಂದ ಸಾರ್ವಜನಿಕರಿಗಾಗಲಿ ರೈತರಿಗಾಗಲಿ ಮತ್ತು ಬೇರೆ ಗ್ರಾಮಗಳಿಗೆ ಸಂಪರ್ಕ ಕಲ್ಪಿಸುವ ಯಾವುದೇ ಉದ್ದೇಶ ಇಲ್ಲದೆ ಇದ್ದರೂ ೫೦ ಎಕರೆ ಜಮೀನನ್ನು ಲ್ಯಾಂಡ್ ಡೆವಲಪರ್ಸ್ ಕ್ರಯಕ್ಕೆ ಪಡೆದಿರುವುದರಿಂದ ಕರ್ನಾಟಕ ಭೂಸುಧಾರಣೆ ಕಾಯ್ದೆ ಉಲ್ಲಂಘನೆಯಾಗಿರುವುದಲ್ಲವೆ ;

(ಉ) ಕರ್ನಾಟಕ ಭೂಸುಧಾರಣೆ ಕಾಯ್ದೆ ಉಲ್ಲಂಘನೆ ಮಾಡಿದ ಅಧಿಕಾರಿಗಳ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು ?

## ರೈತರಿಗೆ ಜಮೀನು ಹಂಚಿಕೆ

**ಶ್ರೀ ಎ. ಮಂಜುನಾಥ್ (ಮಾಗಡಿ) :-**

೮೩ (೪೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹಲವಾರು ವರ್ಷಗಳಿಂದ ರೈತರು ಸರ್ಕಾರಿ ಜಮೀನನ್ನು ಸಾಗುವಳಿ ಮಾಡಿಕೊಂಡು ಬರುತ್ತಿದ್ದ ಹಿನ್ನೆಲೆಯಲ್ಲಿ ಸರ್ಕಾರದಿಂದ ನಮೂನೆ-೫೦-೫೩ ರಂತೆ ರೈತರಿಗೆ ಹಂಚಿಕೆ ಮಾಡಿದ ಜಮೀನಿಗೆ ಸಾಗುವಳಿ ಚೀಟಿ ವಿತರಣೆ ಮಾಡಿರುವುದು ನಿಜವೇ ; ಹಾಗಿದ್ದಲ್ಲಿ, ರೈತರ ಹೆಸರಿನಲ್ಲಿ ಪಹಣಿ ಹಾಗೂ ಮ್ಯೂಟೇಷನ್ ಮತ್ತು ಕಂದಾಯ ಇದ್ದರೂ ಸಹ ಅರಣ್ಯ ಇಲಾಖೆಯವರು ಜಮೀನನ್ನು ರೈತರಿಂದ ಕಸಿದುಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಹಿಂದೆ ರೈತರಿಗೆ ಹಂಚಿಕೆ ಮಾಡಲಾದ ಜಮೀನಿಗೆ ಸರ್ವೆ ಮಾಡಿಸಿ ವಿನಃ ಕಾರಣ ರೈತರಿಗೆ ಅರಣ್ಯ ಇಲಾಖೆಯವರು ತೊಂದರೆ ನೀಡುತ್ತಿರುವುದನ್ನು ತಪ್ಪಿಸಲು ಸರ್ಕಾರ ಕ್ರಮ ಕೈಗೊಳ್ಳಲಾಗುವುದೇ ;

(ಇ) ಅರಣ್ಯ ಕಾಯ್ದೆಗೆ ತಿದ್ದುಪಡಿ ತಂದು ಈ ಹಿಂದೆ ಕಂದಾಯ ಇಲಾಖೆಯ ವತಿಯಿಂದ ನೀಡಿದ ಸಾಗುವಳಿ ಭೂಮಿಯನ್ನು ರೈತರಿಗೆ ಹಿಂದಿರುಗಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ ;

(ಈ) ಅರಣ್ಯ ಇಲಾಖೆ ಹಾಗೂ ಕಂದಾಯ ಇಲಾಖೆಯ ಸಂಘರ್ಷದಿಂದಾಗಿ ರೈತರಿಗೆ ಆಗುತ್ತಿರುವ ತೊಂದರೆಯನ್ನು ಸರ್ಕಾರ ಶಾಶ್ವತವಾಗಿ ಬಗೆಹರಿಸಲಾಗುವುದೇ ?

## ಸರ್ಕಾರಿ ಜಮೀನು

**ಶ್ರೀ ಎ. ಮಂಜುನಾಥ್ (ಮಾಗಡಿ) :–**

೮೪ (೪೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಾಮುಂಡೇಶ್ವರಿ ಬಿಲ್ಡ್‌ಟೆಕ್ (ಈಗಲ್‌ಟನ್) ರವರಿಂದ ಸರ್ಕಾರದ ವಶಕ್ಕೆ ಪಡೆದಿರುವ ಜಮೀನನ್ನು ಖಾಸಗಿ ಲ್ಯಾಂಡ್ ಡೆವಲಪರ್ಸ್‌ಗಳಿಗೆ ಮಂಜೂರು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಸರ್ಕಾರದ ಉಪಯೋಗಕ್ಕಾಗಿ ಮಂಜೂರು ಮಾಡಲಾಗುವುದೇ ? (ವಿವರ ನೀಡುವುದು)

## ರಸ್ತೆಗಳ ಅಭಿವೃದ್ಧಿ

**ಶ್ರೀ ಹೆಚ್.ಪಿ. ಮಂಜುನಾಥ (ಹುಣಸೂರು) :–**

೮೫ (೨೧೮) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹುಣಸೂರು ತಾಲ್ಲೂಕಿನ ಮತಕ್ಷೇತ್ರದ ವ್ಯಾಪ್ತಿಯೊಳಗೆ ಲೋಕೋಪಯೋಗಿ ಇಲಾಖೆಯಡಿಯಲ್ಲಿ ಬರುವ ರಸ್ತೆಗಳು ಯಾವುವು ;

(ಆ) ಕಳೆದ ಮೂರು ವರ್ಷಗಳಲ್ಲಿ ಈ ರಸ್ತೆಗಳ ಅಭಿವೃದ್ಧಿಗೆ ಸರ್ಕಾರದಿಂದ ಮಂಜೂರಾದ ಅನುದಾನ ಎಷ್ಟು ;

(ಇ) ಸದರಿ ಅನುದಾನವು ಯಾವ ಯಾವ ಕಾಮಗಾರಿಗಳಿಗೆ ಮಂಜೂರಾಗಿದೆ ;

(ಈ) ಕಳೆದ ೩ ವರ್ಷಗಳಿಂದ ಕೈಗೊಂಡ ಕಾಮಗಾರಿಗಳೆಷ್ಟು ? (ಹುಣಸೂರು ನಗರಸಭೆ, ವಾರ್ಡ್‌ವಾರು ವಿವರ ನೀಡುವುದು)

## ಖರೀದಿ ಕೇಂದ್ರಗಳು

**ಶ್ರೀ ಹೆಚ್.ಪಿ. ಮಂಜುನಾಥ (ಹುಣಸೂರು) :–**

೮೬ (೨೨೦) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹುಣಸೂರು ತಾಲ್ಲೂಕಿನಲ್ಲಿ ರೈತರು ಶುಂಠಿ ಮತ್ತು ಮುಸುಕಿನ ಜೋಳವನ್ನು ಹೆಚ್ಚಾಗಿ ಬೆಳೆಯುತ್ತಿದ್ದು, ಮಾರುಕಟ್ಟೆಯಲ್ಲಿ ರೈತರಿಗೆ ಬೆಂಬಲ ಬೆಲೆ ಸಿಗದೆ ತೊಂದರೆ ಅನುಭವಿಸುತ್ತಿರುವುದರಿಂದ ಶುಂಠಿ ಹಾಗೂ ಮುಸುಕಿನ ಜೋಳ ಖರೀದಿ ಕೇಂದ್ರಗಳನ್ನು ಸ್ಥಾಪಿಸುವ ಕುರಿತು ಸರ್ಕಾರದ ನಿಲುವೇನು ; (ವಿವರ ನೀಡುವುದು)

(ಆ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರಕ್ಕಿರುವ ತೊಂದರೆಗಳೇನು ?

## ಮನೆಗಳ ನಿರ್ಮಾಣ

**ಶ್ರೀ ಹೆಚ್.ಪಿ. ಮಂಜುನಾಥ (ಹುಣಸೂರು) :–**

೮೭ (೨೨೧) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರದಿಂದ ವಿವಿಧ ಯೋಜನೆಗಳಡಿಯಲ್ಲಿ ಬಡಜನರಿಗೆ ಹಾಗೂ ವಸತಿ ರಹಿತರಿಗೆ ಮನೆಗಳನ್ನು ಮಂಜೂರು ಮಾಡಲಾಗಿದ್ದು, ಮನೆಗಳ ನಿರ್ಮಾಣ ಪೂರ್ಣವಾಗದೆ ಬಾಕಿ ಉಳಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಹುಣಸೂರು ತಾಲ್ಲೂಕಿನಾದ್ಯಂತ ಪೂರ್ಣವಾಗದೆ ಬಾಕಿ ಉಳಿದಿರುವ ಮನೆಗಳು ಎಷ್ಟು ; (ವಿವರ ನೀಡುವುದು)

(ಇ) ಹಾಗಿದ್ದಲ್ಲಿ, ಬಾಕಿ ಉಳಿಯಲು ಕಾರಣಗಳೇನು ; ಅಪೂರ್ಣವಾಗಿರುವ ಮನೆಗಳನ್ನು ಪೂರ್ಣಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಮನೆಗಳನ್ನು ಸಕ್ರಮಗೊಳಿಸುವುದು

**ಶ್ರೀ ಮುನಿರತ್ನ (ರಾಜರಾಜೇಶ್ವರಿನಗರ) :–**

೮೮ (೨೦೮) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜರಾಜೇಶ್ವರಿನಗರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿರುವ ಕೊಳಗೇರಿ ಪ್ರದೇಶಗಳಲ್ಲಿ ಅನಧಿಕೃತವಾಗಿ ಹಲವು ವರ್ಷಗಳಿಂದ ವಾಸಿಸುತ್ತಿರುವ ನಿವಾಸಿಗಳ ಹೆಸರಿಗೆ ಮನೆಗಳನ್ನು ಸಕ್ರಮಗೊಳಿಸುವ ಪ್ರಸ್ತಾವನೆ ಸರ್ಕಾರದ ಗಮನಕ್ಕೆ ಬಂದಿದೆಯೇ ; (ಕೊಳಗೇರಿ ಪ್ರದೇಶಗಳವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಬಂದಿದ್ದಲ್ಲಿ, ಸಕ್ರಮಗೊಳಿಸಲು ಸರ್ಕಾರಕ್ಕಿರುವ ಅಡೆ–ತಡೆಗಳೇನು ;

(ಇ) ಅನಧಿಕೃತವಾಗಿ ವಾಸಿಸುತ್ತಿರುವ ನಿವಾಸಿಗಳ ಹೆಸರಿಗೆ ಸಕ್ರಮಗೊಳಿಸುವ ಮೂಲಕ ಬಡಕುಟುಂಬಗಳಿಗೆ ಶಾಶ್ವತ ಪರಿಹಾರ ಕಲ್ಪಿಸಲು ಸರ್ಕಾರ ಕೈಗೊಂಡಿರುವ ಮುಂಜಾಗ್ರತಾ ಕ್ರಮಗಳೇನು ;

(ಈ) ತ್ಯಾಗಿನಗರ ಕೊಳಗೇರಿ ಪ್ರದೇಶದ ೩೫೨ ಮನೆಗಳನ್ನು ಕೆಡವಿ ಹೊಸದಾಗಿ ನಿರ್ಮಾಣ ಮಾಡುವ ಕಾಮಗಾರಿ ಪ್ರಸ್ತುತ ಯಾವ ಹಂತದಲ್ಲಿದೆ ; ವಿಳಂಬಕ್ಕೆ ಕಾರಣಗಳೇನು ; ಸದರಿ ಯೋಜನೆಯನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ?

## ಗುತ್ತಿಗೆದಾರರನ್ನು ಕಪ್ಪು ಪಟ್ಟಿಗೆ ಸೇರಿಸುವುದು

**ಶ್ರೀ ಮುನಿರತ್ನ (ರಾಜರಾಜೇಶ್ವರಿನಗರ) :-**

೮೯ (೨೦೯) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜರಾಜೇಶ್ವರಿನಗರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿರುವ ಕೊಳಗೇರಿ ಪ್ರದೇಶಗಳಲ್ಲಿ ಮನೆಗಳ ನಿರ್ಮಾಣ ಕಾಮಗಾರಿ ಗುತ್ತಿಗೆ ಪಡೆದಿದ್ದ ಮೆ:ಐಶ್ವರ್ಯಗಿರಿ ಕನ್‌ಸ್ಟ್ರಕ್ಷನ್ ಪ್ರೈವೇಟ್ ಲಿಮಿಟೆಡ್ ಅನ್ನು ಕಪ್ಪು ಪೆಟ್ಟಿಗೆ ಸೇರಿಸುವುದು ಮತ್ತು ಈ ಬಗ್ಗೆ ನಡೆದಿರುವ ಅವ್ಯವಹಾರವನ್ನು ತನಿಖೆಗೆ ಆದೇಶಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಹಾಗಿದ್ದಲ್ಲಿ, ತನಿಖೆಗೆ ಆದೇಶಿಸಲು ಮತ್ತು ಕಪ್ಪು ಪಟ್ಟಿಗೆ ಸೇರಿಸಲು ಸರ್ಕಾರಕ್ಕಿರುವ ಅಡೆತಡೆಗಳೇನು ಹಾಗೂ ಈ ಬಗ್ಗೆ ಸರ್ಕಾರ ಅನುಸರಿಸುತ್ತಿರುವ ಕ್ರಮಗಳೇನು ?

## ಮುಜರಾಯಿ ಅನುದಾನ

**ಶ್ರೀ ಕೆ.ವೈ. ನಂಜೇಗೌಡ (ಮಾಲೂರು) :-**

೯೦ (೧೮೬) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ. ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೋಲಾರ ಜಿಲ್ಲೆ, ಮಾಲೂರು ತಾಲ್ಲೂಕು ವ್ಯಾಪ್ತಿಯಲ್ಲಿ ಇರುವ ಮುಜರಾಯಿ ದೇವಾಲಯಗಳೆಷ್ಟು ; ಈ ದೇವಸ್ಥಾನಗಳಿಂದ ಸರ್ಕಾರಕ್ಕೆ ಬರುತ್ತಿರುವ ಆದಾಯವೆಷ್ಟು ;

(ಆ) ಈ ತಾಲ್ಲೂಕಿನ ತ್ಯಣಿಸಿ ಗ್ರಾಮದ ಶ್ರೀ ಸಾಕಮ್ಮ ದೇವಾಲಯವನ್ನು ಅಭಿವೃದ್ಧಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಹಾಗಿದ್ದಲ್ಲಿ, ದೇವಸ್ಥಾನದ ಅಭಿವೃದ್ಧಿಗೆ ಎಷ್ಟು ಅನುದಾನವನ್ನು ಬಿಡುಗಡೆ ಮಾಡಲಾಗಿದೆ ; ಪ್ರಸ್ತುತ ಅಭಿವೃದ್ಧಿ ಕಾರ್ಯವು ಯಾವ ಹಂತದಲ್ಲಿದೆ : (ವಿವರ ನೀಡುವುದು)

(ಈ) ಸದರಿ ದೇವಸ್ಥಾನದ ಅಭಿವೃದ್ಧಿ ಕಾರ್ಯವನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ? (ವಿವರ ನೀಡುವುದು)

## ಭೂ ನೋಂದಣಿ

**ಶ್ರೀ ಕೆ.ವೈ. ನಂಜೇಗೌಡ (ಮಾಲೂರು) :-**

೯೧ (೧೮೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಭೂ ನೋಂದಣಿ ಶುಲ್ಕವನ್ನು ಹಾಗೂ ಮೌಲ್ಯವನ್ನು ಯಾವ ಆಧಾರದ ಮೇಲೆ ನಿರ್ಧಾರ ಮಾಡಲಾಗುವುದು ; ನಿಗದಿ ಪಡಿಸಿರುವ ಶುಲ್ಕ ಹಾಗೂ ಭೂ ನೋಂದಣಿ ಮೌಲ್ಯದ ದರಗಳೆಷ್ಟು ; (ಜಿಲ್ಲಾವಾರು ಹಾಗೂ ತಾಲ್ಲೂಕುವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿ ಸರ್ಕಾರಕ್ಕೆ ಅತೀ ಹೆಚ್ಚಿನ ಭೂ ನೋಂದಣಿ ಮೌಲ್ಯದ ಆದಾಯ ಮತ್ತು ಕಡಿಮೆ, ಆದಾಯ ತರುವ ಜಿಲ್ಲೆಗಳು ಯಾವುವು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ ಪ್ರಸ್ತುತ ಭೂ ನೋಂದಣಾಧಿಕಾರಿಗಳ ಕಛೇರಿಯಲ್ಲಿ ಮಧ್ಯವರ್ತಿಗಳ ಹಾವಳಿ ಜಾಸ್ತಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಇದರಿಂದಾಗಿ ಸಾಮಾನ್ಯ ರೈತರು ನೇರವಾಗಿ ಭೂ ನೋಂದಣಿ ಮಾಡಲು ಸಾಧ್ಯವಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಹಾಗಿದ್ದಲ್ಲಿ, ಈ ಎಲ್ಲಾ ಭೂ ನೋಂದಣಿಯು ಮಧ್ಯವರ್ತಿಗಳ ಹಾವಳಿ ತಪ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ೯೪–ಸಿಸಿ ಅರ್ಜಿಗಳು

**ಶ್ರೀ ನಂಜೇಗೌಡ ಕೆ.ವೈ. (ಮಾಲೂರು) :–**

೯೨ (೧೮೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಾಲೂರು ವಿಧಾನಸಭಾ ಕ್ಷೇತ್ರದಲ್ಲಿ ೯೪ಸಿಸಿ ಅಡಿಯಲ್ಲಿ ಸಲ್ಲಿಸಲಾಗಿರುವ ಅರ್ಜಿಗಳ ಸಂಖ್ಯೆ ಎಷ್ಟು ; (ಗ್ರಾಮವಾರು/ ಪ್ರದೇಶವಾರು ಅರ್ಜಿಗಳ ವಿವರ ನೀಡುವುದು)

(ಆ) ಈ ಪೈಕಿ ಇತ್ಯರ್ಥ ಪಡಿಸಲಾಗಿರುವ ಹಾಗೂ ಬಾಕಿ ಉಳಿದಿರುವ ಅರ್ಜಿಗಳೆಷ್ಟು ; (ವಿವರ ನೀಡುವುದು)

(ಇ) ಇತ್ಯರ್ಥವಾಗದೇ ಬಾಕಿ ಉಳಿಯಲು ಕಾರಣಗಳೇನು ಹಾಗೂ ಯಾವ ಹಂತದಲ್ಲಿ ಬಾಕಿ ಉಳಿದಿರುತ್ತವೆ ; (ವಿವರ ನೀಡುವುದು)

(ಈ) ಯಾವ ಕಾಲಮಿತಿಯೊಳಗೆ ಸದರಿ ಬಾಕಿ ಅರ್ಜಿಗಳನ್ನು ಇತ್ಯರ್ಥ ಪಡಿಸಲಾಗುವುದು?

## ಮನೆಗಳ ಹಂಚಿಕೆ

**ಶ್ರೀ ನಂಜೇಗೌಡ ಕೆ.ವೈ. (ಮಾಲೂರು) :-**

೯೩ (೧೯೦) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ೨೦೨೦-೨೧ನೇ ಸಾಲಿನಲ್ಲಿ ಹಂಚಿಕೆ ಮಾಡಿರುವ ಮನೆಗಳೆಷ್ಟು ; ಗ್ರಾಮ ಪಂಚಾಯಿತಿಗಳಿಗೆ ತಲಾವಾರು ಮನೆಗಳನ್ನು ಹಂಚಿಕೆ ಮಾಡಲಾಗಿದೆಯೇ ; (ಜಿಲ್ಲಾವಾರು, ಗ್ರಾಮಪಂಚಾಯಿತಿವಾರು ಮಾಹಿತಿ ನೀಡುವುದು)

(ಆ) ಗ್ರಾಮ ಪಂಚಾಯಿತಿಗಳಿಗೆ ಮನೆಗಳನ್ನು ಹಂಚಿಕೆ ಮಾಡುವಾಗ ಅನುಸರಿಸುವ ಮಾನದಂಡಗಳೇನು ;

(ಇ) ಕಳೆದ ಮೂರು ವರ್ಷಗಳಲ್ಲಿ ಮಾಲೂರು ವಿಧಾನಸಭಾ ಕ್ಷೇತ್ರದ ಯಾವ ಯಾವ ಪಂಚಾಯಿತಿಗಳಿಗೆ ಹಂಚಿಕೆ ಮಾಡಲಾಗಿರುವ ಮನೆಗಳೆಷ್ಟು ?

## ರಸ್ತೆ ದುರಸ್ಥಿ

**ಶ್ರೀ ನರೇಂದ್ರ ಆರ್. (ಹನೂರು):-**

೯೪ (೧೬೩) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಚಾಮರಾಜನಗರ ಜಿಲ್ಲೆಯ ಹನೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ತೆಳನೂರು ಗ್ರಾಮದಿಂದ ಬಂಡಳ್ಳಿ ಗ್ರಾಮಕ್ಕೆ ಹೋಗುವ ರಸ್ತೆಯು ತುಂಬಾ ಹದಗೆಟ್ಟು ಸಾರ್ವಜನಿಕರ ಸಂಚಾರಕ್ಕೆ ತೊಂದರೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ರಸ್ತೆಯ ದುರಸ್ಥಿಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

## ಸಾಗುವಳಿ ಚೀಟಿಗಳು

**ಶ್ರೀ ನರೇಂದ್ರ ಆರ್. (ಹನೂರು):–**

೯೫ (೧೬೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಾಮರಾಜನಗರ ಜಿಲ್ಲೆಯ ಹನೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಈ ಹಿಂದೆ ಸರ್ಕಾರದಿಂದ ಸಾಗುವಳಿ ಚೀಟಿ ನೀಡಿರುವ ಪ್ರಕರಣಗಳಿಗೆ ಆರ್‌ಟಿಸಿಯಲ್ಲಿ ದಾಖಲೆ ಮಾಡಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಇದಕ್ಕೆ ಕಾರಣಗಳೇನು ; (ಸಂಪೂರ್ಣ ವಿವರ ನೀಡುವುದು)

(ಇ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು ?

## ಗ್ರಾಮಗಳ ವಿಲೀನಿಕರಣ

**ಶ್ರೀ ನರೇಂದ್ರ ಆರ್. (ಹನೂರು):–**

೯೬ (೨೫೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಾಮರಾಜನಗರ ಜಿಲ್ಲೆ, ಕೊಳ್ಳೇಗಾಲ ತಾಲ್ಲೂಕು ಲೊಕ್ಕನಹಳ್ಳಿ ಹೋಬಳಿಯಿಂದ ಇಪ್ಪತ್ತು ಗ್ರಾಮಗಳನ್ನು ರಾಮಾಪುರ ಹೋಬಳಿಗೆ ವಿಲೀನಗೊಳಿಸಲು ನಿಧಾನಗತಿಯ ಧೋರಣೆ ಅನುಸರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಸಂಪೂರ್ಣ ವಿವರ ನೀಡುವುದು)

## ೯೪ಸಿ ಮತ್ತು ೯೪ಸಿಸಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸುವುದು

**ಶ್ರೀ ನಿಸರ್ಗ ನಾರಾಯಣ ಸ್ವಾಮಿ ಎಲ್.ಎನ್(ದೇವನಹಳ್ಳಿ) :-**

೯೭ (೧೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸರ್ಕಾರಿ ಜಮೀನಿನಲ್ಲಿ ನಗರ ಪಟ್ಟಣ ಹಾಗೂ ಗ್ರಾಮಾಂತರ ಪ್ರದೇಶಗಳಲ್ಲಿ ಮನೆ ಕಟ್ಟಿಕೊಂಡಿರುವವರ ಸಕ್ರಮಕ್ಕಾಗಿ ೯೪ಸಿ ಮತ್ತು ೯೪ಸಿಸಿ ಅರ್ಜಿ ಸಲ್ಲಿಸದೆ ವಂಚಿತರಾದವರಿಗಾಗಿ ಮತ್ತೊಂದು ಅವಕಾಶ ನೀಡುವ ಬಗ್ಗೆ ಸರ್ಕಾರದ ನಿಲುವೇನು; (ಮಾಹಿತಿ ನೀಡುವುದು)

(ಆ) ಹಾಗಿದ್ದಲ್ಲಿ, ಅರ್ಜಿ ಸಲ್ಲಿಸದೆ ನಂಬರ್‌ದಾರರಿಗೆ ಮತ್ತೊಂದು ಅವಕಾಶ ನೀಡುವುದರಿಂದ ಸರ್ಕಾರಕ್ಕೆ ಆಗುವ ತೊಂದರೆಗಳೇನು; ಬಡಜನರ ಅನುಕೂಲಕ್ಕಾಗಿ ಸರ್ಕಾರ ಕೈಗೊಳ್ಳಬಹುದಾದ ಕ್ರಮಗಳೇನು ? (ಪೂರ್ಣ ಮಾಹಿತಿ ನೀಡುವುದು)

## ವಸತಿ ಸೌಕರ್ಯ ಕಲ್ಪಿಸುವುದು

**ಶ್ರೀ ನಿಸರ್ಗ ನಾರಾಯಣ ಸ್ವಾಮಿ ಎಲ್.ಎನ್. (ದೇವನಹಳ್ಳಿ) :-**

೯೮ (೧೯) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ದೇವನಹಳ್ಳಿ ವಿಧಾನಸಭಾ ಕ್ಷೇತ್ರ ನಗರ ಹಾಗೂ ಗ್ರಾಮಾಂತರ ಪ್ರದೇಶಗಳಲ್ಲಿ ವಸತಿ ರಹಿತರಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಬಂದಿದ್ದಲ್ಲಿ, ವಸತಿ ರಹಿತರಿಗಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಈ ಪ್ರದೇಶದಲ್ಲಿ ಈಗಾಗಲೇ ಗುರುತಿಸಿರುವ ಫಲಾನುಭವಿಗಳೆಷ್ಟು; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಹಾಗಿದ್ದಲ್ಲಿ, ಈ ಫಲಾನುಭವಿಗಳಿಗೆ ಯಾವ ಕಾಲಮಿತಿಯಲ್ಲಿ ಮನೆಗಳನ್ನು ಮಂಜೂರು ಮಾಡಲಾಗುವುದು ಮತ್ತು ಯಾವ ಯಾವ ಯೋಜನೆಗಳಡಿಯಲ್ಲಿ ಎಷ್ಟೆಷ್ಟು ಮನೆಗಳನ್ನು ಮಂಜೂರು ಮಾಡಲಾಗುವುದು ? (ವಿವರ ನೀಡುವುದು)

## ಜಿಲ್ಲಾ ಕೇಂದ್ರ ಅಭಿವೃದ್ಧಿ

**ಶ್ರೀ ನಿಸರ್ಗ ನಾರಾಯಣ ಸ್ವಾಮಿ ಎಲ್.ಎನ್(ದೇವನಹಳ್ಳಿ) :-**

೯೯ (೨೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ಗ್ರಾಮಾಂತರ ಜಿಲ್ಲಾ ಕೇಂದ್ರ ದೇವನಹಳ್ಳಿ ತಾಲ್ಲೂಕು ಚಪ್ಪರದಕಲ್ಲು (ಬೀರಸಂದ್ರ) ಗ್ರಾಮದಲ್ಲಿ ಕಛೇರಿಗಳ ಜಿಲ್ಲಾಡಳಿತ ಭವನ ಸ್ಥಾಪನೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು)

(ಆ) ಬಂದಿದ್ದಲ್ಲಿ, ಜಿಲ್ಲಾ ಕೇಂದ್ರದಲ್ಲಿ ಜಿಲ್ಲಾ ಕ್ರೀಡಾಂಗಣ ಪಾರ್ಕ್ ನಿರ್ಮಾಣ, ಜಿಲ್ಲಾ ಆಸ್ಪತ್ರೆ, ವೈದ್ಯಕೀಯ ಕಾಲೇಜು ಸ್ಥಾಪನೆಗಾಗಿ ಅಗತ್ಯ ಭೂಮಿಗೆ ಸರ್ಕಾರಿ ಜಮೀನು ಗುರ್ತಿಸಿ ಮಂಜೂರು ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಇ) ಹಾಗಿದ್ದಲ್ಲಿ, ಸರ್ಕಾರಿ ಜಮೀನು ಗುರ್ತಿಸಿ ಯಾವ ಕಾಲಮಿತಿಯಲ್ಲಿ ಮಂಜೂರು ಮಾಡಲು ಸರ್ಕಾರ ಕ್ರಮವನ್ನು ಕೈಗೊಳ್ಳಲಾಗುವುದು? (ವಿವರ ನೀಡುವುದು)

## ಕೃಷಿ ಇಲಾಖೆಯ ಸೌಲಭ್ಯಗಳು

**ಶ್ರೀ ನಿಸರ್ಗ ನಾರಾಯಣ ಸ್ವಾಮಿ ಎಲ್.ಎನ್(ದೇವನಹಳ್ಳಿ) :-**

೧೦೦ (೨೧) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೩ ವರ್ಷಗಳಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಕೃಷಿ ಇಲಾಖೆಯಿಂದ ಕೈಗೊಂಡಿರುವ ಅಭಿವೃದ್ಧಿ ಕಾರ್ಯಗಳೇನು; (ವಿವರ ನೀಡುವುದು)

(ಆ) ರೈತರ ಅನುಕೂಲಕ್ಕಾಗಿ ಯಾವ ಯಾವ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗಿರುತ್ತದೆ ;

(ಇ) ರೈತರಿಗೆ ಸಿಗುವ ಸೌಲಭ್ಯಗಳ ಬಗ್ಗೆ ತಿಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಈ) ಹಾಗಿದ್ದಲ್ಲಿ, ರೈತರಿಗೆ ಸಿಗುವ ಸೌಲಭ್ಯಗಳನ್ನು ಯಾವ ಮಾನದಂಡಗಳಡಿ ವಿತರಿಸಲಾಗುವುದು ? (ವಿವರ ನೀಡುವುದು)

## ವಸತಿ ಯೋಜನೆಗಳು

ಶ್ರೀ ಕೆ. ರಘುಪತಿ ಭಟ್ (ಉಡುಪಿ) :-

೧೦೧ (೨೨೨) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ವಿವಿಧ ವಸತಿ ಯೋಜನೆಯಡಿ ಮನೆ ಮಂಜೂರಾದ ಫಲಾನುಭವಿಗಳ ಖಾತೆಗೆ ಹಣ ಜಮಾವಣೆಯಾಗದೇ ಸಮಸ್ಯೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ರಾಜೀವ್ ಗಾಂಧಿ ವಸತಿ ನಿಗಮಕ್ಕೆ ಆನ್‌ಲೈನ್ ಮೂಲಕ ತಾಂತ್ರಿಕವಾಗಿ ದಾಖಲೆಗಳನ್ನು ಸಲ್ಲಿಸುವಲ್ಲಿ ಸಮಸ್ಯೆಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಫಲಾನುಭವಿಗಳ ಮನೆ ನಿರ್ಮಾಣ ನಾಲ್ಕು ಹಂತಗಳಲ್ಲಿ ಪೂರ್ಣಗೊಂಡು ಇಲಾಖೆಯ ನಿಯಮಾವಳಿಯಂತೆ ಜಿಪಿಎಸ್ ಮತ್ತು ಇತರ ತಾಂತ್ರಿಕತೆಯೊಂದಿಗೆ ದಾಖಲೆಗಳನ್ನು ಸಮರ್ಪಕವಾಗಿ ಸಲ್ಲಿಸಿದ್ದರೂ ಹೆಚ್ಚಿನ ಪ್ರಕರಣಗಳಲ್ಲಿ ರಾಜೀವ್ ಗಾಂಧಿ ವಸತಿ ನಿಗಮದಿಂದ ತಿರಸ್ಕೃತವಾಗಲು ಕಾರಣಗಳೇನು;

(ಈ) ರಾಜೀವ್‌ಗಾಂಧಿ ವಸತಿ ನಿಗಮದ ತಾಂತ್ರಿಕ ಸಮಸ್ಯೆಗಳನ್ನು ಸರಿಪಡಿಸಿ ಫಲಾನುಭವಿಗಳಿಗೆ ಸರಿಯಾದ ಸಮಯದಲ್ಲಿ ಹಣ ಜಮಾವಣೆ ಮಾಡಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು? (ವಿವರ ನೀಡುವುದು)

## ಅಕ್ರಮ–ಸಕ್ರಮ ಮಂಜೂರಾತಿ

ಶ್ರೀ ಕೆ. ರಘುಪತಿ ಭಟ್ (ಉಡುಪಿ) :–

೧೦೨ (೨೨೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉಡುಪಿ ಜಿಲ್ಲೆಯಲ್ಲಿ ಅಕ್ರಮ–ಸಕ್ರಮ ಕಾನೂನಿನಡಿಯಲ್ಲಿ ಅರಣ್ಯ ಇಲಾಖೆ ಆಕ್ಷೇಪಣೆ ಇರುವ ಪ್ರಕರಣಗಳ ಮಂಜೂರಾತಿಗೆ ಸರ್ಕಾರದ ಮಾನದಂಡಗಳೇನು ;

(ಆ) ಮಂಜೂರಾತಿಗೆ ಸಂಬಂಧಿಸಿದಂತೆ ಬಂದ ಅರ್ಜಿಗಳನ್ನು ತಿರಸ್ಕೃತಗೊಳಿಸಿ ಫಲಾನುಭವಿಗಳಿಗೆ ಹಿಂಬರಹ ನೀಡದ ಪ್ರಕರಣಗಳೆಷ್ಟು ; ತಿರಸ್ಕೃತಗೊಂಡವರಿಗೆ ಸರ್ಕಾರ ತೆಗೆದುಕೊಂಡಿರುವ ಪರ್ಯಾಯ ಕ್ರಮವೇನು ? (ತಾಲ್ಲೂಕುವಾರು ಸಂಪೂರ್ಣ ವಿವರಗಳನ್ನು ನೀಡುವುದು)

## ಸಾಮಾಜಿಕ ಭದ್ರತಾ ಯೋಜನೆಗಳು

ಶ್ರೀ ಕೆ. ರಘುಪತಿ ಭಟ್ (ಉಡುಪಿ) :–

೧೦೩ (೨೨೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಾಮಾಜಿಕ ಭದ್ರತಾ ಯೋಜನೆಯಡಿ ಸರ್ಕಾರ ನೀಡುತ್ತಿರುವ ವಿವಿಧ ಸವಲತ್ತುಗಳು ಯಾವುವು ; ಸದರಿ ಯೋಜನೆಯ ಸವಲತ್ತು ಪಡೆಯುವಲ್ಲಿ ನಿಗದಿಪಡಿಸಿರುವ ಮಾನದಂಡಗಳೇನು : (ಯೋಜನಾವಾರು ಸಂಪೂರ್ಣ ವಿವರ ಒದಗಿಸುವುದು)

(ಆ) ಈ ಯೋಜನೆಯಡಿ ಸರ್ಕಾರ ನೀಡುತ್ತಿರುವ ಸವಲತ್ತುಗಳನ್ನು ಪಡೆಯುವಲ್ಲಿ ಜನಸಾಮಾನ್ಯರಿಗೆ ಸಮಸ್ಯೆಗಳು ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಬಗ್ಗೆ ಸ್ವೀಕರಿಸಿರುವ ದೂರುಗಳೆಷ್ಟು ; (ಸಂಪೂರ್ಣ ವಿವರ ಒದಗಿಸುವುದು)

(ಇ) ಹಾಗಿದ್ದಲ್ಲಿ, ಸಮಸ್ಯೆಯನ್ನು ಸರಿಪಡಿಸಿ ಫಲಾನುಭವಿಗಳಿಗೆ ಸರಿಯಾದ ಸಮಯದಲ್ಲಿ ಸವಲತ್ತುಗಳನ್ನು ತಲುಪಿಸುವಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಸಂಪೂರ್ಣ ವಿವರ ಒದಗಿಸುವುದು)

## ವಸತಿ ಯೋಜನೆ

**ಶ್ರೀ ರಾಜೇಗೌಡ ಟಿ.ಡಿ. (ಶೃಂಗೇರಿ) :-**

೧೦೪ (೧೫೫) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ವಿವಿಧ ವಸತಿ ಯೋಜನೆಯಡಿಯಲ್ಲಿ ಮನೆಗಳನ್ನು ನಿರ್ಮಿಸಿಕೊಂಡಿರುವ ಫಲಾನುಭವಿಗಳಿಗೆ ಪೂರ್ಣವಾಗಿ ಸರ್ಕಾರದ ವತಿಯಿಂದ ನೀಡಲಾಗಿರುವ ಅನುದಾನವನ್ನು ಬಿಡುಗಡೆಗೊಳಿಸಲಾಗಿದೆಯೇ ;

(ಆ) ಹಾಗಿದ್ದಲ್ಲಿ, ಕಳೆದ ೩ ವರ್ಷಗಳಿಂದ ಬಿಡುಗಡೆಗೊಳಿಸಿದ ಅನುದಾನದ ಒಟ್ಟು ಮೊತ್ತವೆಷ್ಟು ; (ಜಿಲ್ಲಾವಾರು, ಫಲಾನುಭವಿಗಳವಾರು ಹಾಗೂ ಮೊತ್ತವಾರು ವಿವರ ನೀಡುವುದು)

(ಇ) ಮನೆಗಳನ್ನು ನಿರ್ಮಿಸಿ ಫಲಾನುಭವಿಗಳಿಗೆ ಇನ್ನೂ ಅನುದಾನ ನೀಡಲು ಬಾಕಿ ಇರುವ ಫಲಾನುಭವಿಗಳ ಸಂಖ್ಯೆ ಎಷ್ಟು ? (ಜಿಲ್ಲಾವಾರು ವಿವರ ನೀಡುವುದು)

## ಸಾಮಾಜಿಕ ಭದ್ರತಾ ಯೋಜನೆಗಳು

**ಶ್ರೀ ರಾಜೇಗೌಡ ಟಿ.ಡಿ. (ಶೃಂಗೇರಿ) :-**

೧೦೫ (೧೫೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:-

(ಅ) ರಾಜ್ಯದಲ್ಲಿ ವೃದ್ಧಾಪ್ಯ ವೇತನ, ವಿಧವಾ ವೇತನ, ಅಂಗವಿಕಲರ ವೇತನ, ಸಂಧ್ಯಾ ಸುರಕ್ಷಾ ಯೋಜನೆ ಹಾಗೂ ಇನ್ನಿತರ ಸಾಮಾಜಿಕ ಭದ್ರತಾ ಪಿಂಚಣಿ ವಿತರಣೆ ಸ್ಥಗಿತಗೊಂಡಿರುವುದು/ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಈ ಸಮಸ್ಯೆಗೆ ಕಾರಣಗಳೇನು ;

(ಇ) ಈ ಸಮಸ್ಯೆಯನ್ನು ತ್ವರಿತಗತಿಯಲ್ಲಿ ಬಗೆಹರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಯಾವ ಕಾಲಮಿತಿಯೊಳಗೆ ಬಗೆಹರಿಸಲಾಗುತ್ತದೆ ?

## ಪ್ರವಾಹಕ್ಕೆ ತುತ್ತಾದ ಸಂತ್ರಸ್ತರನ್ನು ಸ್ಥಳಾಂತರಿಸುವುದು

**ಶ್ರೀ ರಾಜೇಗೌಡ ಟಿ.ಡಿ. (ಶೃಂಗೇರಿ) :-**

೧೦೬ (೧೫೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:-

(ಅ) ರಾಜ್ಯದಲ್ಲಿ ಆಗಿಂದಾಗ್ಗೆ ಪ್ರವಾಹಕ್ಕೆ ತುತ್ತಾಗುವ ಪ್ರದೇಶಗಳ ಜನರನ್ನು ಸ್ಥಳಾಂತರಿಸಲು ಸರ್ಕಾರವು ಸ್ಥಳಗಳನ್ನು ಗುರುತಿಸಿದೆಯೇ ; (ವಿವರ ನೀಡುವುದು)

(ಆ) ಹಾಗಿದ್ದಲ್ಲಿ, ಯಾವ ಯಾವ ಜಿಲ್ಲೆಯಲ್ಲಿ ಎಷ್ಟೆಷ್ಟು ಗ್ರಾಮಗಳನ್ನು ಗುರುತಿಸಲಾಗಿದೆ ; (ವಿವರ ನೀಡುವುದು)

(ಇ) ಸದರಿ ಗುರುತಿಸಲಾದ ಗ್ರಾಮಗಳನ್ನು ಸ್ಥಳಾಂತರಿಸಲು ಸರ್ಕಾರ ಕೈಗೊಂಡಿರುವ ಮುಂಜಾಗ್ರತಾ ಕ್ರಮಗಳೇನು ; (ವಿವರ ನೀಡುವುದು)

(ಈ) ಸ್ಥಳಾಂತರಗೊಂಡ ಜನರಿಗೆ ಶಾಶ್ವತವಾಗಿ ಸುರಕ್ಷಿತ ಸ್ಥಳಗಳಲ್ಲಿ ವಸತಿ ಸೌಕರ್ಯಗಳನ್ನು ಕಲ್ಪಿಸಲು ಸರ್ಕಾರ ಯೋಚಿಸಿದೆಯೇ ? (ವಿವರ ನೀಡುವುದು)

## ರಾಷ್ಟ್ರೀಯ ಹೆದ್ದಾರಿಗಳು

**ಶ್ರೀ ರೇವಣ್ಣ ಹೆಚ್.ಡಿ. (ಹೊಳೆನರಸೀಪುರ) :-**

೧೦೭ (೧೫೦) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಷ್ಟ್ರೀಯ ಹೆದ್ದಾರಿ ೩೭೩ರ ದೊಡ್ಡಹಳ್ಳಿ-ಬಿಳಿಕೆರೆ ಜಂಕ್ಷನ್ ರಸ್ತೆಯ ಸರಪಳಿ ೫೩೭.೫೦೦ ರಿಂದ ೫೮೧.೭೦೦ ಕಿ.ಮೀ. ರವರೆಗೆ ಅಭಿವೃದ್ಧಿ ಕಾಮಗಾರಿ (ಪ್ಯಾಕೇಜ್ ೪) ಕಾಮಗಾರಿಗಾಗಿ ೨೦೧೯-೨೦ನೇ ಸಾಲಿನಲ್ಲಿ ಡಿ.ಪಿ.ಆರ್. ಅನ್ನು ಅನುಮೋದನೆಗಾಗಿ ಎನ್.ಹೆಚ್.ಎ.ಐ ನ ಸಿ.ಇ.ಆರ್.ಓ ರವರಿಗೆ ಸಲ್ಲಿಸಿದ್ದು, ಸದರಿ ಕಾಮಗಾರಿಯ ಅನುದಾನವನ್ನು ಬೇರೆಡೆಗೆ ವರ್ಗಾಯಿಸಿ ಸದರಿ ಡಿ.ಪಿ.ಆರ್. ಗೆ ಅನುಮೋದನೆ ನೀಡಿರುವುದು ನಿಜವೇ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಹಾಗಿದ್ದಲ್ಲಿ, ಸದರಿ ಕಾಮಗಾರಿಯನ್ನು ಕೈಗೆತ್ತಿಕೊಳ್ಳದಿರಲು ಕಾರಣಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಸದರಿ ಕಾಮಗಾರಿಯನ್ನು ೨೦೨೦-೨೧ನೇ ಸಾಲಿನ ಕಾರ್ಯಕ್ರಮ ಪಟ್ಟಿಯಲ್ಲಿ ಸೇರಿಸಿ ಅನುಮೋದನೆ ನೀಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ಜಮೀನುಗಳ ಖಾತೆಗಳು

**ಶ್ರೀ ರೇವಣ್ಣ ಹೆಚ್.ಡಿ. (ಹೊಳೆನರಸೀಪುರ) :–**

೧೦೮ (೨೫೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸರ್ಕಾರದಿಂದ ಮಂಜೂರಾಗಿರುವ ಜಮೀನುಗಳ ದುರಸ್ಥಿಗೆ ಹಾಗೂ ಈಗಾಗಲೇ ಮಂಜೂರಾತಿಯಾಗಿದ್ದ ಖಾತೆ ಮಾಡಲು ಬಾಕಿ ಇರುವ ಅರ್ಜಿಗಳೆಷ್ಟು ; ಫಾರಂ ನಂಬರ್ ೫೦, ೫೩, ೫೭ರ ಮಂಜೂರಾತಿಗಾಗಿ ಮಂಡಿಸಲು ಬಾಕಿ ಇರುವ ಅರ್ಜಿಗಳೆಷ್ಟು ; (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಆ) ಸದರಿ ಅರ್ಜಿಗಳನ್ನು ಯಾವ ಕಾಲಮಿತಿಯೊಳಗೆ ವಿಲೇ ಮಾಡಲಾಗುವುದು ; (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಇ) ಸದರಿ ಅರ್ಜಿಗಳನ್ನು ವಿಲೇವಾರಿ ಮಾಡಲು ಸರ್ವೆಯರ್ ಮತ್ತು ಕಂದಾಯ ಇಲಾಖೆ ಸಿಬ್ಬಂದಿಗಳ ಲಭ್ಯತೆ ಇದೆಯೇ ; ಇಲ್ಲದಿದ್ದಲ್ಲಿ, ಸರ್ವೆಯರ್ ಮತ್ತು ಕಂದಾಯ ಇಲಾಖೆಯ ಸಿಬ್ಬಂದಿಗಳ ನೇಮಕಾತಿಗಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ವಿವಿಧ ಯೋಜನೆಗಳು

**ಶ್ರೀ ರೇವಣ್ಣ ಹೆಚ್.ಡಿ. (ಹೊಳೆನರಸೀಪುರ) :–**

೧೦೯ (೧೫೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾಸನ ಜಿಲ್ಲೆಯಲ್ಲಿ ಜುಲೈ ೨೦೧೯ ರಿಂದ ನವೆಂಬರ್ ೨೦೨೦ ರವರೆಗೆ ವಿಧವಾ ವೇತನ, ಸಂಧ್ಯಾ ಸುರಕ್ಷಾ ಯೋಜನೆ, ಇಂದಿರಾ ಗಾಂಧಿ ರಾಷ್ಟ್ರೀಯ ವೃದ್ಧಾಪ್ಯ ಯೋಜನೆ, ಅಂಗವಿಕಲ ಯೋಜನೆ, ಮೈತ್ರಿ ಯೋಜನೆ, ಮನಸ್ವಿನಿ ಯೋಜನೆಗಳಲ್ಲಿ ಹಣ ಸಂದಾಯವಾಗದೆ ಇರುವ ಫಲಾನುಭವಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಆ) ಸದರಿ ಫಲಾನುಭವಿಗಳಿಗೆ ಹಣ ಸಂದಾಯವಾಗದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ ಸದರಿ ಫಲಾನುಭವಿಗಳಿಗೆ ಯಾವ ಕಾಲಮಿತಿಯಲ್ಲಿ ಹಣ ಸಂದಾಯ ಮಾಡಲಾಗುವುದು ;

(ಇ) ಸದರಿ ಫಲಾನುಭವಿಗಳಿಗೆ ಹಣ ಸಂದಾಯವಾಗದೆ ಇರಲು ಕಾರಣಗಳೇನು ; (ಸಂಪೂರ್ಣ ವಿವರ ನೀಡುವುದು)

(ಈ) ಸದರಿ ಫಲಾನುಭವಿಗಳಿಗೆ ಪಾವತಿಸಲು ಬಾಕಿ ಇರುವ ಮೊತ್ತವೆಷ್ಟು ? (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

## ಹುದ್ದೆಗಳ ಭರ್ತಿ

**ಶ್ರೀ ರೇವಣ್ಣ ಹೆಚ್.ಡಿ. (ಹೊಳೆನರಸೀಪುರ) :–**

೧೧೦ (೧೫೪) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾಸನ ಜಿಲ್ಲೆಯಲ್ಲಿ ಕೃಷಿ ಇಲಾಖೆಯಲ್ಲಿ ಸಹಾಯಕ ಕೃಷಿ ಅಧಿಕಾರಿಗಳು, ಕೃಷಿ ಅಧಿಕಾರಿಗಳು ಹಾಗೂ ಇತರೆ ಹುದ್ದೆಗಳು ಹಲವಾರು ವರ್ಷಗಳಿಂದ ಖಾಲಿ ಇರುವುದರಿಂದ ರೈತರ ಕೆಲಸ ಕಾರ್ಯಗಳಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಖಾಲಿ ಇರುವ ಸಹಾಯಕ ಕೃಷಿ ಅಧಿಕಾರಿಗಳು ಮತ್ತು ಕೃಷಿ ಅಧಿಕಾರಿಗಳು ಹಾಗೂ ಇತರೆ ಹುದ್ದೆಗಳೆಷ್ಟು ; (ಹುದ್ದೆಗಳವಾರು, ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಆ) ಸದರಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರವು ಇದುವರೆಗೆ ಕೈಗೊಂಡಿರುವ ಕ್ರಮಗಳೇನು ; (ದಾಖಲೆಯೊಂದಿಗೆ ವಿವರ ನೀಡುವುದು)

(ಇ) ಹಾಸನ ಜಿಲ್ಲೆಯಲ್ಲಿ ಜುಲೈ ೨೦೧೯ ರಿಂದ ನವೆಂಬರ್ ೨೦೨೦ರ ವರೆಗೆ ರಾಜ್ಯ ಮತ್ತು ಕೇಂದ್ರ ಸರ್ಕಾರದಿಂದ ಕೃಷಿ ಇಲಾಖೆಗೆ ಎಸ್.ಎಂ.ಎ.ಎಂ. ಕೃಷಿ ಯಾಂತ್ರಿಕರಣ, ಪಿ.ಎ.ಕೆ.ಎಸ್.ವೈ. ರಾಷ್ಟ್ರೀಯ ಆಹಾರ ಭದ್ರತಾ ಯೋಜನೆ ಅಡಿಯಲ್ಲಿ ಹಾಗೂ ವಿವಿಧ ಲೆಕ್ಕ ಶೀರ್ಷಿಕೆಯಡಿಯಲ್ಲಿ ನೀಡಿರುವ ಅನುದಾನವೆಷ್ಟು ; ಆ ಪೈಕಿ ಸದರಿ ಅವಧಿಯಲ್ಲಿ ಖರ್ಚು ಮಾಡಲಾಗಿರುವ ಅನುದಾನವೆಷ್ಟು ; (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಈ) ಜಿಲ್ಲೆಯಲ್ಲಿ ಈ ಅವಧಿಯಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ ಜಲಾನಯನ ಯೋಜನೆ ಅಡಿಯಲ್ಲಿ ಹಾಗೂ ಪಿ.ಎಂ.ಕೆ.ಎಸ್.ವೈ (ಡಬ್ಲ್ಯೂ.ಡಿ.ಬಿ) ಪಿ.ಎಂ.ಕೆ.ಎಸ್.ವೈ-ಓ ವೈ, ಆರ್.ಕೆ.ವಿ.ವೈ ನಲ್ಲಿ ಚೆಕ್ ಡ್ಯಾಂ, ಗೋಕಟ್ಟೆ, ಕೃಷಿಹೊಂಡ, ನಾಲೆ ಬಂಡು ಹಾಗೂ ಇತರೆ ಯೋಜನೆಯಡಿಯಲ್ಲಿ ನೀಡಿರುವ ಅನುದಾನ ಹಾಗೂ ಖರ್ಚು ಮಾಡಿರುವ ಅನುದಾನವೆಷ್ಟು ? (ತಾಲ್ಲೂಕುವಾರು ವಿವರ ನೀಡುವುದು)

## ದೇವಾಲಯದ ಅಭಿವೃದ್ಧಿ

**ಶ್ರೀ ಎಸ್.ಎನ್.ನಾರಾಯಣಸ್ವಾಮಿ ಕೆ.ಎಂ.(ಬಂಗಾರಪೇಟೆ) :-**

೧೧೧ (೨೪೧) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬಂಗಾರಪೇಟೆ ಪಟ್ಟಣದ ಮುಜರಾಯಿ ಇಲಾಖೆಯ ಶ್ರೀ ಕೋದಂಡರಾಮಸ್ವಾಮಿ ದೇವಾಲಯದ ಆವರಣದಲ್ಲಿ ವಾಣಿಜ್ಯ ಸಂಕೀರ್ಣ, ಪಾರ್ಕಿಂಗ್, ಕಲ್ಯಾಣ ಮಂಟಪ ಇತ್ಯಾದಿಗಳನ್ನು ನಿರ್ಮಿಸಿ ಪ್ರತಿ ಮಾಹೆ ಸರ್ಕಾರಕ್ಕೆ ೨೫ಲಕ್ಷ ರೂಗಳ ಆದಾಯ ತರುವಂತಹ ಯೋಜನೆಗೆ ಮಂಜೂರು ಮಾಡಲಾಗಿದ್ದು ರೂ.೮ ಕೋಟಿಗಳ ಅನುದಾನವನ್ನು ರದ್ದುಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಮಂಜೂರಾತಿಯನ್ನು ರದ್ದುಗೊಳಿಸಲು ಕಾರಣಗಳೇನು;

(ಇ) ಮಂಜೂರಾತಿಯನ್ನು ಮುಂದುವರೆಸಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸುವ ಉದ್ದೇಶ ಸರ್ಕಾರದ ಮುಂದಿದೆಯೇ; ಸಂಪೂರ್ಣ ಮಾಹಿತಿಯನ್ನು ಒದಗಿಸುವುದು?

## ಅಕ್ರಮ-ಸಕ್ರಮ ಅರ್ಜಿ ಸಲ್ಲಿಕೆ

**ಶ್ರೀ ಎಸ್.ಎನ್.ನಾರಾಯಣಸ್ವಾಮಿ ಕೆ.ಎಂ. (ಬಂಗಾರಪೇಟೆ):-**

೧೧೨ (೨೪೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:-

(ಅ) ಕಂದಾಯ ಇಲಾಖೆಯಿಂದ ಬಗರ್ ಹುಕುಂ ಯೋಜನೆಯಲ್ಲಿ ನಮೂನೆ-೫೭ರ ಅರ್ಜಿಗಳನ್ನು ಸಲ್ಲಿಸುವ ಕಾಲಮಿತಿಯನ್ನು ಮುಕ್ತಾಯಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಸೂಕ್ತ ಮಾಹಿತಿ ಇಲ್ಲದೇ ಅರ್ಜಿಗಳನ್ನು ಸಲ್ಲಿಸಲು ಸಾಧ್ಯವಾಗಿಲ್ಲದಿರುವುದರಿಂದ ನಮೂನೆ ೫೭ನ್ನು ಸಲ್ಲಿಸಲು ಅವಧಿಯನ್ನು ಮತ್ತೊಮ್ಮೆ ವಿಸ್ತರಿಸಿ ಅವಕಾಶವನ್ನು ನೀಡಲಾಗುವುದೇ? (ವಿವರ ನೀಡುವುದು)

## ಅನುದಾನ ಬಿಡುಗಡೆ

**ಶ್ರೀ ಎಸ್.ಎನ್.ನಾರಾಯಣಸ್ವಾಮಿ ಕೆ.ಎಂ. (ಬಂಗಾರಪೇಟೆ) :-**

೧೧೩ (೨೪೩) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೨೦-೨೧ನೇ ಸಾಲಿನ ಬಜೆಟ್ ಅನುದಾನದಲ್ಲಿ ಲೋಕೋಪಯೋಗಿ ಇಲಾಖೆ ವತಿಯಿಂದ ಬಂಗಾರಪೇಟೆ ವಿಧಾನಸಭಾ ಕ್ಷೇತ್ರಕ್ಕೆ ಹಂಚಿಕೆ ಮಾಡಲಾಗಿದ್ದ ಕಾಮಗಾರಿಗಳು ಯಾವುವು ಮತ್ತು ಮಂಜೂರಾಗಿರುವ ಮೊತ್ತ ಎಷ್ಟು;

(ಆ) ಸದರಿ ಕಾಮಗಾರಿಗಳನ್ನು ಪ್ರಾರಂಭಿಸಲು ಸರ್ಕಾರಕ್ಕಿರುವ ತೊಂದರೆಗಳೇನು; ತಡೆಹಿಡಿಯಲಾಗಿದ್ದ ಅನುದಾನವನ್ನು ಬಿಡುಗಡೆಗೊಳಿಸಿ ಕಾಮಗಾರಿಗಳನ್ನು ಪ್ರಾರಂಭಿಸಲಾಗುವುದೇ? (ವಿವರ ನೀಡುವುದು)

## ರಸ್ತೆ ಅಭಿವೃದ್ಧಿ

**ಶ್ರೀ ಸಂಜೀವ ಮಠಂದೂರ್ (ಪುತ್ತೂರು) :-**

೧೧೪ (೨೦೩) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಲೋಕೋಪಯೋಗಿ ಇಲಾಖೆಯಿಂದ ಈಗಾಗಲೇ ಮೇಲ್ದರ್ಜೆಗೇರಿಸಿದ ಗ್ರಾಮೀಣ ರಸ್ತೆಗಳ ನಿರ್ವಹಣೆ ಹಾಗೂ ಅಭಿವೃದ್ಧಿಗೆ ಸರ್ಕಾರದಿಂದ ಅನುದಾನ ನೀಡಲಾಗಿದೆಯೇ;

(ಆ) ಹಾಗಿದ್ದಲ್ಲಿ, ಪುತ್ತೂರು ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಮೇಲ್ದರ್ಜೆಗೇರಿಸಿದ ರಸ್ತೆಗಳ ನಿರ್ವಹಣೆ ಹಾಗೂ ಅಭಿವೃದ್ಧಿಗೆ ಸರ್ಕಾರದಿಂದ ಇಲ್ಲಿಯವರೆಗೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ? (ಕಳೆದ ಮೂರು ವರ್ಷಗಳ ಸಂಪೂರ್ಣ ಮಾಹಿತಿ ನೀಡುವುದು)

## ಭಜನಾ ಮಂದಿರ

**ಶ್ರೀ ಸಂಜೀವ ಮಠಂದೂರ್ (ಪುತ್ತೂರು) :-**

೧೧೫ (೨೦೪) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸಾವಿರಾರು ಸಾರ್ವಜನಿಕ ಭಜನಾ ಮಂದಿರಗಳು ಹಾಗೂ ಧಾರ್ಮಿಕ ಶ್ರದ್ಧಾ ಕೇಂದ್ರಗಳು ಕಾರ್ಯ ನಿರ್ವಹಿಸುತ್ತಿದ್ದು, ಇವುಗಳು ಸರ್ಕಾರದ ಮುಜರಾಯಿ ಹಾಗೂ ಧಾರ್ಮಿಕ ದತ್ತಿ ಇಲಾಖೆಯಡಿಯಲ್ಲಿ ನೋಂದಣಿಯಾಗಿರುವುದೇ;

(ಆ) ಹಾಗಿಲ್ಲದಿದ್ದಲ್ಲಿ, ನೋಂದಣಿ ಆಗಬೇಕೆಂಬ ನಿಯಮಾವಳಿ ಪ್ರಸ್ತುತ ಜಾರಿಯಲ್ಲಿ ಇರುವುದೇ; ಇಲ್ಲದಿದ್ದಲ್ಲಿ, ಹೊಸದಾಗಿ ನಿಯಮಾವಳಿಯನ್ನು ರಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಎಂದಿನಿಂದ ಈ ಬಗ್ಗೆ ಸರ್ಕಾರ ಕ್ರಮ ಕೈಗೊಳ್ಳಲಾಗುವುದು?

## ನಾಡ ಕಛೇರಿ ಕಟ್ಟಡ ನಿರ್ಮಾಣ

**ಶ್ರೀ ಸಂಜೀವ ಮಠಂದೂರ್ (ಪುತ್ತೂರು) :-**

೧೧೬ (೨೦೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಪುತ್ತೂರು ತಾಲ್ಲೂಕಿನ ಉಪ್ಪಿನಂಗಡಿ ಹೋಬಳಿಯ ನಾಡ ಕಛೇರಿ ಕಟ್ಟಡ ಶಿಥಿಲಾವಸ್ಥೆಯಲ್ಲಿದ್ದು, ಸರ್ಕಾರದ ದೈನಂದಿನ ಕೆಲಸ ಕಾರ್ಯಗಳ ನಿರ್ವಹಣೆಗೆ ಕಷ್ಟವಾಗಿರುವುದರಿಂದ ನೂತನ ನಾಡ ಕಛೇರಿ ಕಟ್ಟಡವನ್ನು ನಿರ್ಮಾಣ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು;

(ಆ) ತಾಲ್ಲೂಕು ಕೇಂದ್ರಗಳಲ್ಲಿರುವ ಮಿನಿ ವಿಧಾನಸೌಧದ ವಾರ್ಷಿಕ ನಿರ್ವಹಣೆಗೆ ಸರ್ಕಾರದಿಂದ ಅನುದಾನ ಬಿಡುಗಡೆ ಮಾಡಲಾಗಿದೆಯೇ; ಬಿಡುಗಡೆಮಾಡಿದ್ದಲ್ಲಿ, ಇದುವರೆವಿಗೂ ಬಿಡುಗಡೆ ಮಾಡಲಾದ ಅನುದಾನವೆಷ್ಟು?

## ವಸತಿ ಯೋಜನೆ

**ಶ್ರೀ ಸಂಜೀವ ಮಠಂದೂರ್ (ಪುತ್ತೂರು) :-**

೧೧೭ (೨೦೭) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ೨೦೧೬–೧೭ನೇ ಸಾಲಿನ ಯೋಜನೆಯಡಿ ಬರುವ ಬಸವ ವಸತಿ, ವಾಜಪೇಯಿ ವಸತಿ, ಡಾ|| ಬಿ.ಆರ್.ಅಂಬೇಡ್ಕರ್ ವಸತಿ ಯೋಜನೆಯಡಿಯಲ್ಲಿ ಆಯ್ಕೆಯಾದ ಫಲಾನುಭವಿಗಳಿಗೆ ಮನೆ ನಿರ್ಮಾಣಕ್ಕೆ ಅನುದಾನ ಬಿಡುಗಡೆಯಾಗಲು ಬಾಕಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ೨೦೧೬–೧೭ನೇ ಸಾಲಿನಿಂದ ಪುತ್ತೂರು ತಾಲ್ಲೂಕಿಗೆ ಸಂಬಂಧಿಸಿದಂತೆ ವಸತಿ ಯೋಜನೆಯಡಿ ಬಿಡುಗಡೆ ಮಾಡಲು ಬಾಕಿಯಿರುವ ಅನುದಾನವೆಷ್ಟು ಹಾಗೂ ಯಾವ ಕಾಲಮಿತಿಯೊಳಗೆ ಬಿಡುಗಡೆ ಮಾಡಲಾಗುವುದು?

## ಮನೆಗಳ ನಿರ್ಮಾಣ

ಶ್ರೀ ಶರತ್ ಕುಮಾರ್ ಬಚ್ಚೇಗೌಡ (ಹೊಸಕೋಟೆ):-

೧೧೮ (೨೨೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೧೯-೨೦ನೇ ಸಾಲಿನಲ್ಲಿ ಸುಮಾರು ೧೦-೧೨ಜಿಲ್ಲೆಗಳಲ್ಲಿ ಅತಿವೃಷ್ಟಿಯಿಂದಾಗಿ ಆಸ್ತಿಪಾಸ್ತಿಗಳ, ಜನ ಜಾನುವಾರುಗಳ, ಜಮೀನು ಮತ್ತು ಮನೆಗಳ ನಷ್ಟ ಎಷ್ಟು :

(ಆ) ಪ್ರವಾಹ ಪರಿಹಾರಕ್ಕಾಗಿ ಕೇಂದ್ರದ ಎನ್.ಡಿ.ಆರ್.ಎಫ್ ನಿಂದ ಮತ್ತು ರಾಜ್ಯದ ಎಸ್.ಡಿ.ಆರ್.ಎಫ್ ವತಿಯಿಂದ ಬಿಡುಗಡೆಗೊಳಿಸಲಾದ ಹಣ ಎಷ್ಟು : (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಅತಿವೃಷ್ಟಿಯಿಂದ ವಸತಿ ರಹಿತರಾದವರಿಗೆ ಮನೆ ನಿರ್ಮಿಸಿಕೊಡಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು; ಈವರೆಗೆ ಎಷ್ಟು ಮನೆಗಳನ್ನು ನಿರ್ಮಾಣ ಮಾಡಲಾಗಿದೆ;

(ಈ) ರಾಜ್ಯದಲ್ಲಿ ಅತಿವೃಷ್ಟಿಯಿಂದ ಹಾನಿಗೊಳಗಾದ ಜಿಲ್ಲೆಗಳ ಪುನರ್ವಸತಿಗಾಗಿ ಕೇಂದ್ರ ಸರ್ಕಾರದಿಂದ ಪರಿಶೀಲನೆಗಾಗಿ ಬಂದ ತಂಡದ ವತಿಯಿಂದ ನೀಡಲಾಗಿರುವ ವರದಿಯ ಅನುಸಾರ ಎಷ್ಟು ಹಣವನ್ನು ಮಂಜೂರು ಮಾಡಲಾಗಿದೆ ಮತ್ತು ಬಿಡುಗಡೆಯಾದ ಅನುದಾನವೆಷ್ಟು;

(ಉ) ಅತಿವೃಷ್ಟಿಯಿಂದ ವಸತಿರಹಿತರಾದವರಿಗೆ ಮನೆ ನಿರ್ಮಿಸಿಕೊಡಲು ಸರ್ಕಾರ ಈವರೆಗೆ ಬಿಡುಗಡೆ ಮಾಡಿರುವ ಅನುದಾನವೆಷ್ಟು?

## ಅನುಷ್ಠಾನಗೊಳಿಸಿದ ಯೋಜನೆಗಳು

**ಶ್ರೀ ಶರತ್ ಕುಮಾರ್ ಬಚ್ಚೇಗೌಡ (ಹೊಸಕೋಟೆ) :-**

೧೧೯ (೨೩೦) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೧೯-೨೦ ಮತ್ತು ೨೦೨೦-೨೧ನೇ ಸಾಲಿನಲ್ಲಿ ಇಲಾಖೆಗೆ ಒದಗಿಸಿರುವ ಅನುದಾನ ಎಷ್ಟು; ೨೦೨೦-೨೧ರಲ್ಲಿ ಇಲಾಖೆಯು ವತಿಯಿಂದ ಅನುಷ್ಠಾನಗೊಳಿಸಲು ಉದ್ದೇಶಿಸಿರುವ ಯೋಜನೆಗಳು ಯಾವುವು;

(ಆ) ಲೋಕೋಪಯೋಗಿ ಇಲಾಖೆಗೆ ಎಸ್.ಸಿ.ಪಿ / ಟಿ.ಎಸ್.ಪಿ ಯೋಜನೆಯಡಿಯಲ್ಲಿ ಹಂಚಿಕೆಯಾದ ಅನುದಾನವೆಷ್ಟು; ಈ ಪೈಕಿ ಖರ್ಚು ಮಾಡಲಾಗಿರುವ ಹಣ ಎಷ್ಟು : (ವಿವರ ನೀಡುವುದು)

(ಇ) ರಾಜ್ಯದಲ್ಲಿ ಅತಿವೃಷ್ಟಿಯಿಂದಾಗಿ ಹಾನಿಗೊಳಗಾದ ರಸ್ತೆಗಳು, ಸೇತುವೆಗಳು ಮತ್ತು ರಾಜ್ಯ ಹಾಗೂ ರಾಷ್ಟ್ರೀಯ ಹೆದ್ದಾರಿಗಳೆಷ್ಟು; ಅವುಗಳ ದುರಸ್ತಿಗಾಗಿ ಸರ್ಕಾರವು ಬಿಡುಗಡೆಗೊಳಿಸಿರುವ ಅನುದಾನವೆಷ್ಟು ;

(ಈ) ೨೦೧೯-೨೦ನೇ ಸಾಲಿನ ಆಯವ್ಯಯದಲ್ಲಿ ಹೊಸಕೋಟೆ ವಿಧಾನ ಸಭಾ ಕ್ಷೇತ್ರಕ್ಕೆ ಮಂಜೂರಾದ ರಸ್ತೆ ಮತ್ತು ಕಟ್ಟಡ ಕಾಮಗಾರಿಗಳ ಸಂಖ್ಯೆ ಎಷ್ಟು; ಒದಗಿಸಲಾದ ಮೊತ್ತದಲ್ಲಿ ತಡೆಹಿಡಿಯಲಾದ ಮೊತ್ತವೆಷ್ಟು ?

## ವಸತಿ ಯೋಜನೆಗಳು

**ಶ್ರೀ ಶರತ್ ಕುಮಾರ್ ಬಚ್ಚೇಗೌಡ (ಹೊಸಕೋಟೆ) :-**

೧೨೦ (೨೩೧) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಪ್ರಧಾನಮಂತ್ರಿ ಆವಾಸ್ ಯೋಜನೆ ಮತ್ತು ಇತರೆ ವಸತಿ ಯೋಜನೆಗಳಿಗೆ ಕೇಂದ್ರ ಸರ್ಕಾರ ನೀಡುತ್ತಿರುವ ಹಣವೆಷ್ಟು ಮತ್ತು ರಾಜ್ಯ ಸರ್ಕಾರದ ಪಾಲು ಎಷ್ಟು ; (ಕಳೆದ ಮೂರು ವರ್ಷಗಳ ಯೋಜನೆವಾರು ವಿವರ ನೀಡುವುದು)

(ಆ) ಆ ಪೈಕಿ ಕಾಮಗಾರಿ ಪೂರ್ಣಗೊಂಡಿರುವ ಮನೆಗಳೆಷ್ಟು ಮತ್ತು ಕಾಮಗಾರಿ ಬಾಕಿ ಇರುವ ಮನೆಗಳೆಷ್ಟು; ಈ ಯೋಜನೆಯಡಿಯಲ್ಲಿ ಬಿಡುಗಡೆಯಾದ ಅನುದಾನ ಎಷ್ಟು ಮತ್ತು ಬಾಕಿ ಎಷ್ಟು;

(ಇ) ಡಾ||ಬಿ.ಆರ್. ಅಂಬೇಡ್ಕರ್ ವಸತಿ ಯೋಜನೆಯಡಿಯಲ್ಲಿ ಫಲಾನುಭವಿಗಳನ್ನು ಆಯ್ಕೆ ಮಾಡದಿರುವುದಕ್ಕೆ ಕಾರಣಗಳೇನು; ತಾಂತ್ರಿಕ ತೊಂದರೆಗಳನ್ನು ನಿವಾರಿಸಿ ಆಯ್ಕೆ ಪ್ರಕ್ರಿಯೆಯನ್ನು ಯಾವಾಗ ಪ್ರಾರಂಭಿಸಲಾಗುವುದು;

(ಈ) ಗ್ರಾಮ ಪಂಚಾಯಿತಿ ಮಟ್ಟದಲ್ಲಿ ೨೦೧೯-೨೦ನೇ ಸಾಲಿನ ಪ್ರಧಾನಮಂತ್ರಿ ಆವಾಸ್ ಯೋಜನೆಯ ಫಲಾನುಭವಿಗಳನ್ನು ಯಾವಾಗ ಆಯ್ಕೆ ಮಾಡಲಾಗುವುದು?

## ನಿವೇಶನ ರಹಿತರು

**ಶ್ರೀ ಶರತ್ ಕುಮಾರ್ ಬಚ್ಚೇಗೌಡ (ಹೊಸಕೋಟೆ) :-**

೧೨೧ (೨೩೨) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಂಗಳೂರು ಗ್ರಾಮಾಂತರ ಜಿಲ್ಲೆ, ಹೊಸಕೋಟೆ ವಿಧಾನ ಸಭಾ ಕ್ಷೇತ್ರದಲ್ಲಿನ ನಿವೇಶನ ರಹಿತ ಮತ್ತು ವಸತಿ ರಹಿತರ ಸಂಖ್ಯೆ ಎಷ್ಟು; ನಿವೇಶನ ರಹಿತರಿಗೆ ಜಾಗ ಒದಗಿಸುವ ಸಂಬಂಧ ಜಮೀನು ಖರೀದಿಸಲು ಸರ್ಕಾರ ಕೈಗೊಂಡಿರುವ ಕ್ರಮವೇನು; ಬೆಂಗಳೂರು ಗ್ರಾಮಾಂತರ ಜಿಲ್ಲೆ, ಹೊಸಕೋಟೆ ವಿಧಾನ ಸಭಾ ಕ್ಷೇತ್ರಕ್ಕೆ ಪ್ರಸಕ್ತ ಸಾಲಿನ ವಸತಿ ಯೋಜನೆಯಡಿಯಲ್ಲಿ ಸೌಲಭ್ಯ ಕಲ್ಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಕಳೆದ ಮೂರು ವರ್ಷದ ಅವಧಿಯಲ್ಲಿ ಈ ಕ್ಷೇತ್ರಕ್ಕೆ ವಿವಿಧ ವಸತಿ ಯೋಜನೆಯಡಿಯಲ್ಲಿ ಎಷ್ಟು ಮನೆಗಳನ್ನು ಮಂಜೂರು ಮಾಡಲಾಗಿದೆ ; (ಯೋಜನೆವಾರು ವಿವರ ನೀಡುವುದು)

(ಇ) ಬೆಂಗಳೂರು ಗ್ರಾಮಾಂತರ ಜಿಲ್ಲೆ, ಹೊಸಕೋಟೆ ವಿಧಾನಸಭಾ ಕ್ಷೇತ್ರದ ಬಡ ಕುಟುಂಬಗಳಿಗೆ ವಸತಿ ಕಲ್ಪಿಸಲು ಎಷ್ಟು ಬಹು ಅಂತಸ್ತಿನ ಕಟ್ಟಡಗಳನ್ನು ನಿರ್ಮಾಣ ಮಾಡಲು ಉದ್ದೇಶಿಸಲಾಗಿದೆ;

(ಈ) ರಾಜ್ಯದಲ್ಲಿ ಅನುಷ್ಠಾನದಲ್ಲಿರುವ ವಸತಿ ಯೋಜನೆಗಳು ಯಾವುವು; ಅವುಗಳು ಯಾವ ಹಂತದಲ್ಲಿವೆ?

## ರಸ್ತೆ ನಿರ್ಮಾಣ

**ಶ್ರೀ ಶಿವಲಿಂಗೇಗೌಡ ಕೆ.ಎಂ. (ಅರಸೀಕೆರೆ) :–**

೧೨೨ (೪೯) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುಮಕೂರು–ಹೊನ್ನಾವರ ರಸ್ತೆಯು ಎನ್.ಹೆಚ್. ನಿಂದ ಎನ್.ಹೆಚ್.ಎ.ಐ ಗೆ ವರ್ಗಾವಣೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಎನ್.ಹೆಚ್.ಎ.ಐ. ರಸ್ತೆಯ ಅರಸೀಕೆರೆ, ಬೆಂಡೆಕೆರೆ, ಬಾಣಾವರ ಸ್ಥಳಗಳಲ್ಲಿ ಬೈ ಪಾಸ್ ರಸ್ತೆ ನಿರ್ಮಾಣವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದಲ್ಲಿ, ಇದ್ದ ಹಳೆಯ ಹಾಗೂ ಪ್ರಸ್ತುತ ನಿರ್ಮಾಣವಾಗುತ್ತಿರುವ ರಸ್ತೆಗಳ ನಿರ್ವಹಣೆ ಜವಾಬ್ದಾರಿ ಯಾರಿಗೆ ಸೇರಿರುತ್ತದೆ? (ವಿವರ ನೀಡುವುದು)

## ಮಂಜೂರಾಗಿರುವ ಹುದ್ದೆಗಳು

ಶ್ರೀ ಶಿವಲಿಂಗೇಗೌಡ ಕೆ.ಎಂ. (ಅರಸೀಕೆರೆ) :–

೧೨೩ (೫೦) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯದಲ್ಲಿ ಕೃಷಿ ಇಲಾಖೆಯಲ್ಲಿ ವಿವಿಧ ವೃಂದಗಳಲ್ಲಿ ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು; (ವೃಂದಾವಾರು ವಿವರ ನೀಡುವುದು)

(ಆ) ಪ್ರಸ್ತುತ ಯಾವ್ಯಾವ ವೃಂದದಲ್ಲಿ ಎಷ್ಟೆಷ್ಟು ನೌಕರರು ಕಾರ್ಯ ನಿರ್ವಹಿಸುತ್ತಿದ್ದಾರೆ ಹಾಗೂ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು ; (ತಾಲ್ಲೂಕು ಮತ್ತು ವೃಂದಾವಾರು ವಿವರ ನೀಡುವುದು)

(ಇ) ಹುದ್ದೆಗಳು ಖಾಲಿ ಇರುವುದರಿಂದ ಇಲಾಖೆಯ ಅಭಿವೃದ್ಧಿ ಕುಂಠಿತವಾಗಿದ್ದು, ರೈತರುಗಳಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಖಾಲಿಯಿರುವ ಹುದ್ದೆಗಳನ್ನು ಭರ್ತಿಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಸಂಪೂರ್ಣ ವಿವರ ನೀಡುವುದು)

## ಅನುದಾನ ಬಿಡುಗಡೆ

**ಶ್ರೀ ಶಿವಲಿಂಗೇಗೌಡ ಕೆ.ಎಂ. (ಅರಸೀಕೆರೆ) :-**

೧೨೪ (೫೨) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:-

(ಅ) ೨೦೨೦-೨೧ನೇ ಸಾಲಿಗೆ ಮುಜರಾಯಿ ಇಲಾಖೆಯ ವತಿಯಿಂದ ಯಾವ ಯಾವ ಕಾಮಗಾರಿ/ಯೋಜನೆಗಳಿಗೆ ಎಷ್ಟೆಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ; (ಲೆಕ್ಕಶೀರ್ಷಿಕೆವಾರು ವಿವರ ನೀಡುವುದು)

(ಆ) ೨೦೧೯-೨೦ನೇ ಸಾಲಿಗೆ ಇಲಾಖೆಗೆ ನಿಗದಿಯಾಗಿರುವ, ಬಿಡುಗಡೆಯಾದ ಹಾಗೂ ಖರ್ಚಾಗಿರುವ ಹಣ ಎಷ್ಟು?

## ವಿಮಾನ ನಿಲ್ದಾಣ

**ಶ್ರೀ ಶಿವಲಿಂಗೇಗೌಡ ಕೆ.ಎಂ. (ಅರಸೀಕೆರೆ) :-**

೧೨೫ (೧೯೫) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:-

(ಅ) ಕಳೆದ ೧೦ ವರ್ಷಗಳ ಹಿಂದೆ ಶಿವಮೊಗ್ಗ ನಗರದಲ್ಲಿ ವಿಮಾನ ನಿಲ್ದಾಣ ಕಾಮಗಾರಿಗೆ ಅನುಮೋದನೆಯಾಗಿದ್ದು, ಪ್ರಸ್ತುತ ಸರ್ಕಾರ ಅಧಿಕಾರಕ್ಕೆ ಬಂದನಂತರ ರೂ.೨೨೦.೦೦ ಕೋಟಿಗಳ ಅನುದಾನ ನೀಡಿರುವುದು ನಿಜವೇ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಶಿವಮೊಗ್ಗ ವಿಮಾನ ನಿಲ್ದಾಣದ ಕಾಮಗಾರಿಗೆ ಹಿಂದೆ ನಿಗದಿಯಾಗಿದ್ದ ಗುತ್ತಿಗೆದಾರರು ಯಾರು; ಹಾಗೂ ಸದರಿ ಹಿಂದಿನ ಗುತ್ತಿಗೆದಾರಿಕೆಯನ್ನು ರದ್ದುಪಡಿಸಲು ಕಾರಣಗಳೇನು; (ಸಂಪೂರ್ಣ ವಿವರ ನೀಡುವುದು)

(ಇ) ಶಿವಮೊಗ್ಗ ವಿಮಾನ ನಿಲ್ದಾಣದ ಕಾಮಗಾರಿ ಪ್ರಸ್ತುತ ಯಾವ ಹಂತದಲ್ಲಿದೆ; ೨೦೨೦-೨೧ನೇ ಸಾಲಿನ ಆರ್ಥಿಕ ವರ್ಷದಲ್ಲಿ ಸದರಿ ಕಾಮಗಾರಿಗಳಿಗೆ ಲೋಕೋಪಯೋಗಿ ಇಲಾಖೆಯಿಂದ ಬಿಡುಗಡೆಯಾಗಿರುವ ಹಣ ಭರವಸೆ ಪತ್ರಗಳೆಷ್ಟು; ಇವುಗಳಲ್ಲಿ ಎಷ್ಟು ತೀರುವಳಿ ಮಾಡಲಾಗಿದೆ ? (ಸಂಪೂರ್ಣ ವಿವರ ನೀಡುವುದು)

## ಅನುದಾನ ಹೆಚ್ಚಿಸುವುದು

ಶ್ರೀ ಬಿ. ಶಿವಣ್ಣ (ಆನೇಕಲ್):-

೧೨೬ (೧೬೫) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ ಮೂರು ವರ್ಷಗಳಲ್ಲಿ ಆನೇಕಲ್ ತಾಲ್ಲೂಕಿಗೆ ಕೃಷಿ ಇಲಾಖೆಯ ವಿವಿಧ ಯೋಜನೆಗಳಡಿಯಲ್ಲಿ ಎಲ್ಲಾ ವರ್ಗದವರಿಗೆ ನಿಗದಿ ಮಾಡಿರುವ ಫಲಾನುಭವಿಗಳೆಷ್ಟು ಹಾಗೂ ಅನುದಾನವೆಷ್ಟು; (ವಿವರ ನೀಡುವುದು)

(ಆ) ಪ್ರಸ್ತುತ ನೀಡುತ್ತಿರುವ ಅನುದಾನ ಹಾಗೂ ಫಲಾನುಭವಿಗಳ ಸಂಖ್ಯೆಗಳೆಷ್ಟು ; (ಅನುದಾನವಾರು, ಫಲಾನುಭವಿವಾರು, ವಿವರ ನೀಡುವುದು)

(ಇ) ಪ್ರಸ್ತುತ ಎಲ್ಲಾ ವರ್ಗಗಳ ರೈತ ಫಲಾನುಭವಿಗಳ ಸಂಖ್ಯೆ ಹೆಚ್ಚಳಕ್ಕೆ ಸರ್ಕಾರಕ್ಕೆ ಪ್ರಸ್ತಾವನೆ ಬಂದಿದೆಯೇ ? (ಮಾಹಿತಿ ನೀಡುವುದು)

## ರಸ್ತೆಗಳ ನಿರ್ವಹಣೆ

**ಶ್ರೀ ಬಿ. ಶಿವಣ್ಣ (ಆನೇಕಲ್):–**

೧೨೭ (೨೩೫) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಆನೇಕಲ್ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಲೋಕೋಪಯೋಗಿ ಇಲಾಖೆಯ ಅಧೀನದಲ್ಲಿರುವ ರಸ್ತೆಗಳೆಷ್ಟು ; (ಕಿಲೋಮೀಟರ್‌ಗಳಲ್ಲಿ ಮಾಹಿತಿಯನ್ನು ನೀಡುವುದು)

(ಆ) ೨೦೨೦–೨೧ನೇ ಸಾಲಿನಲ್ಲಿ ಆನೇಕಲ್ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಲೋಕೋಪಯೋಗಿ ಇಲಾಖೆಯ ಅಧೀನದಲ್ಲಿರುವ ರಸ್ತೆಗಳ ನಿರ್ವಹಣೆಗೆ ಮಂಜೂರಾದ ಹಾಗೂ ಬಿಡುಗಡೆಯಾದ ಹಣ ಎಷ್ಟು ; (ಪೂರ್ಣ ವಿವರ ನೀಡುವುದು)

(ಇ) ಹಾಗಿದ್ದಲ್ಲಿ, ಎಷ್ಟು ಕಿಲೋಮೀಟರ್ ರಸ್ತೆಗಳ ನಿರ್ವಹಣೆಯನ್ನು ಪ್ರಸಕ್ತ ವರ್ಷ ಮಾಡಲಾಗಿದೆ ? (ಮಾಹಿತಿ ನೀಡುವುದು)

## ಅಂಬೇಡ್ಕರ್ ಭವನದ ಕಾಮಗಾರಿ

**ಶ್ರೀ ಬಿ. ಶಿವಣ್ಣ (ಆನೇಕಲ್):–**

೧೨೮ (೨೩೬) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಆನೇಕಲ್ ತಾಲ್ಲೂಕು ಕೇಂದ್ರದಲ್ಲಿ ನಿರ್ಮಾಣವಾಗುತ್ತಿರುವ ಅಂಬೇಡ್ಕರ್ ಭವನದ ಕಾಮಗಾರಿಯು ಯಾವ ಹಂತದಲ್ಲಿದೆ ; (ವಿವರ ನೀಡುವುದು)

(ಆ) ಅಂಬೇಡ್ಕರ್ ಭವನ ನಿರ್ಮಾಣಕ್ಕೆ ಮಂಜೂರಾದ, ಇದುವರೆವಿಗೂ ಖರ್ಚಾಗಿರುವ ಹಾಗೂ ಬಿಡುಗಡೆಗೆ ಬಾಕಿಯಿರುವ ಅನುದಾನವೆಷ್ಟು ; (ಪೂರ್ಣ ವಿವರ ನೀಡುವುದು)

(ಇ) ಅಂಬೇಡ್ಕರ್ ಭವನವನ್ನು ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು ? (ವಿವರ ನೀಡುವುದು)

## ಹಕ್ಕು ಪತ್ರಗಳ ವಿತರಣೆ

ಶ್ರೀ ಬಿ. ಶಿವಣ್ಣ (ಆನೇಕಲ್):-

೧೨೯ (೨೩೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಆನೇಕಲ್ ತಾಲ್ಲೂಕಿನಲ್ಲಿ ೯೪ಸಿ ಅಡಿಯಲ್ಲಿ ಮಂಜೂರಾದ ಹಕ್ಕು ಪತ್ರಗಳೆಷ್ಟು ; (ಪೂರ್ಣ ವಿವರ ನೀಡುವುದು)

(ಆ) ೯೪ಸಿ ಅಡಿಯಲ್ಲಿ ಅರ್ಜಿ ಸಲ್ಲಿಸಿರುವವರ ಹಕ್ಕು ಪತ್ರ ಪಡೆದಿರುವವರ ಹಾಗೂ ಹಕ್ಕು ಪತ್ರ ಪಡೆಯದಿರುವವರ ಸಂಖ್ಯೆ ಎಷ್ಟು ; (ಪೂರ್ಣ ವಿವರ ನೀಡುವುದು)

(ಇ) ೯೪ಸಿ ಅಡಿಯಲ್ಲಿ ಹಕ್ಕು ಪತ್ರ ಪಡೆದಿದ್ದು, ಅವುಗಳು ಸಬ್ ರಿಜಿಸ್ಟ್ರಾರ್ ಕಛೇರಿಯಲ್ಲಿ ನೊಂದಣಿಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ವಸತಿ ನಿರ್ಮಾಣ

**ಶ್ರೀ ಬಿ. ಶಿವಣ್ಣ (ಆನೇಕಲ್):–**

೧೩೦ (೨೩೮) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಆನೇಕಲ್ ತಾಲ್ಲೂಕಿನ ಸೂರ್ಯನಗರ ೪ನೇ ಹಂತದ ವಸತಿ ನಿರ್ಮಾಣ ಕಾಮಗಾರಿಗೆ ಭೂಸ್ವಾಧೀನಪಡಿಸಿಕೊಂಡ ಜಮೀನುಗಳೆಷ್ಟು ; (ಗ್ರಾಮವಾರು ವಿವರ ನೀಡುವುದು)

(ಆ) ೪ನೇ ಹಂತದ ವಸತಿ ನಿರ್ಮಾಣದ ಯೋಜನೆಯು ಯಾವ ಹಂತದಲ್ಲಿದೆ ಹಾಗೂ ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲು ಸರ್ಕಾರ ಯೋಜನೆ ರೂಪಿಸಿದೆ ? (ವಿವರ ನೀಡುವುದು)

## ಪರಿಹಾರ ನೀಡುವುದು

**ಶ್ರೀ ಸಿದ್ದು ಸವದಿ (ತೇರದಾಳ):–**

೧೩೧ (೨೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೯–೨೦ರಲ್ಲಿ ಭಾರಿ ಪ್ರವಾಹದಿಂದ ಸಂಪೂರ್ಣ ಬೆಳೆ ಹಾಳಾಗಿರುವ ಸಂಬಂಧ ಪರಿಹಾರ ವಿತರಣೆಗೆ ಬಾಕಿಯುಳಿದಿರುವ ರೈತರುಗಳ ಸಂಖ್ಯೆಯೆಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಶೇಕಡ ೫೫ ರಿಂದ ೬ ರಷ್ಟು ರೈತರನ್ನು ಕಡೆಗಣಿಸಲು ಕಾರಣಗಳೇನು ; ಡಾಟಾ ಎಂಟ್ರಿ ಆದರೂ ಈ ರೈತರು ಪರಿಹಾರ ವಂಚಿತರಾಗಿರುವುದಕ್ಕೆ ಕಾರಣಗಳೇನು ; ಈ ರೀತಿ ಪರಿಹಾರ ವಂಚಿತ ರೈತರಿಗೆ ಯಾವ ಕಾಲಮಿತಿಯಲ್ಲಿ ಪರಿಹಾರ ನೀಡಲಾಗುವುದು ?

## ಬ್ಲಾಕ್ ಆಗಿರುವ ಮನೆಗಳು

ಶ್ರೀ ಸಿದ್ದು ಸವದಿ (ತೇರದಾಳ):-

೧೩೨ (೩೦) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ತೇರದಾಳ ಕ್ಷೇತ್ರದಲ್ಲಿ ಬ್ಲಾಕ್ ಅಗಿರುವ ಮನೆಗಳೆಷ್ಟು ; (ಗ್ರಾಮ ಪಂಚಾಯಿತಿವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ರೀತಿ ಬ್ಲಾಕ್ ಆಗಲು ಕಾರಣಗಳೇನು ; ಬ್ಲಾಕ್ ಆಗಿರುವ ಮನೆಗಳನ್ನು ಯಾವಾಗ ಅನ್‌ಬ್ಲಾಕ್ ಮಾಡಲಾಗುವುದು ; ಈಗಾಗಲೇ ಅರ್ಧ ಮನೆಗಳನ್ನು ಕಟ್ಟಿರುವ ಫಲಾನುಭವಿಗಳಿಗೆ ಯಾವಾಗ ಬಿಲ್ ಪಾವತಿ ಮಾಡಲಾಗುವುದು ;

(ಇ) ಪ್ರವಾಹ ಮತ್ತು ಅತಿವೃಷ್ಟಿ ಮಳೆಯಿಂದ ಸಂಪೂರ್ಣ ಬಿದ್ದ ಮತ್ತು ಭಾಗಶಃ ಹಾನಿಯಾದ ಮನೆಗಳ ಸಂಖ್ಯೆಗಳೆಷ್ಟು ; (ತೇರದಾಳ ಕ್ಷೇತ್ರದ ಗ್ರಾಮವಾರು ಮಾಹಿತಿ ನೀಡುವುದು)

(ಈ) ಸದರಿ ಮನೆಗಳು ಯಾವ ಹಂತದಲ್ಲಿವೆ ; ಯಾವಾಗ ಪೂರ್ಣಗೊಳಿಸಲಾಗುವುದು ;

(ಉ) ಇಲ್ಲಿಯ ಸಿಬ್ಬಂದಿಗಳು ಮನೆ ಪಡೆದ ಫಾಲನುಭವಿಗಳಿಂದ ಹಣ ಸುಲಿಗೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಣ ಕೊಡದಿದ್ದರೆ 'ಎ' ಇರುವ ಕೆಟಗರಿಯನ್ನು ಬಿ೧ ಮತ್ತು ಸಿ ಮಾಡುತ್ತಿರುವುದು. ಇಲ್ಲವೇ ರದ್ದು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕಾರಣರಾದವರ ವಿರುದ್ಧ ಯಾವ ಕ್ರಮ ಜರುಗಿಸಲಾಗುವುದು ?

## ದುರಸ್ಥಿರಲ್ಲಿರುವ ರಸ್ತೆಗಳು

**ಶ್ರೀ ಸಿದ್ದು ಸವದಿ (ತೇರದಾಳ):–**

೧೩೩ (೩೧) ಮಾನ್ಯ ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:–

(ಅ) ರಾಜ್ಯದಲ್ಲಿ ಅತಿವೃಷ್ಟಿ ಮಳೆಯಿಂದ ಬಹುತೇಕ ಸಂಪೂರ್ಣ ರಸ್ತೆಗಳು ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರಿಪಡಿಸಲು ಯಾವ ಕ್ರಮ ಕೈಗೊಳ್ಳಲಾಗುವುದು ;

(ಆ) ತೇರದಾಳ ಮತಕ್ಷೇತ್ರದಲ್ಲಿ ಹತ್ತಾರು ಸಕ್ಕರೆ ಕಾರ್ಖಾನೆಗಳಿದ್ದು ಹೆವಿ ಲೋಡಿನ ಟ್ರ್ಯಾಕ್ಟರ್‌ಗಳಿಂದ ರಸ್ತೆಗಳು ಹಾಳಾಗುತ್ತಿದ್ದು, ಸಾಧಾರಣ ದುರಸ್ಥಿಗಳಿಂದ ಪುನಃ ಒಂದೇ ತಿಂಗಳಲ್ಲಿ ರಸ್ತೆಗಳು ಹಾಳಾಗುತ್ತಿರುವುದನ್ನು ಯಾವರೀತಿ ಅಭಿವೃದ್ಧಿಪಡಿಸಲಾಗುವುದು ;

(ಇ) ರಬಕವಿ ಮಹಾಲಿಂಗಪುರ ಮತ್ತು ತೇರದಾಳ ರಬಕವಿ ರಸ್ತೆಗಳಲ್ಲಿ ಸಂಚಾರ ದಟ್ಟಣೆಯಿರುವುದರಿಂದ ಒನ್‌ವೇ ರಸ್ತೆಗಳ (ಡಬಲ್) ಅವಶ್ಯಕತೆ ಇರುವುದಕ್ಕೆ ಹಣ ಮಂಜೂರು ಮಾಡಿ ಯಾವ ಕಾಲಮಿತಿಯಲ್ಲಿ ಸರಿಪಡಿಸಲಾಗುವುದು ?

## ಸರ್ಕಾರಿ ಭೂಮಿ

**ಡಾ॥ ಕೆ. ಶ್ರೀನಿವಾಸಮೂರ್ತಿ (ನೆಲಮಂಗಲ):–**

೧೩೪ (೧೭೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:–

(ಅ) ನೆಲಮಂಗಲ ವಿಧಾನ ಸಭಾ ಕ್ಷೇತ್ರದಲ್ಲಿರುವ ಒಟ್ಟು ಸರ್ಕಾರಿ ಭೂಮಿ ಎಷ್ಟು ; ಗ್ರಾಮಗಳಲ್ಲಿರುವ ಸರ್ಕಾರಿ ಭೂಮಿಯ ವಿಸ್ತೀರ್ಣವೇಷ್ಟು ; (ಗ್ರಾಮವಾರು ಮತ್ತು ಸರ್ವೆನಂಬರ್ ಸಹಿತ ಪೂರ್ಣ ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಿಂದ ಈ ಕ್ಷೇತ್ರದಲ್ಲಿ ಸರ್ಕಾರಿ ಭೂಮಿಯನ್ನು ಯಾವ ಗ್ರಾಮಗಳಲ್ಲಿ ಯಾವ ಯಾವ ಉದ್ದೇಶಗಳಿಗಾಗಿ ಮಂಜೂರು ಮಾಡಲಾಗಿದೆ ; (ಗ್ರಾಮವಾರು ಉದ್ದೇಶವಾರು ಪೂರ್ಣ ವಿವರ ನೀಡುವುದು)

(ಇ) ಈ ಕ್ಷೇತ್ರದಲ್ಲಿ ಸರ್ಕಾರದ ಜಮೀನುಗಳು ಒತ್ತುವರಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಒತ್ತುವರಿ ಮಾಡಿಕೊಂಡವರ ವಿರುದ್ಧ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ; (ಒತ್ತುವರಿಯಾದ ಜಮೀನಿನ ಮಾಹಿತಿ ನೀಡುವುದು)

(ಈ) ಈ ಕ್ಷೇತ್ರದಲ್ಲಿರುವ ಸರ್ಕಾರದ ಜಮೀನಿನನ್ನು ಬಡವರಿಗೆ, ನಿರ್ಗತಿಕರಿಗೆ ಮತ್ತು ಕೂಲಿಕಾರ್ಮಿಕರಿಗೆ ಆಶ್ರಯ ಯೋಜನೆಯಡಿ ಎಷ್ಟು ಜನರಿಗೆ ನೀಡಲಾಗಿದೆ ; ಗೋಮಾಳಗಳಲ್ಲಿ ಮನೆಗಳನ್ನು ನಿರ್ಮಿಸಿ ಕೊಂಡಿರುವವರ ಸಂಖ್ಯೆ ಎಷ್ಟು ; (ಗ್ರಾಮವಾರು ಮಾಹಿತಿ ನೀಡುವುದು)

(ಉ) ಕಂದಾಯ ಇಲಾಖೆಯ ಸರ್ಕಾರಿ ಗೋಮಾಳ ಮತ್ತು ಖರಾಬು ಜಮೀನುಗಳಲ್ಲಿ ಕೆಲವು ಬಡ ರೈತರು ವ್ಯವಸಾಯ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ವ್ಯವಸಾಯ ಮಾಡುತ್ತಿರುವ ರೈತರಿಗೆ ಆ ಜಮೀನನ್ನು ಮಂಜೂರು ಮಾಡಿ ಹಕ್ಕು ಪತ್ರಗಳನ್ನು ನೀಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಮುಜರಾಯಿ ದೇವಾಲಯಗಳು

ಡಾ॥ ಕೆ. ಶ್ರೀನಿವಾಸಮೂರ್ತಿ (ನೆಲಮಂಗಲ):–

೧೩೫ (೧೭೫) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನೆಲಮಂಗಲ ವಿಧಾನಸಭಾ ಕ್ಷೇತ್ರದಲ್ಲಿ ಇರುವ ಮುಜರಾಯಿ ದೇವಾಲಯಗಳ ಸಂಖ್ಯೆ ಎಷ್ಟು ; (ಗ್ರಾಮವಾರು ದೇವಾಲಯವಾರು ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಿಂದ ಈ ಕ್ಷೇತ್ರದಲ್ಲಿರುವ ಮುಜರಾಯಿ ದೇವಾಲಯಗಳ ಅಭಿವೃದ್ಧಿಗೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ; (ದೇವಾಲಯವಾರು ಬಿಡುಗಡೆಯಾದ ಅನುದಾನದ ಆದೇಶ ಪ್ರತಿ ನೀಡುವುದು)

(ಇ) ಕಳೆದ ಮೂರು ವರ್ಷಗಳಿಂದ ಈ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಮುಜರಾಯಿ ದೇವಾಲಯಗಳಿಂದ ಸಂಗ್ರಹಿಸಿದ ಹುಂಡಿಯ ಹಣವೆಷ್ಟು ; ಯಾವ ಯಾವ ದೇವಾಲಯಗಳಿಂದ ಎಷ್ಟೆಷ್ಟು ಹುಂಡಿ ಹಣವನ್ನು ಸರ್ಕಾರದಿಂದ ಪಡೆಯಲಾಗಿದೆ ;

(ಈ) ಮುಜರಾಯಿ ದೇವಾಲಯಗಳಿಂದ ಸಂಗ್ರಹಿಸಿದ ಹುಂಡಿ ಹಣವನ್ನು ಯಾವ ಯಾವ ಕಾರ್ಯಕ್ರಮಗಳಿಗೆ ವಿನಿಯೋಗಿಸಲಾಗಿದೆ ;

(ಉ) ಪ್ರಸಕ್ತ ಸಾಲಿನಲ್ಲಿ ಪ್ರಸಿದ್ಧ ಯಾತ್ರ ಸ್ಥಳವಾದ ಶಿವಗಂಗೆ ಬೆಟ್ಟದ ಹಾಗೂ ದೇವಾಲಯದ ಅಭಿವೃದ್ಧಿಗಾಗಿ ಅನುದಾನ ನೀಡಲಾಗುವುದೇ ?

## ಮನೆಗಳ ನಿರ್ಮಾಣ

**ಡಾ॥ ಕೆ. ಶ್ರೀನಿವಾಸಮೂರ್ತಿ (ನೆಲಮಂಗಲ):–**

೧೩೬ (೧೭೬) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಿಂದ ನೆಲಮಂಗಲ ವಿಧಾನ ಸಭಾ ಕ್ಷೇತ್ರಕ್ಕೆ ವಿವಿಧ ವಸತಿ ಯೋಜನೆಯಡಿ ಎಷ್ಟೆಷ್ಟು ಮನೆಗಳನ್ನು ಮಂಜೂರು ಮಾಡಲಾಗಿದೆ ; (ಯೋಜನೆವಾರು, ಫಲಾನುಭವಿಗಳ ಹೆಸರು ಸಮೇತ ಗ್ರಾಮವಾರು ವಿವರ ನೀಡುವುದು)

(ಆ) ಈ ಕ್ಷೇತ್ರಕ್ಕೆ ೨೦೨೦–೨೧ನೇ ಸಾಲಿನಲ್ಲಿ ಕರ್ನಾಟಕ ರಾಜ್ಯ ಕೊಳಚೆ ನಿರ್ಮೂಲನಾ ಮಂಡಳಿಯಿಂದ PMAY(U) HFA Scheme ನಲ್ಲಿ ೨೦೦ ಮನೆಗಳನ್ನು ನಿರ್ಮಾಣ ಮಾಡುವ ಕಾಮಗಾರಿಯು ಯಾವ ಹಂತದಲ್ಲಿದೆ ;

(ಇ) ಈ ಕ್ಷೇತ್ರದಲ್ಲಿ ಸಮೂಹ ಮನೆಗಳನ್ನು ನಿರ್ಮಾಣ ಮಾಡುವ ಪ್ರಸ್ತಾವನೆ ಸರ್ಕಾರದ ಹಂತದಲ್ಲಿದೆಯೇ ; ಹಾಗಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಮಂಜೂರು ಮಾಡಲಾಗುವುದು ;

(ಈ) ಈ ಕ್ಷೇತ್ರದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿರುವ ಅಲೆಮಾರಿ ಅರೆ ಅಲೇಮಾರಿ ಜನಾಂಗದವರಿಗೆ ವಸತಿ ಸೌಕರ್ಯ ಕಲ್ಪಿಸಲು ಸರ್ಕಾರ ತೀರ್ಮಾನಿಸಿದೆಯೇ ;

(ಉ) ನೆಲಮಂಗಲ ನಗರ ಮತ್ತು ಗ್ರಾಮಾಂತರ ಭಾಗಗಳಲ್ಲಿ ವಸತಿ ಯೋಜನೆಯಡಿ ಮನೆಗಳನ್ನು ನಿರ್ಮಾಣ ಮಾಡಲು ಅನುಸರಿಸಿರುವ ಮಾನದಂಡಗಳೇನು ?

## ಹಂಚಿಕೆಯಾದ ಅನುದಾನ

**ಡಾ॥ ಕೆ. ಶ್ರೀನಿವಾಸಮೂರ್ತಿ (ನೆಲಮಂಗಲ):–**

೧೩೭ (೧೭೭) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:–

(ಅ) ಕಳೆದ ಮೂರು ವರ್ಷಗಳಿಂದ ನೆಲಮಂಗಲ ವಿಧಾನ ಸಭೆ ಕ್ಷೇತ್ರಕ್ಕೆ ಸರ್ಕಾರದಿಂದ ಬಿಡುಗಡೆಯಾದ, ತಡೆಹಿಡಿಯಲಾದ ಅನುದಾನವೆಷ್ಟು ; ತಡೆಹಿಡಿಯಲಾದ ಅನುದಾನವನ್ನು ಯಾವಾಗ ಬಿಡುಗಡೆ ಮಾಡಲಾಗುವುದು ; (ಕಾಮಗಾರಿವಾರು ವಿವರ ನೀಡುವುದು)

(ಆ) ಹಾಗಿದ್ದಲ್ಲಿ, ಕೈಗೆತ್ತಿಕೊಳ್ಳಲಾಗಿರುವ ಕಾಮಗಾರಿಗಳೆಷ್ಟು ; ಪ್ರಗತಿಯಲ್ಲಿರುವ ಹಾಗೂ ಪೂರ್ಣಗೊಂಡಿರುವ ಕಾಮಗಾರಿಗಳ ಸಂಖ್ಯೆ ಎಷ್ಟು ;

(ಇ) ಕಳೆದ ಮೂರು ವರ್ಷಗಳಿಂದ ಈ ಕ್ಷೇತ್ರಕ್ಕೆ SCP, TSP ಯೋಜನೆಯಡಿ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ; (ಕಾಮಗಾರಿವಾರು ವಿವರ ನೀಡುವುದು)

(ಈ) ಲೋಕೋಪಯೋಗಿ ಇಲಾಖೆಯಲ್ಲಿರುವ ವಿವಿಧ ಯೋಜನೆಗಳು ಯಾವುದು ; ಯಾವ ಯಾವ ಲೆಕ್ಕ ಶೀರ್ಷಿಕೆಯಡಿ ಯಾವ ಯಾವ ಯೋಜನೆಗಳನ್ನು ಜಾರಿಗೆ ತರಲಾಗುವುದು ;

(ಉ) ೨೦೨೦-೨೧ ನೇ ಸಾಲಿನಲ್ಲಿ ಈ ಕ್ಷೇತ್ರಕ್ಕೆ ಎಷ್ಟು ಅನುದಾನ ಬಿಡುಗಡೆ ಮಾಡಲು ಸರ್ಕಾರ ತೀರ್ಮಾನಿಸಿದೆ ?

## ಬಿಡುಗಡೆಯಾದ ಅನುದಾನ

**ಡಾ॥ ಕೆ. ಶ್ರೀನಿವಾಸಮೂರ್ತಿ (ನೆಲಮಂಗಲ):–**

೧೩೮ (೧೭೮) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಿಂದ ನೆಲಮಂಗಲ ವಿಧಾನ ಸಭಾ ಕ್ಷೇತ್ರಕ್ಕೆ ಕೃಷಿ ಇಲಾಖೆಯಿಂದ ಬಿಡುಗಡೆಯಾದ ಅನುದಾನವೆಷ್ಟು ; ಯಾವ ಯಾವ ಯೋಜನೆಗೆ ಎಷ್ಟೆಷ್ಟು ಹಂಚಿಕೆ ಮಾಡಲಾಗಿದೆ ; (ಯೋಜನೆವಾರು ವಿವರ ನೀಡುವುದು)

(ಆ) ಈ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ರೈತರಿಗೆ ಪ್ರಧಾನ ಮಂತ್ರಿ ಕಿಸಾನ್ ಯೋಜನೆಯಡಿ ಎಷ್ಟು ರೈತರಿಗೆ ನೇರ ನಗದು ವರ್ಗಾವಣೆ ಮುಖಾಂತರ ನೆರವು ನೀಡಲಾಗಿದೆ ; ಪ್ರತಿ ರೈತರಿಗೆ ಕೇಂದ್ರ ಸರ್ಕಾರ ಹಾಗೂ ರಾಜ್ಯ ಸರ್ಕಾರದಿಂದ ಎಷ್ಟು ನೆರವು ದೊರೆತಿರುತ್ತದೆ ; (ಗ್ರಾಮವಾರು ರೈತರ ಹೆಸರು ಸಹಿತ ವಿವರ ನೀಡುವುದು)

(ಇ) ೨೦೧೮-೧೯ ನೇ ಸಾಲಿನಲ್ಲಿ ಘೋಷಣೆ ಮಾಡಿದ ಸಾಲಮನ್ನಾ ಯೋಜನೆಯಡಿ ಈ ಕ್ಷೇತ್ರದ ಎಷ್ಟು ರೈತರ ಸಾಲ ಮನ್ನಾ ಮಾಡಲಾಗಿದೆ ; (ಗ್ರಾಮವಾರು ರೈತರ ಹೆಸರು, ಸಾಲಮನ್ನಾ ಮಾಡಿದ ರೈತರ ಹೆಸರನ್ನು ನೀಡುವುದು)

(ಈ) ರೈತರ ಅಭಿವೃದ್ಧಿಗಾಗಿ ರಾಜ್ಯ ಸರ್ಕಾರ ಹಾಗೂ ಕೇಂದ್ರ ಸರ್ಕಾರ ಜಾರಿಗೆ ತಂದಿರುವ ಯೋಜನೆಗಳಾವುವು ; (ವಿವರ ನೀಡುವುದು)

(ಉ) ಈ ಕ್ಷೇತ್ರದಲ್ಲಿ ಎಷ್ಟು ರೈತರಿಗೆ ಕೃಷಿ ಭಾಗ್ಯ ಯೋಜನೆಯಡಿ ಕೃಷಿ ಹೊಂಡ, ಪಾಲಿಥೀನ್ ಹೊದಿಕೆ ಹನಿ/ತುಂತುರು ನೀರಾವರಿ ಮಾಡಲು ಸಹಾಯ ಧನ ನೀಡಲಾಗಿದೆ ? (ಗ್ರಾಮವಾರು ರೈತವಾರು ವಿವರ ನೀಡುವುದು)

## ವಸತಿ ಯೋಜನೆಗಳು

**ಶ್ರೀ ಈ. ತುಕಾರಾಮ್ (ಸಂಡೂರ್):-**

೧೩೯ (೧೭೯) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬಸವ ವಸತಿ, ಡಾ: ಬಿ.ಆರ್ ಅಂಬೇಡ್ಕರ್ ಹಾಗೂ ವಾಜಪೇಯಿ ನಗರ ವಸತಿ ಯೋಜನೆಯಡಿ ದಿ: ೨೯-೦೫-೨೦೨೦ರ ಆದೇಶದಂತೆ ಆಯ್ಕೆಯಾಗದ ಹಾಗೂ ಆಯ್ಕೆಯಾಗಿ ವಿವಿಧ ಲಾಗಿನ್ ಹಂತದಲ್ಲಿರುವ ಮತ್ತು ನಿಗದಿತ ಅವಧಿಯಲ್ಲಿ ಮನೆ ಪ್ರಾರಂಭ ಮಾಡದೇ ಬ್ಲಾಕ್ ಮಾಡಲಾದ ಮನೆಗಳ ಸಂಖ್ಯೆ ಎಷ್ಟು : (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಬ್ಲಾಕ್ ಮಾಡಲಾದ ಫಲಾನುಭವಿಗಳಿಗೆ ಬದಲಾಗಿ ಇನ್ನಿತರ ಅರ್ಹ ಫಲಾನುಭವಿಗಳಗೆ ಮನೆಗಳನ್ನು ನೀಡಲು ಸರ್ಕಾರ ತೀರ್ಮಾನಿಸಿದೆಯೇ ;

(ಇ) ಹಾಗಿದ್ದಲ್ಲಿ, ಅಂತಹ ಫಲಾನುಭವಿಗಳನ್ನು ಯಾವ ಕಾಲಮಿತಿಯೊಳಗೆ ಆಯ್ಕೆ ಮಾಡಲಾಗುವುದು ? (ವಿವರ ನೀಡುವುದು)

## ಅಕ್ರಮ-ಸಕ್ರಮ ಯೋಜನೆ

**ಶ್ರೀ ಈ. ತುಕಾರಾಮ್ (ಸಂಡೂರ್):-**

೧೪೦ (೧೮೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸಂಡೂರು ತಾಲ್ಲೂಕಿಗೆ ಸೇರ್ಪಡೆಯಾದ ೧೪ ಇನಾಂ ಗ್ರಾಮಗಳಲ್ಲಿನ ಸಾಗುವಳಿಗಾರರಿಗೆ ಅಕ್ರಮ–ಸಕ್ರಮ ಯೋಜನೆಯ ಅಡಿಯಲ್ಲಿ ಪಟ್ಟಾ ನೀಡಲು ಅನುವಾಗುವಂತೆ ಸಂಡೂರು ಇನಾಂ ರದ್ದತಿ, ರದ್ದತಿ ಕಾಯ್ದೆ ಮತ್ತು ಭೂ ಕಂದಾಯ ಕಾಯ್ದೆ ಹಾಗೂ ಭೂ ಸುದಾರಣೆ ಕಾಯ್ದೆಗಳಿಗೆ ವಿಶೇಷ ತಿದ್ದುಪಡಿ ತರುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಹಾಗಿದ್ದಲ್ಲಿ, ಯಾವಾಗ ಜಾರಿಗೆ ತರಲಾಗುವುದು ?

## ದೇವಸ್ಥಾನಗಳ ಅಭಿವೃದ್ಧಿ ಯೋಜನೆಗಳು

**ಶ್ರೀ ಉಮಾನಾಥ ಎ. ಕೋಟ್ಯಾನ್ (ಮೂಡಬಿದ್ರೆ) :–**

೧೪೧ (೨೬) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣಕನ್ನಡ ಮತ್ತು ಉಡುಪಿ ಜಿಲ್ಲೆಯ ವ್ಯಾಪ್ತಿಯಲ್ಲಿ ಮುಜರಾಯಿ ಇಲಾಖಾ ವ್ಯಾಪ್ತಿಗೆ ಬರುವ ಹಾಗೂ ತಸ್ತಿಕ್ ಪಡೆಯುತ್ತಿರುವ ದೇವಸ್ಥಾನಗಳು ಯಾವುವು ;

(ಆ) ಆದಾಯದ ಕೊರತೆ ಇರುವ ದೇವಸ್ಥಾನಗಳು ತಮ್ಮ ದೈನಂದಿನ ಪೂಜಾ ಕೈಂಕರ್ಯಗಳಿಗೂ ಅನಾನುಕೂಲ ಸ್ಥಿತಿಯಲ್ಲಿರುವುದನ್ನು ಗಮನಿಸಿ ಆರ್ಥಿಕ ನೆರವು ನೀಡುವ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು; ಪೂಜಾ ವಿಧಿವಿಧಾನಗಳಲ್ಲಿ ದೈನಂದಿನ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿ ವರ್ಗದವರಿಗೆ ತಾತ್ಕಾಲಿಕವಾಗಿಯಾದರೂ ಕನಿಷ್ಠ ವೇತನ ನೀಡಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಸದರಿ ಜಿಲ್ಲೆಗಳಲ್ಲಿರುವ ಜಾತಿ/ಸಮುದಾಯ/ಪಾರಂಪರಿಕ ವ್ಯವಸ್ಥೆಯನ್ನು ಹೊಂದಿರುವ ದೇವಸ್ಥಾನಗಳು ವ್ಯವಸ್ಥಿತ ರೀತಿಯಲ್ಲಿ ಆಡಳಿತ ನಿರ್ವಹಿಸುವ ದಿಶೆಯಲ್ಲಿ ಸರ್ಕಾರದ ಮಾರ್ಗಸೂಚಿ ನೀತಿನಿಯಮಗಳು ಯಾವುವು ?

## ಯೋಜನೆಗಳ ಅನುಷ್ಠಾನ

**ಶ್ರೀ ಉಮಾನಾಥ ಎ. ಕೋಟ್ಯಾನ್ (ಮೂಡಬಿದ್ರೆ) :-**

೧೪೨ (೨೭) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕಳೆದ ೨ ವರ್ಷಗಳಲ್ಲಿ ವಿವಿಧ ವಸತಿ ಯೋಜನೆಗಳು ಮತ್ತು ಕೇಂದ್ರ ಸರ್ಕಾರ ಪುರಸ್ಕೃತ ವಸತಿ ಯೋಜನೆಗಳ ಮೂಲಕ ಒದಗಿಸಿರುವ ಮನೆಗಳು ಮತ್ತು ನಿವೇಶನಗಳೆಷ್ಟು ; (ಜಿಲ್ಲಾವಾರು ಪ್ರಮಾಣದ ವಿವರ ನೀಡುವುದು)

(ಆ) ಫಲಾನುಭವಿಗಳಿಗೆ ಸುಲಭಸಾಧ್ಯವಾಗಿ ಯೋಜನಾ ಸೌಲಭ್ಯ ದೊರಕಿಸಿಕೊಡುವಲ್ಲಿನ ಸರ್ಕಾರದ ಕ್ರಮ ಸ್ತುತ್ಯಾರ್ಹವಾಗಿದ್ದರೂ ಕೆಲವೊಂದು ತಾಂತ್ರಿಕ ಮತ್ತು ನಿರ್ವಹಣಾ ವ್ಯವಸ್ಥೆಯಲ್ಲಿ ತೊಂದರೆ ಕಂಡುಬರುತ್ತಿದ್ದು, ಯೋಜನಾ ಸೌಲಭ್ಯಗಳು ಫಲಾನುಭವಿಗಳನ್ನು ಸಕಾಲಿಕವಾಗಿ ತಲುಪಿಸಲು ಸರ್ಕಾರ ಕೈಗೊಂಡ ಕ್ರಮಗಳಾವುವು;

(ಇ) ಸದರಿ ಅವಧಿಯಲ್ಲಿ ವಸತಿ ಯೋಜನೆಗಳ ಅನುಷ್ಠಾನದ ಗುರಿ ಮತ್ತು ಸಾಧನೆಗಳ ವಿವರಗಳೇನು? (ಜಿಲ್ಲಾವಾರು ವಿವರ ನೀಡುವುದು)

## ಮುಜರಾಯಿ ಇಲಾಖೆ ದೇವಸ್ಥಾನಗಳು

**ಶ್ರೀ ವೆಂಕಟರಮಣಯ್ಯ ಟಿ. (ದೊಡ್ಡಬಳ್ಳಾಪುರ) :–**

೧೪೩ (೨೪೪) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಮುಜರಾಯಿ ದೇವಸ್ಥಾನಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಮುಜರಾಯಿ ಇಲಾಖೆಗೆ ಒಳಪಟ್ಟಿರುವ ದೇವಸ್ಥಾನಗಳ ಅರ್ಚಕರ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಇ) ಮುಜರಾಯಿ ಇಲಾಖೆಗೆ ಒಳಪಟ್ಟಿರುವ ದೇವಸ್ಥಾನಗಳ ತಸ್ತಿಕ್ ಪಡೆಯುವ ಅರ್ಚಕರುಗಳ ಸಂಖ್ಯೆ ಎಷ್ಟು; ಎಲ್ಲಾ ಅರ್ಚಕರುಗಳಿಗೆ ತಸ್ತಿಕ್ ಬಾಕಿ ನೀಡಲಾಗಿದೆಯೇ ?

## ಪ್ರವಾಹ ಮತ್ತು ಪರಿಹಾರ

**ಶ್ರೀ ವೆಂಕಟರಮಣಯ್ಯ ಟಿ. (ದೊಡ್ಡಬಳ್ಳಾಪುರ) :–**

೧೪೪ (೨೪೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೮–೧೯, ೨೦೧೯–೨೦ ಮತ್ತು ೨೦೨೦–೨೧ನೇ ಸಾಲಿನಲ್ಲಿ ಎಷ್ಟು ತಾಲ್ಲೂಕುಗಳು ಪ್ರವಾಹಕ್ಕೆ ಸಿಲುಕಿರುತ್ತದೆ ;

(ಆ) ಇದರಿಂದ ನಷ್ಟವಾಗಿರುವ ಪ್ರಾಣ ಹಾನಿ, ಬೆಳೆ ಹಾನಿ, ಮತ್ತು ಅಸ್ತಿ–ಪಾಸ್ತಿಗಳೇಷ್ಟು ;

(ಇ) ನಷ್ಟದ ಸಮೀಕ್ಷೆಯ ವರದಿಯನ್ನು ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಿ ಪರಿಹಾರಕ್ಕೆ ಒತ್ತಾಯಿಸಲಾಗಿದೆ ;

(ಈ) ರಾಜ್ಯ ಮತ್ತು ಕೇಂದ್ರದಿಂದ ಬಂದಿರುವ ಪರಿಹಾರ ಮೊತ್ತವೆಷ್ಟು ? (ಗ್ರಾಮ ಪಂಚಾಯತಿವಾರು ಮಾಹಿತಿ ನೀಡುವುದು)

## ಮಹಿಳಾ ಪ್ರಥಮ ದರ್ಜೆ ಕಾಲೇಜು

**ಶ್ರೀ ವೆಂಕಟರಮಣಯ್ಯ ಟಿ. (ದೊಡ್ಡಬಳ್ಳಾಪುರ) :-**

೧೪೫ (೨೪೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದೊಡ್ಡಬಳ್ಳಾಪುರ ನಗರ ಸಭೆ ವ್ಯಾಪ್ತಿಯಲ್ಲಿ ಮಹಿಳಾ ಪ್ರಥಮ ದರ್ಜೆ ಕಾಲೇಜಿಗೆ ಜಮೀನು ಮಂಜೂರು ಮಾಡಲು ನಿವೇಶನದ ಸ್ಥಳ ಗುರುತಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಜಮೀನು ಮಂಜೂರು ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ವಿವಿಧ ವಸತಿ ಯೋಜನೆಗಳು

**ಶ್ರೀ ವೆಂಕಟರಮಣಯ್ಯ ಟಿ. (ದೊಡ್ಡಬಳ್ಳಾಪುರ) :-**

೧೪೬ (೪೦೭) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳ ಅವಧಿಯಲ್ಲಿ ಅಂಬೇಡ್ಕರ್, ಇಂದಿರಾ, ಬಸವ, ನೇಕಾರರು, ಲಿಡ್ಕರ್, ಅಲೆಮಾರಿ, ವಸತಿ ಯೋಜನೆಯಡಿ ಎಷ್ಟು ಮನೆಗಳನ್ನು ಮಂಜೂರು ಮಾಡಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ೨೦೨೦–೨೧ನೇ ಸಾಲಿನಲ್ಲಿ ಅಂಬೇಡ್ಕರ್, ಇಂದಿರಾ, ಬಸವ, ನೇಕಾರರು, ಲಿಡ್ಕರ್, ಅಲೆಮಾರಿ, ವಸತಿ ಯೋಜನೆಯಡಿ ಎಷ್ಟು ಗುರಿಯನ್ನು ನಿಗಧಿ ಪಡಿಸಲಾಗಿದೆ ? (ತಾಲ್ಲೂಕುವಾರು ವಿವರ ನೀಡುವುದು)

## ಸೇತುವೆ ನಿರ್ಮಾಣ

**ಶ್ರೀ ವೆಂಕಟರೆಡ್ಡಿ ಮುದ್ನಾಳ್ (ಯಾದಗಿರಿ) :–**

೧೪೭ (೧೯೬) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಯಾದಗಿರಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಯಾದಗಿರಿಯಿಂದ ವಡಗೇರಾ ಕ್ರಾಸ್‌ನ ಭೀಮಾನದಿಯ ಮೇಲಿನ ರಸ್ತೆಯು ಪ್ರವಾಹದಿಂದ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸೇತುವೆ ಮತ್ತು ರಸ್ತೆ ನಿರ್ಮಾಣಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಸರ್ವೆ ಭೂ ದಾಖಲೆಗಳು

**ಶ್ರೀ ವೆಂಕಟರೆಡ್ಡಿ ಮುದ್ನಾಳ್ (ಯಾದಗಿರಿ) :–**

೧೪೮ (೧೯೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಯಾದಗಿರಿ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ವಡಗೇರಾ ಹೊಸ ತಾಲ್ಲೂಕು ಗ್ರಾಮಗಾಳಾಗಿ ಗುಂಡಗುರ್ತಿ, ೨ ಗೋನಾಳ ಮತ್ತು ಶಿವಪೂರ ಗ್ರಾಮಗಳು ಮರು ಸರ್ವೆಯಾಗಿದ್ದರೂ, ಸರ್ವೆ ಭೂದಾಖಲಾತಿಗಳನ್ನು ಇಲ್ಲಿಯವರೆಗೂ ಸರಿಪಡಿಸಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ತಾಲ್ಲೂಕು ಕಛೇರಿ ಪ್ರಾರಂಭ

**ಶ್ರೀ ವೆಂಕಟರೆಡ್ಡಿ ಮುದ್ನಾಳ್ (ಯಾದಗಿರಿ) :–**

೧೪೯ (೧೯೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಯಾದಗಿರಿ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ವಡಗೇರಾ ಹೊಸ ತಾಲ್ಲೂಕು ರಚನೆಯಾಗಿ ವರ್ಷಗಳು ಕಳೆದಿದ್ದರೂ, ಇಲ್ಲಿಯವರೆಗೂ ತಾಲ್ಲೂಕು ಕಛೇರಿಗಳು ಪೂರ್ಣ ಪ್ರಮಾಣದ ಎಲ್ಲಾ ಇಲಾಖೆಗಳ ಕಛೇರಿಗಳು ಪ್ರಾರಂಭವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸರ್ಕಾರವು ಕೈಗೊಂಡಿರುವ ಕ್ರಮಗಳೇನು ?

## ಹೊಸ ತಾಲ್ಲೂಕು ಕೇಂದ್ರ

**ಶ್ರೀ ವೆಂಕಟರಾವ್ ನಾಡಗೌಡ (ಸಿಂಧನೂರು) :–**

೧೫೦ (೬೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಸ್ಕಿಯನ್ನು ಹೊಸ ತಾಲ್ಲೂಕು ಕೇಂದ್ರವನ್ನಾಗಿ ಯಾವಾಗ ಘೋಷಿಸಲಾಯಿತು ;

(ಆ) ಮಸ್ಕಿಯನ್ನು ಹೊಸ ತಾಲ್ಲೂಕನ್ನಾಗಿ ಘೋಷಿಸಿದ ನಂತರ ಸಿಂಧನೂರು ತಾಲ್ಲೂಕಿನ ಕೆಲವು ಗ್ರಾಮಗಳು ಮಸ್ಕಿ ತಾಲ್ಲೂಕಿಗೆ ಸೇರ್ಪಡೆಯಾಗಿರುವುದು ನಿಜವೇ ;

(ಇ) ಹಾಗಿದ್ದಲ್ಲಿ, ಎಷ್ಟು ಗ್ರಾಮಗಳು ಸೇರ್ಪಡೆಯಾಗಿವೆ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಸಿಂಧನೂರು ತಾಲ್ಲೂಕಿನ ಗ್ರಾಮಗಳು ಮಸ್ಕಿ ತಾಲ್ಲೂಕಿಗೆ ಸೇರ್ಪಡೆಯಾಗಿರುವುದರಿಂದ ಮುಂಬರುವ ಜಿಲ್ಲಾ ಮತ್ತು ತಾಲ್ಲೂಕು ಚುನಾವಣೆಗೆ ಮರು ಹೊಂದಾಣಿಕೆ ಮಾಡಿ ಕ್ಷೇತ್ರಗಳನ್ನು ಪುನರ್ ರಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಉ) ಈ ಕ್ಷೇತ್ರಗಳನ್ನು ಪುನರ್ ರಚಿಸುವಾಗ ಸರ್ಕಾರ ಅನುಸರಿಸುವ ಮಾನದಂಡಗಳೇನು ;

(ಊ) ಹಾಗಿದ್ದಲ್ಲಿ, ಯಾವಾಗ ಕ್ಷೇತ್ರಗಳನ್ನು ಪುನರ್ ರಚಿಸಲಾಗುವುದು ? (ವಿವರ ನೀಡುವುದು)

## ಪರಿಹಾರ ಧನ ವಿತರಣೆ

**ಶ್ರೀ ಯಶವಂತರಾಯಗೌಡ ವಿಠ್ಠಲಗೌಡ ಪಾಟೀಲ್ (ಇಂಡಿ) :–**

೧೫೧ (೩೭) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ೩ ವರ್ಷಗಳಿಂದ ಸಾಲಭಾದೆ–ಬೆಳೆನಷ್ಟ–ಬರಗಾಲದಿಂದ ಆತ್ಮಹತ್ಯೆ ಮಾಡಿಕೊಂಡ ರೈತರುಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಇವುಗಳಲ್ಲಿ ಎಷ್ಟು ಪ್ರಕರಣಗಳಿಗೆ ಸರ್ಕಾರದಿಂದ ಪರಿಹಾರ ಧನ ವಿತರಿಸಲಾಗಿದೆ ; ಬಾಕಿ ಇರುವ ಪ್ರಕರಣಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಇ) ಬಾಕಿ ಇರುವ ಪ್ರಕರಣಗಳಿಗೆ ಇದುವರೆವಿಗೂ ಪರಿಹಾರ ಧನ ವಿತರಿಸದಿರಲು ಕಾರಣಗಳೇನು ;

(ಈ) ಬಾಕಿ ಇರುವ ಪ್ರಕರಣಗಳಿಗೆ ಯಾವಾಗ ಮತ್ತು ಯಾವ ಕಾಲಮಿತಿಯೊಳಗೆ ಪರಿಹಾರ ಧನ ವಿತರಿಸಲಾಗುವುದು ? (ವಿವರ ನೀಡುವುದು)

## ಗ್ರಾಮಗಳ ಸ್ಥಳಾಂತರ

**ಶ್ರೀ ಯಶವಂತರಾಯಗೌಡ ವಿಠ್ಠಲಗೌಡ ಪಾಟೀಲ್ (ಇಂಡಿ) :-**

೧೫೨ (೩೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅಕ್ಟೋಬರ್ ೨೦೨೦ರಲ್ಲಿ ಮಹಾರಾಷ್ಟ್ರ ರಾಜ್ಯದಲ್ಲಿ ಬಂದ ಭಾರಿ ಮಳೆಯಿಂದಾಗಿ ವಿವಿಧ ಜಲಾಶಯಗಳಿಂದ ಹೆಚ್ಚಿನ ಪ್ರಮಾಣದಲ್ಲಿ ನೀರನ್ನು ಭೀಮಾ ನದಿಗೆ ಹರಿಬಿಟ್ಟ ಕಾರಣದಿಂದಾಗಿ ವಿಜಯಪುರ ಜಿಲ್ಲೆಯ ಭೀಮಾ ನದಿ ತೀರದ ಹಲವಾರು ಗ್ರಾಮಗಳು ಜಲಾವೃತವಾಗಿದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ ಯಾವ ಯಾವ ಗ್ರಾಮಗಳು ಜಲಾವೃತಗೊಂಡಿದ್ದವು ;

(ಇ) ಭೀಮಾ ನದಿಯಲ್ಲಿ ಪ್ರತಿಭಾರಿ ಪ್ರವಾಹ ಉಂಟಾದಾಗ ಈ ರೀತಿ ಜಲಾವೃತಗೊಳ್ಳುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಸದರಿ ಗ್ರಾಮಗಳನ್ನು ಇದುವರೆಗೂ ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಿಸದಿರಲು ಕಾರಣಗಳೇನು ಹಾಗೂ ಸ್ಥಳಾಂತರ ಮಾಡುವ ಉದ್ದೇಶ ಸರ್ಕಾರಕ್ಕಿದೆಯೇ ; ಹಾಗಿದ್ದಲ್ಲಿ ಯಾವಾಗ ಮತ್ತು ಯಾವ ಕಾಲಮಿತಿಯೊಳಗೆ ಸ್ಥಳಾಂತರ ಮಾಡಲಾಗುವುದು, ಈ ಬಗ್ಗೆ ಸರ್ಕಾರ ಕೈಗೊಳ್ಳುವ ಕ್ರಮಗಳೇನು ; (ವಿವರ ನೀಡುವುದು) ಸದರಿ ಗ್ರಾಮಗಳಲ್ಲಿ ಪ್ರವಾಹದಿಂದಾಗಿ ಮನೆಗಳನ್ನು ಕಳೆದುಕೊಂಡವರಿಗೆ ಹಾಗೂ ಕುಸಿತ–ದುರಸ್ಥಿಗೆ ಒಳಗಾದ ಸಂತ್ರಸ್ಥರಿಗೆ ಪರಿಹಾರ ಒದಗಿಸಲಾಗಿದೆಯೇ ? (ಗ್ರಾಮವಾರು ವಿವರ ನೀಡುವುದು)

## ಕೊಳಗೇರಿಗಳ ಅಭಿವೃದ್ಧಿ

**ಶ್ರೀ ಯಶವಂತರಾಯಗೌಡ ವಿಠ್ಠಲಗೌಡ ಪಾಟೀಲ್ (ಇಂಡಿ) :–**

೧೫೩ (೩೯) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ ಜಿಲ್ಲೆಯ ಇಂಡಿ ಪಟ್ಟಣದಲ್ಲಿ ಹಲವಾರು ಕೊಳಗೇರಿ ಕಾಲೋನಿಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅವುಗಳು ಯಾವುವು ; (ಕಾಲೋನಿವಾರು ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಿಂದ ಸದರಿ ಕಾಲೋನಿಗಳ ಅಭಿವೃದ್ಧಿಗೆ ಹಾಗೂ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಮಂಜೂರು ಮಾಡಿದ ಅನುದಾನ ಎಷ್ಟು; ಕೈಗೊಂಡಿರುವ ಕಾಮಗಾರಿಗಳು ಯಾವುವು ; ಪ್ರಸ್ತುತ ಯಾವ ಹಂತದಲ್ಲಿವೆ ;

(ಇ) ಸದರಿ ಕಾಲೋನಿಗಳಲ್ಲಿ ಮೂಲಭೂತ ಸೌಕರ್ಯಗಳಿಲ್ಲದೇ ಜನರು ತೀವ್ರ ಕಷ್ಟಕರ ಪರಿಸ್ಥಿತಿಯನ್ನು ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು ? (ವಿವರ ನೀಡುವುದು)

## ಮಳೆಹಾನಿ

**ಶ್ರೀ ಯಶವಂತರಾಯಗೌಡ ವಿಠ್ಠಲಗೌಡ ಪಾಟೀಲ್ (ಇಂಡಿ) :–**

೧೫೪೪ (೪೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೦ರ ಅಕ್ಟೋಬರ್ ಮಾಹೆಯಲ್ಲಿ ಮಹಾರಾಷ್ಟ್ರ ರಾಜ್ಯದಲ್ಲಿ ಸುರಿದ ಭಾರಿ ಮಳೆಯಿಂದ ವಿವಿಧ ಜಲಾಯಶಗಳಿಂದ ಹೆಚ್ಚುವರಿ ನೀರನ್ನು ಭೀಮಾನದಿಗೆ ಹರಿಬಿಟ್ಟ ಪರಿಣಾಮ ಪ್ರವಾಹ ಉಂಟಾಗಿ ಅಪಾರ ಪ್ರಮಾಣದ ಬೆಳೆನಷ್ಟ, ಪ್ರಾಣಹಾನಿ ಹಾಗೂ ಸಾರ್ವಜನಿಕ ಆಸ್ತಿಗೆ ನಷ್ಟ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸದರಿ ನಷ್ಟದ ಪ್ರಮಾಣ ಎಷ್ಟು; (ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಇ) ರಾಜ್ಯ ಸರ್ಕಾರ ಹಾಗೂ ಕೇಂದ್ರ ಸರ್ಕಾರದಿಂದ ಮಂಜೂರು ಮಾಡಲಾದ ನಷ್ಟ ಪರಿಹಾರವೆಷ್ಟು ;

(ಈ) ಸದರಿ ಅನುದಾನದಲ್ಲಿ ಕೈಗೊಂಡಿರುವ ನಷ್ಟದ ಪರಿಹಾರ ಹಾಗೂ ಕಾಮಗಾರಿಗಳು ಯಾವುವು ; (ವಿವರ ನೀಡುವುದು)

(ಉ) ಸಂತ್ರಸ್ಥರಿಗೆ ಪರಿಹಾರ ವಿತರಿಸಲಾಗಿದೆಯೇ; ಹಾಗಿಲ್ಲದಿದ್ದಲ್ಲಿ ಯಾವಾಗ ವಿತರಿಸಲಾಗುವುದು; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

ಎಂ.ಕೆ. ವಿಶಾಲಾಕ್ಷಿ
ಕಾರ್ಯದರ್ಶಿ (ಪ್ರ)
ಕರ್ನಾಟಕ ವಿಧಾನಸಭೆ

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು-59/ಕಾ.ಸೂ. ೦ 82 – 750 ಪ್ರತಿಗಳು/02-12-2020